ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

KB 12 YEARS 2013

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 13 ಸಂಚಿಕೆ : 14
23–6–2025 ಸೋಮವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 14

### ಹಸುವಿನ ಕೆಚ್ಚಲು ಕೊಚ್ಚಿ ವಿಕೃತಿ:
## ಜಮೀನಿನಲ್ಲಿ ನರಳಿ, ನರಳಿ ಪ್ರಾಣ ಬಿಟ್ಟ ಹಸು!

**ಬೆಂಗಳೂರು:** ಎರಡು ಕುಟುಂಬಗಳ ನಡುವಿನ ಜಗಳದಿಂದಾಗಿ ಹಸುವಿನ ಕೆಚ್ಚಲು ಕತ್ತರಿಸಿದ ಘಟನೆ ದಕ್ಷಿಣ ಬೆಂಗಳೂರು ಜಿಲ್ಲೆಯ (ರಾಮನಗರ) ಸುಳಿವರ ಗ್ರಾಮದಲ್ಲಿ ನಡೆದಿದೆ.

ಹಸುವಿನ ಮಾಲೀಕ ಮರಿ ಬಸವಯ್ಯ ನೀಡಿದ ದೂರಿನ ಆಧಾರದ ಮೇಲೆ, ಆರೋಪಿ ಗುರುಸಿದ್ದಪ್ಪ ವಿರುದ್ಧ ಪ್ರಾಣಿ ಹಿಂಸೆ ತಡೆ ಕಾಯ್ದೆ ಮತ್ತು ಬಿಎನ್‌ಎಸ್‌ನ ಇತರ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ ಎಂದು ತಾವರೆಕೆರೆ ನ್ಯಾಯವ್ಯಾಪ್ತಿಯ ಪೊಲೀಸರು ತಿಳಿಸಿದ್ದಾರೆ.

ಗುರುಸಿದ್ದಪ್ಪ ಹಸುವಿನ ಕೆಚ್ಚಲು ಕತ್ತರಿಸಿದ ಶಂಕೆ ವ್ಯಕ್ತವಾಗಿದೆ. ರಕ್ತಸ್ರಾವವಾಗುತ್ತಿರುವ ಹಸುವನ್ನು ಗಮನಿಸಿದ ದಾರಿಹೋಕರು ಅದರ ಮಾಲೀಕರು ಮತ್ತು ಪಶುವೈದ್ಯರಿಗೆ ಮಾಹಿತಿ ನೀಡಿದರು. ಚಿಕಿತ್ಸೆಯ ಹೊರತಾಗಿಯೂ, ಶುಕ್ರವಾರ ಮಧ್ಯಾಹ್ನ ಹಸು ಸಾವನ್ನಪ್ಪಿದೆ. ಶವಪರೀಕ್ಷೆ ವರದಿಯ ಆಧಾರದ ಮೇಲೆ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಎರಡು ಹಸುಗಳ ನಡುವಿನ ಜಗಳ ಗಾಯಕ್ಕೆ ಕಾರಣವಾಗಿರಬಹುದು ಎಂದು ಪೊಲೀಸರು ತಿಳಿಸಿದ್ದಾರೆ. ಶವಪರೀಕ್ಷೆ ವರದಿ ಬಂದ ನಂತರ ಸಾವಿಗೆ ನಿಖರವಾದ ಕಾರಣ ತಿಳಿಯಲಿದೆ. ತನ್ನ ಹೊಲಕ್ಕೆ ಪ್ರವೇಶಿಸಿದ ನಂತರ ಗುರುಸಿದ್ದಪ್ಪ ಹಸುವಿನ ಕೆಚ್ಚಲು ಕತ್ತರಿಸಿದ್ದಾನೆ ಎಂದು ದೂರಿನಲ್ಲಿ ಆರೋಪಿಲಾಗಿದೆ. ಜನವರಿಯಲ್ಲಿ, ನಗರದ ಕಾಟನ್‌ಪೇಟ್ ಪೊಲೀಸ್ ವ್ಯಾಪ್ತಿಯ ವಿನಾಯಕ ನಗರದಲ್ಲಿ ಬಿಹಾರದ ವ್ಯಕ್ತಿಯೊಬ್ಬ ಮೂರು ಹಸುಗಳ ಕೆಚ್ಚಲಿಗೆ ಗಾಯಗೊಳಿಸಿದ್ದರು.

# ಇಂದು ಭದ್ರಾ ಡ್ಯಾಂ ಬಲದಂಡೆ ನಾಲೆ ಬಳಿ ರೈತರಿಂದ ಪ್ರತಿಭಟನೆ

**ದಾವಣಗೆರೆ:** ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕಿನ 346 ಗ್ರಾಮಗಳಿಗೆ ಮತ್ತು ಚಿಕ್ಕಮಗಳೂರು ಜಿಲ್ಲೆ ತರೀಕೆರೆ ಮತ್ತು ಅಜ್ಜಂಪುರ ತಾಲ್ಲೂಕಿನ 172 ಹಳ್ಳಿಗಳಿಗೆ ಕುಡಿಯುವ ನೀರಿನ ಸಲುವಾಗಿ ಭದ್ರಾ ಡ್ಯಾಂನಿಂದ ನೀರು ಪೂರೈಕೆ ಮಾಡುವ ಕಾಮಗಾರಿ ಸಂಪೂರ್ಣವಾಗಿ ಅವೈಜ್ಞಾನಿಕವಾಗಿದೆ ರ?ತರ ಒಕ್ಕೂಟ ಆಕ್ಷೇಪಿಸಿದೆ.

ಸದರಿ ಕಾಮಗಾರಿ ನಡೆಯುವ ಸ್ಥಳ ಬಫರ್ ಜೋನ್ ಆಗಿದ್ದು, ಯಾವುದೇ ಕಾಮಗಾರಿ ಕೈಗೊಳ್ಳುವುದು ಡ್ಯಾಂನ ಅಭದ್ರತೆಗೆ ಕಾರಣವಾಗುತ್ತದೆ. ಭದ್ರಾ ಡ್ಯಾಂ ದಾವಣಗೆರೆ ಜಿಲ್ಲೆಯ ರೈತರ ಜೀವನಾಡಿ. ಬಲದಂಡೆ ನಾಲೆ ಮೂಲಕ ದಾವಣಗೆರೆ ಜಿಲ್ಲೆಗೆ ನೀರು ಪೂರೈಕೆ ಆಗುತ್ತದೆ. ಈ ನಾಲೆ ಕಲ್ಲು ಗುಡ್ಡದ ನಡುವೆ ಹಾದು ಬಂದಿದೆ. ಈಗ ಬಲದಂಡೆ ನಾಲೆಯನ್ನು ಸೀಳಿ (ಹೊಡೆದು) ಹೊಸದುರ್ಗ–ತರೀಕೆರೆ–ಅಜ್ಜಂಪುರ ತಾಲ್ಲೂಕಿನ ಹಳ್ಳಿಗಳಿಗೆ ಬಹು ಗ್ರಾಮ ಕುಡಿಯುವ ನೀರಿನ ಯೋಜನೆ ಅಡಿಯಲ್ಲಿ ನೀರು ಪೈಪು ಅಳವಡಿಸುವ ಕಾಮಗಾರಿ ನಡೆದಿದೆ.

ಇದು ನಾಲೆ ಮಟ್ಟದಿಂದ 8 ಅಡಿ ಕೆಳಮಟ್ಟದಲ್ಲಿದ್ದು, ನೀರು ಸರಾಗವಾಗಿ ಮತ್ತು ರಭಸವಾಗಿ ಹರಿಯುವಂತೆ ಮಾಡುವ ಚಾಣಾಕ್ಷ ತಂತ್ರ ಮಾಡಲಾಗಿದೆ. ಈ ಪೈಪು ಭದ್ರಾ ನಾಲೆಗಿಂತ 8 ಅಡಿ ಕೆಳಮಟ್ಟದಲ್ಲಿರುವುದರಿಂದ ಸಹಜವಾಗಿ ನೀರು ನಮ್ಮ ಜಿಲ್ಲೆಯ ಕಡೆಗೆ ಹರಿಯುವುದಿಲ್ಲ.

**ಹೊಸದುರ್ಗ-ತರೀಕೆರೆ-ಅಜ್ಜಂಪುರ ತಾಲ್ಲೂಕುಗಳಿಗೆ ಹಿರಿಯೂರಿನ ವಾಣಿ ವಿಲಾಸ ಡ್ಯಾಂ ಸಮೀಪವಾಗಿದ್ದು, ದೂರದ ಭದ್ರಾ ಡ್ಯಾಂ ಮೇಲೆ ಈ ಸರ್ಕಾರದ ಕಣ್ಣು ಬಿದ್ದಿರುವುದು ಸೋಜಿಗದ ಸಂಗತಿಯಾಗಿದೆ.**
**ಬಹು ಗ್ರಾಮ ಕುಡಿಯುವ ನೀರು ಯೋಜನೆಯಡಿ ಹೊಸದುರ್ಗ-ತರೀಕೆರೆ-ಅಜ್ಜಂಪುರ ತಾಲ್ಲೂಕುಗಳ ಹಳ್ಳಿಗಳ ಕಡೆಯಿಂದ ಮೊದಲು ಕಾಮಗಾರಿ ಪ್ರಾರಂಭವಾಗಬೇಕಾಗಿತ್ತು. ಆದರೆ ಭದ್ರಾ ಡ್ಯಾಂ ಬುಡದಿಂದ ಕಾಮಗಾರಿ ಪ್ರಾರಂಭವಾಗಿರುವುದು ಹಲವು ಸಂಶಯಗಳಿಗೆ ಎಡೆಮಾಡಿಕೊಟ್ಟಿದೆ. ಇದರ ಹಿಂದೆ ಕಾಣದ ಕೈಗಳ ಕೈವಾಡ ಕುತಂತ್ರ ಅಡಗಿದೆ ಎಂದಿದ್ದಾರೆ.**

ಆಗ ದಾವಣಗೆರೆ ಜಿಲ್ಲೆಯ ರೈತರು ಭತ್ತದ ನಾಟಿ ಮಾಡುವುದಿರಲಿ ಇರುವ ತೋಟಗಳನ್ನು ಉಳಿಸಿಕೊಳ್ಳಲು ಸಾಧ್ಯವಾಗುವುದಿಲ್ಲ. ಇದು ಜಿಲ್ಲೆಯ ರೈತರಿಗೆ ಬರಸಿಡಿಲು ಬಡಿದಂತಾಗಿದೆ.

ರಾಜ್ಯದ ಕಾಂಗ್ರೆಸ್ ಸರ್ಕಾರ ದಾವಣಗೆರೆ ಜಿಲ್ಲೆಯ ರೈತರೊಂದಿಗೆ ಹುಡುಗಾಟಿಕೆ ಆಡುತ್ತಿದೆ. ಭದ್ರಾ ರೈತರ ಜೀವನಾಡಿ ಎಂದು ನಂಬಿದ ರೈತರನ್ನು ವಂಚಿಸಿ, ಅವರ ಕತ್ತು ಹಿಸುಕುವ ಅಮಾನವೀಯ ಕೃತ್ಯ ಇದಾಗಿದೆ.

ಸುಮಾರು 1600 ಕೋಟಿಯಷ್ಟು ಅಂದಾಜಿನ ಇಂತಹ ಬೃಹತ್ ಕಾಮಗಾರಿ ಕೈಗೊಳ್ಳುವ ಮುನ್ನ ರಾಜ್ಯದ ಕಾಂಗ್ರೆಸ್ ಸರ್ಕಾರ ಸೌಜನ್ಯಕ್ಕಾದರೂ ಭದ್ರಾ ಅಚ್ಚುಕಟ್ಟು ಪ್ರದೇಶದ ಜನಪ್ರತಿನಿಧಿಗಳ–ರೈತರ ಸಭೆ ನಡೆಸಿ, ಸಮಾಲೋಚನೆ ಮಾಡಿಲ್ಲ.

ಭದ್ರಾ ಡ್ಯಾಂ ಸುರಕ್ಷತೆ ಬಗ್ಗೆ ಸಮೀಕ್ಷೆ ನಡೆಸಿ, ಸೂಕ್ತ ಭದ್ರತೆ ಕ್ರಮಗಳನ್ನು ಕೈಗೊಳ್ಳಬೇಕು. ಡ್ಯಾಂ ನಿರ್ವಹಣೆಯ ಕ್ರೇನ್ ಗಳನ್ನು ರೀ ಕಂಡೀಷನ್ ಮಾಡಿಸಬೇಕು. ಡ್ಯಾಂ ತಳಭಾಗದ ಬಫರ್ ಜೋನ್ ಪ್ರದೇಶದಲ್ಲಿ ಯಾವುದೇ ರೀತಿಯ ಅವೈಜ್ಞಾನಿಕ ಕಾಮಗಾರಿಗಳನ್ನು ಕೈಗೊಳ್ಳಬಾರದು ಎಂದು ಕಳೆದ ಎರಡು ವರ್ಷಗಳಿಂದ ಜಿಲ್ಲಾ ರೈತರ ಒಕ್ಕೂಟದಿಂದ ಸರ್ಕಾರಕ್ಕೆ ಆಗ್ರಹಿಸಲಾಗಿದ್ದರೂ ಈ ಕಿವುಡು ಕಾಂಗ್ರೆಸ್ ಸರ್ಕಾರ ಕೇಳಿಸಿಕೊಂಡಿಲ್ಲ, ರೈತರ ಕೂಗಿಗೆ ಸ್ಪಂದಿಸಿಲ್ಲ ಎಃದು ಆರೋಪಿಸಿರು.

ಇಂದು 23ನೇ ಸೋಮವಾರ ಬೆಳಗ್ಗೆ 10 ಗಂಟೆಗೆ ಭದ್ರಾ ಡ್ಯಾಂ ಬಲದಂಡೆ ನಾಲೆ ಬಳಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ರೈತರು ಹೆಚ್ಚಿನ ಸಂಖ್ಯೆಯಲ್ಲಿ ರೊಟ್ಟಿ ಬುತ್ತಿ ಕಟ್ಟಿಕೊಂಡು ಬರಬೇಕು ಎಂದು ಕೋರಿದೆ .

# ಇರಾನ್ ಮೇಲೆ ಅಮೆರಿಕ ಬಾಂಬ್



**ವಾಷಿಂಗ್ಟನ್,ಜೂ.22:** ಇಸ್ರೇಲ್–ಇರಾನ್ ಸಂಘರ್ಷದ ನಡುವೆಯೇ ಅಮೆರಿಕ ಇರಾನ್‌ನ ಮೂರು ಅಣು ಕೇಂದ್ರಗಳ ಮೇಲೆ ಬಾಂಬ್ ದಾಳಿ ನಡೆಸಿದೆ. ಇರಾನ್‌ನ ಮೂರು ಪರಮಾಣು ಸ್ಥಾವರಗಳಾದ ಫೋರ್ಡೋ, ನಟಾಂಜ್ ಮತ್ತು ಎಸ್ಫಹಾನ್ ಮೇಲೆ ದಾಳಿ ನಡೆಸಲಾಗಿದೆ.

ಇರಾನ್‌ನ ಪರಮಾಣು ಸ್ಥಾವರಗಳ ಮೇಲೆ ದಾಳಿ ನಡೆಸಿರುವ ಬಗ್ಗೆ ಅಮೆರಿಕ ಅಧ್ಯಕ್ಷ ಟ್ರಂಪ್ ಮಾಹಿತಿ ನೀಡಿದ್ದು, ಇರಾನ್‌ನ ಮೂರು ಅಣುಕೇಂದ್ರಗಳ ಮೇಲೆ ಯಶಸ್ವಿ ಬಾಂಬ್ ದಾಳಿ ನಡೆಸಲಾಗಿದೆ. ದಾಳಿ ನಡೆಸಿದ ಅಮೆರಿಕದ ಎಲ್ಲ ವಿಮಾನಗಳು ಇರಾನ್ ವಾಯು ಪ್ರದೇಶದಿಂದ ಸುರಕ್ಷಿತವಾಗಿ ಹೊರಗೆ ಬಂದಿವೆ. ಅಣುಕೇಂದ್ರದ ಮೇಲೆ ಪೂರ್ಣಪ್ರಮಾಣದ ಫೆಲೋಡ್ ಹೊಂದಿದ ಬಾಂಬ್ ದಾಳಿ ನಡೆಸಲಾಗಿದೆ ಎಂದು ಅವರು ಹೇಳಿದ್ದಾರೆ.

ಇರಾನ್ ಮೇಲೆ ಅಮೆರಿಕ ಬಾಂಬ್ ದಾಳಿ ನಡೆಸಿದ ನಂತರ ದೇಶವನ್ನುದ್ದೇಶಿಸಿ ಮಾತನಾಡಿದ ಅಮೆರಿಕ, ಅಧ್ಯಕ್ಷ ಟ್ರಂಪ್ ಇರಾನ್‌ನ ಪರಮಾಣು ಸಾಮರ್ಥ್ಯ ನಾಶಪಡಿಸುವುದು ಮತ್ತು ವಿಶ್ವದ ನಂ.1 ಭಯೋತ್ಪಾದನೆ ಪ್ರಾಯೋಜಿಸುವ ರಾಷ್ಟ್ರದಿಂದ ಉಂಟಾಗುವ ಪರಮಾಣು ಬೆದರಿಕೆಯನ್ನು ನಿಲ್ಲಿಸುವುದು ದಾಳಿಯ ಪ್ರಮುಖ ಉದ್ದೇಶವಾಗಿತ್ತು ಎಂದು ಹೇಳಿದ್ದಾರೆ.

## ಟ್ರಂಪ್ ಹೊಗಳಿದ ನೆತನ್ಯಾಹು

ಇರಾನ್‌ನ ಪರಮಾಣು ಕೇಂದ್ರಗಳ ಮೇಲೆ



ಅಮೆರಿಕ ನಡೆಸಿರುವ ಬಾಂಬ್ ದಾಳಿ ನಡೆಸಿರುವುದನ್ನು ಇಸ್ರೇಲ್‌ನ ಪ್ರಧಾನಿ ಬೆಂಜಮಿನ್ ನೆತನ್ಯಾಹು ಪ್ರಶಂಸಿಸಿದ್ದು, ಅಮೆರಿಕ ಅಧ್ಯಕ್ಷರ ನಡೆಯನ್ನು ಹೊಗಳಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ವೀಡಿಯೋ ಪೋಸ್ಟ್ ಹಂಚಿಕೊಂಡಿರುವ ನೆತನ್ಯಾಹು, ಶಕ್ತಿಯ ಮೂಲಕವು ಶಾಂತಿ ಸ್ಥಾಪಿಸಬಹುದು ಎಂಬುದಕ್ಕೆ ಇದು ಸಾಕ್ಷಿಯಾಗಿದೆ. ಮೊದಲು ಶಕ್ತಿ ಪ್ರದರ್ಶನವಾದರೆ ನಂತರ ಶಾಂತಿ ನೆಲೆಸುತ್ತದೆ ಎಂದು ಅವರು ಹೇಳಿದ್ದಾರೆ. ಶಾಂತಿ ಸ್ಥಾಪಿಸುವಲ್ಲಿ ಅಮೆರಿಕ ಅಧ್ಯಕ್ಷ ಟ್ರಂಪ್ ಅವರು ದಿಟ್ಟ ನಿರ್ಧಾರ ಕೈಗೊಂಡಿದ್ದಾರೆ ಇದು ಅತ್ಯಂತ ಯಶಸ್ವಿ ದಾಳಿಯಾಗಿದೆ ಎಂದು ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ.

# ತನಿಖಾ ಸಂಸ್ಥೆಗಳ ಅಧಿಕಾರಿಗಳೆಂದು ಬೆದರಿಕೆ, ಜಾಗರೂಕತೆಗೆ ಸಲಹೆ

**ದಾವಣಗೆರೆ:** ಇತ್ತೀಚಿನ ದಿನಗಳಲ್ಲಿ ಹೆಚ್ಚಾಗಿ ಯುವಕರು ಮತ್ತು ಯುವತಿಯರು ದುಶ್ಚಟಗಳ ದಾಸರಾಗುತ್ತಿದ್ದಾರೆ. ಮಾತ್ರವಲ್ಲದೆ ಕೆಲವು ಕಿಡಿಗೇಡಿಗಳು ನಾವು ಪೊಲೀಸ್, ಸಿಬಿಐ, ಇಡಿ ಅಧಿಕಾರಿಗಳೆಂದು ಹೇಳಿಕೊಂಡು ಸಾರ್ವಜನಿಕರ ವೈಯಕ್ತಿಕ ಮಾಹಿತಿ ಪಡೆಯುತ್ತಿದ್ದು, ಈ ಬಗ್ಗೆ ಸಾರ್ವಜನಿಕರು ಜಾಗರೂಕರಾಗಿ ಇರಬೇಕೆಂದು ಆರ್‌ಎಂಸಿ ಪೊಲೀಸ್ ಠಾಣೆಯ ಪಿಐ ಬಾಲಚಂದ್ರ ನಾಯಕ್ ಸಲಹೆ ನೀಡಿದರು.

ಅವರಗೆರೆ ಗ್ರಾಮದ ಶೇಖರಪ್ಪ ಬಡಾವಣೆಯಲ್ಲಿ ಇರುವ ಗಣೇಶ್ ದೇವಸ್ತಾನದ ಮುಂಭಾಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ ರವರ ಸೂಚನೆ ಮೇರೆಗೆ ಅರ್ ಎಂ ಸಿ ಪೊಲೀಸ್ ಠಾಣೆ ಮತ್ತು ಗ್ರಾಮಸ್ಥರ ಸಹಕಾರದೊಂದಿಗೆ ಆಯೋಜಿಸಲಾಗಿದ್ದ ನಾಗರಿಕರಿಗೆ ಕಾನೂನು ಮತ್ತು ಸುವ್ಯವಸ್ಥೆ ಕುರಿತು ಮಾಹಿತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಪೊಲೀಸ್ ಸೇರಿದಂತೆ ವಿವಿಧ ತನಿಖಾ ಸಂಸ್ಥೆಗಳ ಅಧಿಕಾರಿಗಳೆಂದು ಸಾರ್ವಜನಿಕವಾಗಿ ಬೆದರಿಕೆ ಹಾಕಿ



ನಿಮ್ಮ ವೈಯಕ್ತಿಕ ಮಾಹಿತಿ ಪಡೆದು ನಾವು ಹೇಳಿದಷ್ಟು ದಂಡ ಕಟ್ಟಿ ಇಲ್ಲವೇ ನಿಮ್ಮ ಮೇಲೆ ಉಗ್ರ ಕ್ರಮ ಕೈಗೊಳ್ಳುವ ಜತೆ ನಿಮ್ಮನ್ನು ಜೈಲಿಗೆ ಕಳಿಸುತ್ತೇವೆ ಎಂದು ಹೆದರಿಸಿ ನಿಮ್ಮಿಂದ ಲಕ್ಷಾಂತರ ರೂಪಾಯಿ ಹಣ ಪಡೆಯುತ್ತಾರೆ. ಈ ಬಗ್ಗೆ ನೀವುಗಳು ಹೆದರದೇ ಜಾಗರೂಕತೆಯಿಂದ ಅವರೊಂದಿಗೆ ವರ್ತಿಸಬೇಕೆಂದು ಕಿವಿಮಾತು ಹೇಳಿದರು.

ಇದಲ್ಲದೆ ಸಾರ್ವಜನಿಕರು ಬ್ಯಾಂಕಿನಿಂದ ಹಣ ತರುವಾಗ ನಿಮ್ಮನ್ನು ಹಿಂಬಾಲಿಸಿ ನಿಮ್ಮ ಗಮನವನ್ನು ಬೇರೆಡೆಗೆ ಸೆಳೆದು ನಿಮ್ಮನ್ನು ಯಾಮಾರಿಸಿ ಹಣವನ್ನು ಲಪಟಾಯಿಸುವ ದುಷ್ಟರೂ ಹುಟ್ಟಿಕೊಂಡಿದ್ದಾರೆ. ಇಂತಹ ಸಂದರ್ಭಗಳಲ್ಲಿ ದುಷ್ಟರನ್ನು ಸೆದೆ ಬಡಿಯಲು ನಾಗರೀಕರ ಸಹಕಾರ ಪೊಲೀಸ್ ಇಲಾಖೆಗೆ ತುಂಬಾ ಅಗತ್ಯವಾಗಿದೆ ನಾಗರಿಕರೆಲ್ಲರೂ ಕಾನೂನಿನ ನೆರವನ್ನ ಪಡೆದುಕೊಂಡು ಸುರಕ್ಷಿತರಾಗಿ ಸಮ ಸಮಾಜದ ಬಾಳ್ವಿಕೆಯಲ್ಲಿ ತಾವೆಲ್ಲರೂ ಸಂತೋಷದಿಂದ ಜೀವಿಸಬೇಕೆಂದು ಕರೆ ನೀಡಿದರು.

ಈ ವೇಳೆ ಅರ್‌ಎಂಸಿ ಪೊಲೀಸ್ ಠಾಣೆಯ ಪಿಎಸ್ಐ ಚೇತನ್ ಬಿರಾದಾರ ಮಾತನಾಡಿದರು. ವೇದಿಕೆಯಲ್ಲಿ ರುದ್ರಪ್ಪ, ಕೆ.ಎಂ.ರೇವಣಸಿದ್ದಪ್ಪ, ಎಲ್.ಕೆ.ಕರೇಗೌಡ್ರು, ಹೆಚ್. ಜಿ.ಉಮೇಶ್ ಅವರಗೆರೆ, ಗೋಪಿ ನಾಯ್ಕ, ವಾಸು ಅವರಗೆರೆ, ಇಟ್ಟಿಗೆ ಉಮೇಶ್, ರಂಗನಾಥ್ ನರೇಗಾ, ಹನುಮಂತಪ್ಪ, ಎನ್.ಟಿ.ತಿಪ್ಪೇಸ್ವಾಮಿ, ನ್ಯಾಷನಲ್ ಬಾಡಿ ಬಿಲ್ಡರ್ ಕರಿಬಸಪ್ಪ, ಬಸವರಾಜ್, ಅರ್.ಅಣ್ಣೇಶ್ ನಾಯ್ಕ, ಸಿದ್ದೇಶ್ ಇತರರಿದ್ದರು.

### ಅಧಿಕಾರಿಗಳು, ಶಾಸಕರೊಂದಿಗೆ ಸಭೆ | ಅಧಿಕಾರಿಗಳು, ಸಿಬ್ಬಂದಿ ಒಳಗೊಂಡ ತಂಡ ರಚನೆ
# ಪ್ರಕೃತಿ ವಿಕೋಪ ತಡೆಗಟ್ಟಲು ಜಿಲ್ಲಾಡಳಿತ ಸನ್ನದ್ಧವಾಗಿದೆ: ಸಚಿವ ಜಾರ್ಜ್

**ಚಿಕ್ಕಮಗಳೂರು :** ಮಳೆಗಾಲದಲ್ಲಿ ಅನಾಹುತಗಳನ್ನು ತಡೆಗಟ್ಟಿ ಮುಂಜಾಗ್ರತಾ ಕ್ರಮ ಕೈಗೊಳ್ಳಲು ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನೊಳಗೊಂಡ ತಂಡಗಳನ್ನು ರಚಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

ಮಳೆಗಾಲ ಆರಂಭವಾಗಿರುವ ಹಿನ್ನಲೆಯಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶನಿವಾರ ನಡೆದ ಅಧಿಕಾರಿಗಳ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಮಳೆ ಸೇರಿದಂತೆ ಪ್ರಕೃತಿ ವಿಕೋಪಗಳನ್ನು ಎದುರಿಸಲು ಜಿಲ್ಲಾಡಳಿತ ಸನ್ನದ್ಧವಾಗಿದೆ ಎಂದರು.

ಜಿಲ್ಲೆಯೂ ಸೇರಿದಂತೆ ರಾಜ್ಯದಲ್ಲಿ ಈ ಬಾರಿ ಅವಧಿಗೂ ಮುನ್ನ ಮಳೆ ಆರಂಭವಾಗಿದ್ದು, ಮಳೆ ಹಾಗೂ ಗಾಳಿಗೆ ಹಲವೆಡೆ ಅನಾಹುತ ಸಂಭವಿಸಿದೆ. ಗಾಳಿ ಮಳೆಗೆ ಜಿಲ್ಲೆಯಲ್ಲಿ ಮೃತಪಟ್ಟ ಜಿಲ್ಲೆಯ ಇಬ್ಬರು ವ್ಯಕ್ತಿಗಳ ಕುಟುಂಬಗಳಿಗೆ ಪರಿಹಾರ ನೀಡಲಾಗಿದೆ ಎಂದರು.




ವಾಡಿಕೆಯ ಪ್ರಕಾರ ಜೂನ್ 5 ರಂದು ಮಳೆ ಆರಂಭವಾಗಬೇಕಾಗಿತ್ತು. ಆದರೆ, ಮೇ ತಿಂಗಳ ಮೊದಲ ವಾರದಿಂದಲೇ ಮಳೆ ಆರಂಭವಾಗಿದೆ. ಮಳೆ ಬಂದಿದ್ದರಿಂದ ಎಲ್ಲರಿಗೂ ಒಳ್ಳೆಯದಾಗಿದೆ. ಜತೆಗೆ ಅನಾಹುತವೂ ಸಂಭವಿಸಿದೆ. ಭಾರೀ ಮಳೆ ಆಗುವ ಸಂದರ್ಭದಲ್ಲಿ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲು ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಒಳಗೊಂಡ ವಿಶೇಷ ತಂಡಗಳನ್ನು ರಚನೆ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು.

ತಾವು ಜಿಲ್ಲಾ ಉಸ್ತುವಾರಿ ಸಚಿವರಾದ ನಂತರ ಈ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಚಿಕ್ಕಮಗಳೂರು ಜಿಲ್ಲೆಯಲ್ಲಿ ತೆಗೆದುಕೊಳ್ಳಲಾಗಿದೆ. ಅತಿವೃಷ್ಠಿ ಎದುರಿಸಲು ಸಿಬ್ಬಂದಿಗಳ ಜತೆಗೆ ಬೇಕಾದ ಸಲಕರಣೆಗಳನ್ನು ಇಟ್ಟುಕೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ಜಿಲ್ಲಾಧಿಕಾರಿಗಳು, ಜಿಲ್ಲಾ ರಕ್ಷಣಾಧಿಕಾರಿ, ಜಿಲ್ಲಾ ಪಂಚಾಯ್ತಿ ಸಿಇಓ ಉಸ್ತುವಾರಿ ನೋಡಿಕೊಳ್ಳುತ್ತಿದ್ದಾರೆ ಎಂದರು.

ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಆಗಬಾರದೆಂಬ ಉದ್ದೇಶದಿಂದ ಲೈನ್‌ಮೆನ್‌ಗಳ ಜತೆಗೆ 110 ಮಂದಿ ಗ್ಯಾಂಗ್ ಮೆನ್‌ಗಳನ್ನು ಕೊಡಲಾಗಿದೆ. ಅವರಿಗೆ ಅಗತ್ಯ ವಾಹನಗಳನ್ನು ಸಹ ನೀಡಲಾಗಿದೆ. ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸಿಕೊಳ್ಳಲಾಗಿದ್ದು, ದಿನದ 24 ಗಂಟೆ ಕೆಲಸ ಮಾಡುತ್ತಿದ್ದಾರೆ ಎಂದರು.

ರಾಷ್ಟ್ರೀಯ ಹೆದ್ದಾರಿ ಭಾಗದಲ್ಲಿ ಭೂ ಕುಸಿತ ಉಂಟಾಗುತ್ತಿದೆ. ಕೆಲವೆಡೆ ಮರಗಳನ್ನು ತೆಗೆಯಲು ಅರಣ್ಯ ಇಲಾಖೆಯವರು ಅನುಮತಿ ನೀಡುತ್ತಿಲ್ಲ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಸಭೆಯಲ್ಲಿ ಹೇಳಿದರು. ಹೀಗಾಗಿ ಕೆಲವು ಸಂದರ್ಭದಲ್ಲಿ ನಿಯಮಗಳನ್ನು ಸರಳಗೊಳಿಸಬೇಕೆಂದು ಸೂಚನೆ ನೀಡಿದ್ದೇನೆ ಎಂದು ಹೇಳಿದರು.

ಇದಕ್ಕೂ ಮುನ್ನ ನಡೆದ ಸಭೆಯಲ್ಲಿ ಸಚಿವ ಕೆ.ಜೆ. ಜಾರ್ಜ್ ಅವರು, ಮಳೆಗಾಲ ಮುಗಿಯುವವರೆಗೆ ಅಧಿಕಾರಿಗಳು ಹೆಚ್ಚು ಎಚ್ಚರಿಕೆ ಮತ್ತು ಜವಾಬ್ದಾರಿಯಿಂದ ಕೆಲಸ ಮಾಡಬೇಕು ಎಂದು ಸೂಚಿಸಿದರು.

## ಅಕ್ರಮ ಗಣಿಗಾರಿಕೆ, ಎಚ್.ಕೆ ಪಾಟೀಲ್ ಪತ್ರ ನಾಟಕ

**ಮಂಡ್ಯ,ಜೂ.22:** ಅಕ್ರಮ ಗಣಿಗಾರಿಕೆ ಬಗ್ಗೆ ಕ್ರಮಕೈಗೊಳ್ಳುವಂತೆ



ಆಗ್ರಹಿಸಿ ಕಾನೂನು ಹಾಗೂ ಸಂಸದೀಯ ಸಚಿವ ಎಚ್.ಕೆ ಪಾಟೀಲ್ ಈಗ ಪತ್ರ ಬರೆದಿರುವುದು ಒಂದು ನಾಟಕ ಅಷ್ಟೆ. ಪ್ರಸಕ್ತ ವಿಚಾರಗಳನ್ನು ಬೇರೆಡೆಗೆ ಸೆಳೆಯಲು ಈ ಪತ್ರ ಬರೆಯಲಾಗಿದೆ ಅಷ್ಟೆ ಎಂದು ಹೇಳಿರುವ ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಅವರು ಎಚ್.ಕೆ ಪಾಟೀಲ್ ಅವರು ಇಷ್ಟು ದಿನ ನಿದ್ದೆ ಮಾಡುತ್ತಿದ್ದರಾ. ಈಗ ನಿದ್ದೆಯಿಂದ ಎದ್ದಿದ್ದಾರಾ ಎಂದು ಪ್ರಶ್ನಿಸಿದ್ದಾರೆ.

ಮಂಡ್ಯದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಕುಮಾರಸ್ವಾಮಿ ಅವರು, ಎಚ್.ಕೆ ಪಾಟೀಲ್ ಅವರು 2015–16ರಲ್ಲೂ ಇದೇ ರೀತಿ ಪತ್ರ ಬರೆದಿದ್ದರು. ಇವರೆ ಸಚಿವ ಸಂಪುಟದ ಉಪಸಮಿತಿಯ ಅಧ್ಯಕ್ಷರಾಗಿದ್ದರು. ವರದಿ ಕೊಟ್ಟು ಎಟ್ಟು ವರ್ಷ ಆಗಿದೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 2 ವರ್ಷದಿಂದ ಇವರು ಏನು ಮಾಡುತ್ತಿದ್ದರು. ಈಗ ಏಕೆ ಈ ವಿಚಾರ ಎತ್ತುತ್ತಿದ್ದಾರೆ ಎಲ್ಲವೂ ಗೊತ್ತಿದೆ.

## ತುಮಕೂರು ಜಿಲ್ಲೆ ಹೆಸರನ್ನು ಯಾವುದೇ ಕಾರಣಕ್ಕೂ ಬದಲಿಸಲ್ಲ: ಜಿ. ಪರಮೇಶ್ವರ್ ಯೂ–ಟರ್ನ್

**ಬೆಂಗಳೂರು:** ತುಮಕೂರು ಜಿಲ್ಲೆ ಹೆಸರನ್ನು ಯಾವುದೇ ಕಾರಣಕ್ಕೂ ಬದಲಿಸಲ್ಲ ಎಂದು ಗೃಹ ಸಚಿವ ಡಾ.ಜಿ. ಪರಮೇಶ್ವರ ಅವರು ಶನಿವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಕಲೆ ಮತ್ತು ಸಂಸ್ಕೃತಿ ವಿಭಿನ್ನವಾಗಿದೆ, ಅದರ ಬಗ್ಗೆ ನಾವು ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ. ತುಮಕೂರನ್ನು ಬೆಂಗಳೂರು ಉತ್ತರ ಎಂದು ಮರುನಾಮಕರಣ ಮಾಡುವುದಿಲ್ಲ. ತುಮಕೂರು ವೇಗವಾಗಿ ಬೆಳೆಯುತ್ತಿದೆ ಎಂಬುದು ನಿಜ. ನಮ್ಮ ಮೆಟ್ರೋ ಜಾಲವನ್ನು ಜಿಲ್ಲೆಗೆ ವಿಸ್ತರಿಸಲು ಮತ್ತು ಇಲ್ಲಿಗೆ ಹೆಚ್ಚಿನ ಕೈಗಾರಿಕೆಗಳನ್ನು ಆಹ್ವಾನಿಸಲು ನಮ್ಮ ಪ್ರಯತ್ನಗಳು ಮುಂದುವರಿಯುತ್ತವೆ ಎಂದು ಹೇಳಿದರು. ತುಮಕೂರು ಬೆಂಗಳೂರಿನ ದಕ್ಷಿಣ ಆಗಬಹುದು ಎಂದು ಕೇಳಿದಾಗ ನಾನು ಆದರೂ ಆಗಬಹುದು ಎಂದು ಹೇಳಿದ್ದೆ. ಆದರೆ ತುಮಕೂರಿನ ಜಿಲ್ಲೆಯ ಹೆಸರು ಬದಲಾಯಿಸುತ್ತೇವೆಂದು ಹೇಳಿರಲಿಲ್ಲ. ತುಮಕೂರಿನ ಹೆಸರನ್ನು ಯಾವುದೇ ಕಾರಣಕ್ಕೂ ಬದಲಾಯಿಸುವುದಿಲ್ಲ. ಅದಕ್ಕೆ ಅದರದೇ ಆದಂತ ಇತಿಹಾಸ ಸಂಸ್ಕೃತಿ ಇದೆ. ಯಾವುದೇ ಕಾರಣಕ್ಕೂ ತುಮಕೂರು ಜಿಲ್ಲೆಯ ಹೆಸರು ಬದಲಾಯಿಸುವುದಿಲ್ಲ ಎಂದು ತಿಳಿಸಿದರು.

### ಅಣ್ವಸ್ತ್ರ ಕೇಂದ್ರಗಳ ಮೇಲೆ ದಾಳಿ: ಅಮೆರಿಕಾ ಎಚ್ಚರಿಕೆಗೆ ಬಗ್ಗದ ಇರಾನ್;
# ಇಸ್ರೇಲ್ ಮೇಲೆ ಬ್ಯಾಲಿಸ್ಟಿಕ್ ಮಿಸೈಲ್‌ಗಳ ಸುರಿಮಳೆ, 23ಕ್ಕೂ ಹೆಚ್ಚು ಜನರಿಗೆ ಗಾಯ

**ಟೆಹರಾನ್:** ತನ್ನ ಅಣ್ವಸ್ತ್ರ ಕೇಂದ್ರಗಳ ಮೇಲೆ ಅಮೆರಿಕಾ ದಾಳಿ ಮಾಡಿ, ಖಡಕ್ ಎಚ್ಚರಿಕೆ ನೀಡಿದ ಬಳಿಕವೂ ಜಗ್ಗದ ಇರಾನ್, ಇಸ್ರೇಲ್ ಮೇಲಿನ ತನ್ನ ದಾಳಿಯನ್ನು ಮತ್ತೆ ಮುಂದುವರೆಸಿದೆ.

ಅಮೆರಿಕ ದಾಳಿ ಬಳಿಕ ಇರಾನ್‌ನ ಮೊದಲ ಪ್ರತೀಕಾರ ಇದಾಗಿದ್ದು, ಇಸ್ರೇಲ್‌ನ 10ಕ್ಕೂ ಹೆಚ್ಚು ಸ್ಥಳಗಳ ಮೇಲೆ 30ಕ್ಕೂ ಅಧಿಕ ಖಂಡಾಂತರ ಕ್ಷಿಪಣಿಗಳಿಂದ ದಾಳಿ ನಡೆಸಿದೆ.

ಇಸ್ರೇಲ್‌ನ ಹೈಫಾ ನಗರ, ರಾಜಧಾನಿ ಟೆಲ್ ಅವೀವ್, ಜೆರುಸಲೆಂ ಸೇರಿದಂತೆ 10ಕ್ಕೂ ಹೆಚ್ಚು ನಗರಗಳ ಮೇಲೆ ಮಿಸೈಲ್ ಮಳೆ ಸುರಿಸಿದೆ.

ಇರಾನ್‌ನ ಮಿಸೈಲ್‌ಗಳು ನಗರಕ್ಕೆ ಅಪ್ಪಳಿಸುತ್ತಿದ್ದಂತೆ ಇಸ್ರೇಲ್‌ನ ಕೆಲವು ಭಾಗಗಳಲ್ಲಿ ಸೈರನ್ ಮೊಳಗಿದ್ದು, ನಾಗರಿಕರನ್ನು ಸುರಕ್ಷಿತ ಸ್ಥಳಗಳು ಮತ್ತು ಬಂಕರ್‌ಗಳಿಗೆ ಸ್ಥಳಾಂತರಿಸಲಾಗಿದೆ.

ಮುಂದಿನ ಸೂಚನೆ ಬರುವವರೆಗೂ



ಬಂಕರ್‌ಗಳಿಂದ ಹೊರಗೆ ಬರದಂತೆ ಸೂಚಿಸಲಾಗಿದೆ. ನಾಗರಿಕರನ್ನು ಗುರಿಯಾಗಿಸಿ ಇರಾನ್ ನಡೆಸಿದ ಈ ದಾಳಿಯಲ್ಲಿ 23ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ ಎಂದು ವರದಿಗಳು ತಿಳಿಸಿವೆ.

ಟೆಲ್ ಅವಿವ್‌ನ ರಾಮತ್ ಅವಿವ್ ಪ್ರದೇಶದಲ್ಲಿ ಹಲವಾರು ಕಟ್ಟಡಗಳು ತೀವ್ರವಾಗಿ ಹಾನಿಗೊಳಗಾಗಿವೆ, ಅಪಾರ್ಟ್‌ಮೆಂಟ್ ಕಟ್ಟಡಗಳ ಮುಂಭಾಗಗಳಲ್ಲಿ ದೊಡ್ಡ ದೊಡ್ಡ ರಂಧ್ರಗಳು ಸೃಷ್ಟಿಯಾಗಿವೆ. ಹಾನಿಗೊಳಗಾದ ಮನೆಗಳ ಪೈಕಿ ಒಂದು ಕಟ್ಟಡವನ್ನು ಕೆಡವಿ, ಪುನರ್ ನಿರ್ಮಾಣ ಮಾಡಲು ನಿರ್ಧರಿಸಲಾಗಿತ್ತು. ಹೀಗಾಗಿ ಕಟ್ಟಡದಲ್ಲಿ ಯಾವುದೇ ನಿವಾಸಿಗಳಿರಲಿಲ್ಲ. ಪ್ರಸ್ತುತ ಆಶ್ರಯದಲ್ಲಿರುವವರೆಲ್ಲೂ ಸುರಕ್ಷಿತ ಹಾಗೂ ಆರೋಗ್ಯವಾಗಿದ್ದಾರೆ ಸ್ಥಳೀಯ ಪೊಲೀಸರು ಹೇಳಿದ್ದಾರೆ.

ಕ್ಷಿಪಣಿ ದಾಳಿಗಳು ಇಸ್ರೇಲ್‌ನ ಬೆನ್ ಗುರಿಯನ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣ, ಸಂಶೋಧನಾ ಸೌಲಭ್ಯಗಳು ಮತ್ತು ಬೆಂಬಲ ನೆಲೆಗಳು ಮತ್ತು ವಿವಿಧ ಹಂತದ ನಿಯಂತ್ರಣ ಮತ್ತು ಕಮಾಂಡ್ ಕೇಂದ್ರಗಳನ್ನು ಗುರಿಯಾಗಿಸಲಾಗಿದೆ ಎಂದು ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಹೇಳಿದೆ.

ಇರಾನ್‌ನ ವಿದೇಶಾಂಗ ಸಚಿವಾಲಯ ಹೇಳಿಕೆ ನೀಡಿ, ಅಮೆರಿಕವು ಭಾನುವಾರ ಇರಾನ್ ರಾಷ್ಟ್ರದ ಪರಮಾಣು ಕೇಂದ್ರಗಳನ್ನು ಹೊಡೆದುರುಳಿಸುವ ಮೂಲಕ "ಇರಾನ್ ವಿರುದ್ಧ ಅಪಾಯಕಾರಿ ಯುದ್ಧ"ವನ್ನು ಪ್ರಾರಂಭಿಸಿದೆ ಎಂದು ಹೇಳಿದೆ.

ರಾಜತಾಂತ್ರಿಕ ಪ್ರಕ್ರಿಯೆಯ ನಡುವೆಯೇ ರಾಜತಾಂತ್ರಿಕತೆಗೆ ದ್ರೋಹ ಬಗೆದದ್ದು ಅಮೆರಿಕ ಎಂಬುದನ್ನು ಇಡೀ ವಿಶ್ವ ಮರೆಯಬಾರದು" ಎಂದು ತಿಳಿಸಿದೆ.

ಇಸ್ರೇಲ್ ಅನ್ನು "ಜನಾಂಗೀಯ ಹತ್ಯೆ ಮತ್ತು ಕಾನೂನುಬಾಹಿರ" ಎಂದು ಬಣ್ಣಿಸಿರುವ ಅಮೆರಿಕಾ ಹೇಳಿಕೆಯು, "ಇರಾನ್ ವಿರುದ್ಧ ಅಪಾಯಕಾರಿ ಯುದ್ಧ"ವನ್ನು ಪ್ರಾರಂಭಿಸಿದೆ. ಅಮೆರಿಕಾದ ಈ ದಾಳಿಯು ವಿಶ್ವಸಂಸ್ಥೆಯ ಮತ್ತು ಅಂತರರಾಷ್ಟ್ರೀಯ ಕಾನೂನಿನ ಉಲ್ಲಂಘನೆಯಾಗಿದೆ . ಅಮೆರಿಕಾ "ಈ ಘೋರ ಅಪರಾಧದ ಗಂಭೀರ ಪರಿಣಾಮಗಳು ಮತ್ತು ಭೀಕರ ಪರಿಣಾಮಗಳಿಗೆ ಸಂಪೂರ್ಣ ಜವಾಬ್ದಾರಿಯನ್ನು ಹೊಂದಿದೆ ಎಂದು ಹೇಳಿದೆ.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಇದು ಮತ್ತೊಂದು ಚೈತನ್ಯದಾಯಕ ದಿನವಾಗಿರುತ್ತದೆ ಮತ್ತು ಅನಿರೀಕ್ಷಿತ ಲಾಭಗಳನ್ನು ನಿರೀಕ್ಷಿಸಬಹುದು. ನಿಮ್ಮ ವಿಪರೀತ ಶಕ್ತಿ ಮತ್ತು ಪ್ರಚಂಡ ಉತ್ಸಾಹ ಅನುಕೂಲಕರ ಫಲಿತಾಂಶಗಳನ್ನು ತರುತ್ತದೆ ಹಾಗೂ ಮನೆಯ ಉದ್ವಿಗ್ನತೆಗಳನ್ನು ಶಮನ ಕಾಣಿಸುತ್ತದೆ ನೀವು ಇಂದು ನೈಸರ್ಗಿಕ ಸೌಂದರ್ಯದಿಂದ ವಿಸ್ಮಯಗೊಳ್ಳುವ ಸಾಧ್ಯತೆಯಿದೆ. ನೀವು ಕೆಲಸ ಮಾಡುವ ಬಗ್ಗೆ ಖಚಿತವಾಗಿಲ್ಲದಿದ್ದರೆ ಯಾವ ಭರವಸೆಯನ್ನೂ ನೀಡಬೇಡಿ.

### ವೃಷಭ ರಾಶಿ

ನೀವು ಇದು ಒಳ್ಳೆಯ ಆರೋಗ್ಯ ಹೊಂದಿರುವುದರಿಂದ ಅದು ನಿಮಗೆ ಯಶಸ್ಸು ನೀಡುವ ಸಾಧ್ಯತೆಯಿದೆ. ಆದರೆ ನಿಮ್ಮ ಶಕ್ತಿಯನ್ನು ನಾಶಪಡಿಸುವ ಎಲ್ಲವನ್ನೂ ನೀವಿಂದು ತಪ್ಪಿಸಬೇಕು. ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚುಮಾಡಬಹುದು ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಯಾರಾದರೂ ನಿಮ್ಮನ್ನು ಶ್ಲಾಘಿಸಬಹುದು. ಇದು ಒಂದು ಅನುಕೂಲಕರವಾದ ದಿನ, ಕೆಲಸದಲ್ಲಿ ಇದನ್ನು ಸೂಕ್ತವಾಗಿ ಬಳಸಿಕೊಳ್ಳಿ.

### ಮಿಥುನ ರಾಶಿ

ನಿಮ್ಮ ಸಂಗಾತಿಯ ಅಹ್ಲಾದಕರ ಮನಸ್ಥಿತಿ ನಿಮ್ಮ ದಿನವನ್ನು ಉಜ್ವಲವಾಗಿಸಬಹುದು. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ. ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು. ಇಂದು ಪ್ರಣಯದ ಯಾವುದೇ ಆಸೆಯಿಲ್ಲ ವೃತ್ತಿಪರ ರಂಗದಲ್ಲಿ ಜವಾಬ್ದಾರಿ ಹೆಚ್ಚಾಗುವ ಸಾಧ್ಯತೆಯಿದೆ.

### ಕರ್ಕ ರಾಶಿ

ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಹಾಗೂ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ. ವೈಯಕ್ತಿಕ ಜೀವನದ ಜೊತೆಗೆ ಕೆಲವು ಧರ್ಮಾರ್ಥ ಕಾರ್ಯಗಳಲ್ಲೂ ನಿಮ್ಮನ್ನು ತೊಡಗಿಸಿಕೊಳ್ಳಿ. ಇದು ವೈಯಕ್ತಿಕ ಜೀವನವನ್ನು ಘಾಸಿಗೊಳಿಸದೇ ನಿಮಗೆ ಮಾನಸಿಕ ಶಾಂತಿ ನೀಡುತ್ತದೆ. ನೀವು ಎರಡಕ್ಕೂ ಸಮನಾದ ಗಮನ ನೀಡಬೇಕು ನಿಮ್ಮ ಪ್ರಿಯತಮೆಯ ಜೊತೆ ಇಂದು ಸಭ್ಯತೆಯಿಂದ ವರ್ತಿಸಿ.

### ಸಿಂಹ ರಾಶಿ

ಕಿರಿಕಿರಿ ನಿಮ್ಮ ಮಾನಸಿಕ ಶಾಂತಿಗೆ ತೊಂದರೆ ತಂದರೂ ಒಬ್ಬ ಸ್ನೇಹಿತರು ನಿಮ್ಮ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಅಪಾರವಾದ ಸಹಾಯ ಮಾಡುತ್ತಾರೆ. ಒತ್ತಡ ತೊಡೆದುಹಾಕಲು ಹಿತವಾದ ಸಂಗೀತವನ್ನು ಆಲಿಸಿ. ದಿನದಆರಂಭವು ಚೆನ್ನಾಗಿ ಅಗಿದರು, ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು. ಇದರಿಂದ ನೀವು ತೊಂದರೆಗೊಳಗಾಗಬಹುದು. ಮನೆಯಲ್ಲಿ ಧರ್ಮಕಾರ್ಯಗಳನ್ನು ನಡೆಸಲಾಗುವುದು. ನಿಮ್ಮ ಕರೆಯನ್ನು ಮುಂದುವರಿಸುವ ಮೂಲಕ ನಿಮ್ಮ ಪ್ರಣಯದ ಸಂಗಾತಿಯನ್ನು ಚುಡಾಯಿಸುತ್ತೀರಿ.

### ಕನ್ಯಾ ರಾಶಿ

ನೀವು ಚೈತನ್ಯದಿಂದ ತುಂಬಿರುತ್ತೀರಿ ಮತ್ತು ಇಂದು ಅಸಾಮಾನ್ಯವಾದದ್ದೇನಾದರೂ ಸಾಧಿಸುತ್ತೀರಿ. ನಿಮಗೆ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಜಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ. ಯಾವುದೇ ಪ್ರಮಾಣ ಮಾಡುವ ಮೊದಲು ತಜ್ಞರನ್ನು ಸಂಪರ್ಕಿಸಿ. ನೀವು ಸ್ನೇಹಿತರೊಂದಿಗೆ ಒಳ್ಳೆಯ ಸಮಯ ಹೊಂದಿದ್ದರೂ ವಾಹನ ಚಾಲನೆ ಮಾಡುವಾಗ ಹೆಚ್ಚುವರಿ ಆರೈಕೆಯನ್ನು ಹೊಂದಿಕೊಳ್ಳಿ.

### ತುಲಾ ರಾಶಿ

ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಸಾಮಾಜಿಕ ಸಮಾರಂಭಗಳು ಪ್ರಭಾವಿ ಮತ್ತು ಪ್ರಮುಖ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ. ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ಸಂತೋಷವಾಗಿರಿಸಲು ಕೆಲಸಗಳನ್ನು ಮಾಡುತ್ತಾರೆ. ಬಾಕಿಯಿರುವ ಯೋಜನೆಗಳು ಅಂತಿಮ ರೂಪ ಪಡೆಯುತ್ತವೆ.

### ವೃಶ್ಚಿಕ ರಾಶಿ

ಹೆಚ್ಚು ಆಶಾವಾದಿಗಳಾಗಿರಲು ನಿಮ್ಮನ್ನು ನೀವೇ ಪ್ರೇರೇಪಿಸಿಕೊಳ್ಳಿ. ಇದು ವಿಶ್ವಾಸ ಮತ್ತು ನಮ್ಯತೆಯನ್ನು ಹೆಚ್ಚಿಸುತ್ತದಾದರೂ ಅದೇಸಮಯದಲ್ಲಿ ಭಯ, ದ್ವೇಷ, ಅಸೂಯೆ, ಸೇಡಿನಂಥ ನಕಾರಾತ್ಮಕ ಭಾವನೆಗಳನ್ನು ಹಿಂದೆ ಬಿಡಲು ಸಿದ್ಧವಾಗಿ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಕೌಟುಂಬಿಕ ಒತ್ತಡ ನಿಮ್ಮ ಗಮನ ಬೇರೆಡೆಗೆ ಸೆಳೆಯದಿರಲಿ. ಕೆಟ್ಟ ಸಮಯಗಳು ನಮಗೆ ಇನ್ನೂ ಹೆಚ್ಚನ್ನು ನೀಡುತ್ತವೆ.

### ಧನು ರಾಶಿ

ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ. ನಿಮ್ಮ ಮಕ್ಕಳೂ ಕೂಡ ಮನೆಯಲ್ಲಿನ ಶಾಂತಿ ಸಾಮರಸ್ಯದ ವಾತಾವರಣವನ್ನು ಆವಾಹಿಸಿಕೊಳ್ಳುತ್ತಾರೆ. ಇದು ಪರಸ್ಪರ ಸಂಪರ್ಕದಲ್ಲಿ ನಿಮ್ಮ ಮಾತುಕತೆಗೆ ನಿಮಗೆ ಹೆಚ್ಚಿನ ಸ್ವಾಭಾವಿಕತೆ ಮತ್ತು ಸ್ವಾತಂತ್ರ್ಯ ನೀಡುತ್ತದೆ.

### ಮಕರ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ.

### ಕುಂಭ ರಾಶಿ

ನಿಮ್ಮ ನಗು ಖಿನ್ನತೆಯ ವಿರುದ್ಧ ಕೆಲಸ ಮಾಡುತ್ತದೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ನಿಮ್ಮ ಆಕರ್ಷಣೆ ಹಾಗೂ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಗಳಿಸಲು ಸಹಾಯ ಮಾಡುತ್ತದೆ. ಇಂದು ನಿಮ್ಮ ಯಾವುದೇ ಭರವಸೆಯನ್ನು ಪೂರೈಸಲು ಸಾಧ್ಯವಾಗುವುದಿಲ್ಲ.

### ಮೀನ ರಾಶಿ

ಉತ್ತಮ ಆರೋಗ್ಯ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಲು ನಿಮ್ಮನ್ನು ಸಕ್ರಿಯಗೊಳಿಸುತ್ತದೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಕುಟುಂಬದ ಸದಸ್ಯರೊಂದಿಗೆ ನಿಮ್ಮ ಸಮಸ್ಯೆಗಳನ್ನು ಹಂಚಿಕೊಂಡು ನೀವು ಒಳೆಯದನ್ನು ಅನುಭವಿಸಬಹುದು ಆದರೆ ಕೊಲವೊಮ್ಮೆ ನೀವು ನಿಮ್ಮ ಅಹಂಕಾರವನ್ನು ಮುಂದೆ ಇಟ್ಟುಕೊಂಡು ಕುಟುಂಬ ಸದಸ್ಯರಿಗೆ ಪ್ರಮುಖ ವಿಷಯಗಳನ್ನು ಹೇಳುವುದಿಲ್ಲ.

## ಡಾ.ಪ್ರಣವಾನಂದ ಸ್ವಾಮೀಜಿಯವರಿಂದ ಅಂತಾರಾಷ್ಟ್ರೀಯ ಯೋಗ ದಿನಾಚರಣೆ



**ದಾವಣಗೆರೆ:** ಆಫ್ರಿಕಾ ರಾಷ್ಟ್ರದ ಪ್ರವಾಸದಲ್ಲಿರುವ ಬ್ರಹ್ಮಶ್ರೀ ನಾರಾಯಣ ಗುರು ಶಕ್ತಿಪೀಠದ ಡಾ.ಪ್ರಣವಾನಂದ ಸ್ವಾಮೀಜಿಯವರು ಶನಿವಾರ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಉಗಾಂಡಾ ರಾಜ್ಯದ ಕಂಪಾಲಾದಲ್ಲಿ ಭಾರತದ ರಾಯಭಾರಿ ಕಚೇರಿಯು ಆಯೋಜಿಸಿದ್ದ ಸಾಮೂಹಿಕ ಯೋಗ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಭಾರತದ ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಪ್ರಯತ್ನದಿಂದ 2014ರಿಂದ ವಿಶ್ವಸಂಸ್ಥೆ ಮೂಲಕ ಜಗತ್ತಿನೆಲ್ಲೆಡೆ ಯೋಗ ದಿನಾಚರಣೆ ನಡೆಯುತ್ತಿದೆ. ಮಾನಸಿಕ ಮತ್ತು ದೈಹಿಕ ಆರೋಗ್ಯ ಕಾಪಾಡಲು ಯೋಗವು ಅತ್ಯಂತ ಸಹಕಾರಿಯಾಗಿದೆ. ಯೋಗವು ಜೀವನದ ಅವಿಭಾಜ್ಯ ಅಂಗವಾಗಬೇಕು. ಈ ಮೂಲಕ ಆರೋಗ್ಯಪೂರ್ಣ ಬದುಕು ನಡೆಸಲು ಸಾಧ್ಯ. ಹಾಗಾಗಿ ಯೋಗವನ್ನು ನಿತ್ಯ ಜೀವನದಲ್ಲಿ ಅಳವಡಿಸೋಣ ಎಂದು ಸಲಹೆ ನೀಡಿದರು.

ಸಾಮೂಹಿಕ ಯೋಗ ಕಾರ್ಯಕ್ರಮದಲ್ಲಿ ಇಂಡಿಯನ್ ಹೈ ಕಮಿಷನರ್ ಜಿತೇಂದ್ರ ನೇಗಿ,

ಇಂಡಿಯನ್ ಅಸೋಸಿಯೇಷನ್ ಪ್ರೆಸಿಡೆಂಟ್ ಪರೇಶ್ ಮೆಹ್ತಾ, ಕನ್ನಡ ಅಸೋಸಿಯೇಷನ್ ಪ್ರಧಾನ ಕಾರ್ಯದರ್ಶಿ ಸಂತೋಷ ರಾಠೋಡ, ಆಫ್ರಿಕನ್ ಸ್ಟಡಿ ಸೆಂಟರ್ ಜನರಲ್ ಸೆಕ್ರೆಟರಿ ಕೆನ್ನೆತ್ ಕಿಯಾಗ, ಈಸ್ಟ್ ಇಂಡಿಯಾ ಅಸೋಸಿಯೇಷನ್ ಪ್ರೆಸಿಡೆಂಟ್ ವಿಜಯ ರಘುನಾಥ ಕಿಶೋರಿ

ಸೇರಿದಂತೆ ಭಾರತಿಯ ಸಂಸ್ಥೆಯವರು, ಭಕ್ತಾಧಿಗಳು ಭಾಗವಹಿಸಿದ್ದರು.

## ಅಶ್ವಿನಿ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನಲ್ಲಿ 11ನೇ ವಿಶ್ವ ಯೋಗ ದಿನಾಚರಣೆ

**ದಾವಣಗೆರೆ:** ಅಶ್ವಿನಿ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನಲ್ಲಿ ಇಂದು 11ನೇ ವಿಶ್ವ ಯೋಗ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮವನ್ನು ಗಿಡಕ್ಕೆ ನೀರೆರೆಯುವುದರ ಮೂಲಕ ಉದ್ಘಾಟಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಎಎಂಸಿ ಕಾಲೇಜ್‌ನ ಚೇರ್ಮನ್ ಡಾ. ಮೃತ್ಯುಂಜಯ, ಎನ್. ಹಿರೇಮಠ ರವರು ವಹಿಸಿದ್ದರು. ನಂತರ ಮಾತನಾಡಿದ ಅವರು ಕಾಯಿಲೆ ಬರುವುದಕ್ಕಿಂತ ಮೊದಲೇ ಯೋಗಾಭ್ಯಾಸ ಮಾಡುತ್ತ ಬಂದಲ್ಲಿ ರೋಗವನ್ನು ತಡೆಗಟ್ಟಬಹುದು ಎಂದು ತಿಳಿಸಿದರು.

ಯೋಗ ಅಭ್ಯಾಸದಲ್ಲಿ ವಿದ್ಯಾರ್ಥಿಗಳೊಂದಿಗೆ ಭೋಧಕ ವೃಂದವು ಪಾಲ್ಗೊಂಡಿದ್ದು ಕಾರ್ಯಕ್ರಮದ ಮೆರಗನ್ನು ಹೆಚ್ಚಿಸಿತು.




ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಯೋಗ ಗುರುಗಳಾದ ಯೋಗಾಚಾರ್ಯ ತೀರ್ಥರಾಜ್ ಹೋಲೂರ್ ಭಾಗವಹಿಸಿ ಮಾತನಾಡಿದ ಅವರು ಯೋಗ ಮಾಡುವುದರಿಂದ ದೇಹಕ್ಕೆ ಮಾತ್ರವಲ್ಲದೆ ಮಾನಸಿಕ ನೆಮ್ಮದಿ ದೊರಕುತ್ತದೆ, ದಿನ ನಿತ್ಯ ಯೋಗಾಭ್ಯಾಸ ಮಾಡುವುದರಿಂದ 108 ಕಾಯಿಲೆಗಳನ್ನು ಗುಣಪಡಿಸಬಹುದು ಎಂದು ವಿಶ್ಲೇಷಿಸಿದರು.

ಪ್ರಾಂಶುಪಾಲರಾದ ಮುಕ್ತಾ ಎನ್. ಹಿರೇಮಠ, ಪ್ರಾಧ್ಯಾಪಕರಾದ ಡಾ.ಜ್ಞಾನೇಶ್ವರ ಎಲ್.ಎಂ., ವೇದಿಕೆ ಮೇಲೆ ಉಪಸ್ಥಿತರಿದ್ದರು.

ಕಾಲೇಜಿನ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

## ಪ್ರಾಚೀನ ಸಂಸ್ಕೃತಿಯೋಗ ಉಳಿವಿಗೆ ಕೇಂದ್ರ ಶ್ರಮ: ಕೇಂದ್ರ ಸಚಿವ ವಿ. ಸೋಮಣ್ಣ

**ಹಾಸನ :** ಪ್ರಾಚೀನ ಭಾರತದಅಮೂಲ್ಯವಾದಕೊಡುಗೆಯಾಗಿರುವಯೋಗವುದೈಹಿಕ ಮತ್ತು ಮಾನಸಿಕ ಆರೋಗ್ಯ ಹೆಚ್ಚಿಸುವಅತ್ಯಂತ ವಿಶ್ವಾಸಾರ್ಹ ಸಾಧನ, ಮನುಷ್ಯ ಮತ್ತು ಪ್ರಕೃತಿಯ ನಡುವಿನ ಆರೋಗ್ಯ ಹಾಗೂ ಯೋಗಕ್ಷೇಮದಯೋಗ ಸಾಧನವಾಗಿದೆಎಂದು ಕೇಂದ್ರರಾಜ್ಯರೈಲ್ವೆ ಹಾಗೂ ಜಲಶಕ್ತಿ ಸಚಿವರಾದ ವಿ.ಸೋಮಣ್ಣ ತಿಳಿಸಿದ್ದಾರೆ.

ವಿಶ್ವ ಪಾರಂಪರಿಕತಾಣವಾಗಿರುವ ಹಳೆಬೀಡು ದೇವಾಲಯದಆವರಣದಲ್ಲಿಇಂದು ನಡೆದ 11ನೇ ಅಂತರಾಷ್ಟ್ರೀಯಯೋಗ ದಿನಾಚರಣೆಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದಅವರುದೇಶದಇತಿಹಾಸದೇಶ ನಡೆದು ಬಂದ ದಿನವನ್ನು ವಿಶ್ವಕ್ಕೆ ಪರಿಚಯ ಮಾಡುವ ಪರಿಮಿತ್ರವಾದ ದಿನ ಋಷಿ ಮುನಿಗಳು, ಶರಣಮೂರ್ತಿಗಳು ಹಾಗೂ ಸಂಘ ಸಂಸ್ಥೆಗಳು ಅನುಸರಿಸುತ್ತಿದ್ದಯೋಗವನ್ನುಅಂತರಾಷ್ಟ್ರೀಯಮಟ್ಟದಲ್ಲಿಕೊಂಡೊಯ್ಯುವ ಕೆಲಸವಾಗಿದೆಎಂದರು.

ವಿಶ್ವಕ್ಕೆದೊಡ್ಡ ಸಂದೇಶ ನೀಡಿದ ವಿಶೇಷ ದಿನ ಇದಾಗಿದ್ದು ಪ್ರಧಾನಿ ನರೇಂದ್ರ ಮೋದಿ ಅವರು 2014 ರಲ್ಲಿತೆಗೆದುಕೊಂಡ ಈ ಐತಿಹಾಸಿಕ

ನಿರ್ಧಾರಕ್ಕೆ ವಿಶ್ವಸಂಸ್ಥೆ ಸಾಮಾನ್ಯ ಸಭೆಯಲ್ಲಿ ತೀರ್ಮಾನಿಸಿ ಜೂ.21 ನ್ನುಅಂತಾರಾಷ್ಟ್ರೀಯಯೋಗ ದಿನ ಎಂದು ಘೋಷಿಸಲಾಗಿದೆ. ಯೋಗವುಆರೋಗ್ಯ ಮತ್ತುಯೋಗಕ್ಷೇಮಕ್ಕೆ ಸಮಗ್ರ ಸೂತ್ರವನ್ನು ನೀಡುತ್ತದೆಎಂದು ಸಚಿವರು ತಿಳಿಸಿದರು.

ಈಗಾಗಲೇ 10ವರ್ಷಗಳನ್ನು ಪೂರ್ಣಗೊಳಿಸಿರುವ ಯೋಗ ದಿನ 11ನೆ ವರ್ಷಕ್ಕೆಕಾಲಿಟ್ಟಿದ್ದುಒಂದುಭೂಮಿ, ಒಂದುಆರೋಗ್ಯ, ಒಂದುಯೋಗ ಎಂಬ

ಘೋಷವಾಕ್ಯದೊಂದಿಗೆ ಯೋಗ ದಿನಾಚರಣೆಆಚರಿಸಲಾಗುತ್ತಿದೆಎಂದ ಸಚಿವರು 176 ದೇಶಗಳಲ್ಲಿಯೋಗ ದಿನವನ್ನುಆಚರಿಸಲಾಗುತ್ತದೆಎಂದರು.

ವಿಶಾಖಪಟ್ಟಣದಲ್ಲಿಇಂದು ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಐತಿಹಾಸಿಕ ಯೋಗ ದಿನಾಚರಣೆ ನಡೆಯುತ್ತಿದೆ. ಯೋಗ ಉಳಿಸಿ ಬೆಳೆಸಲು ಕೇಂದ್ರ ಸರ್ಕಾರ ಹಲವು



ಕಾರ್ಯಕ್ರಮಗಳನ್ನು ಜಾರಿಗೆತಂದಿದೆಎಂದರು.

ಆಯುಷ್ಮಾನ್ಆರೋಗ್ಯಕ್ಷೇಮ ಮಂದಿರ ಸ್ಥಾಪಿಸಿ ಯೋಗಕ್ಕೆಉತ್ತೇಜನ ನೀಡುತ್ತಿದೆ.

ಇದರಜೊತೆಗೆ ಐತಿಹಾಸಿಕ ಸ್ಥಳಗಳನ್ನು ಉಳಿಸಿ ಬೆಳೆಸುವ ಸಲುವಾಗಿ ಎಲ್ಲಾಕೇಂದ್ರ ಸಚಿವರುಗಳನ್ನುಒಂದೊಂದು ಐತಿಹಾಸಿಕ ಸ್ಥಳಗಳಿಗೆ

ನೇಮಿಸಿ ಯೋಗ ದಿನಾಚರಣೆಆಚರಿಸಲಾಗುತ್ತಿದೆಎಂದರು. ಅದರಂತೆ ನಾನುಹಳೆಬೀಡಿನಲ್ಲಿ ಕಾರ್ಯಕ್ರಮದಲ್ಲಿವಂದೇ ಭಾರತ್‌ರೈಲು, ಐ ಫೀಡ್ ಬುಲೆಟ್‌ಟ್ರೈನ್, ರೈಲ್ವೆ ನಿಲ್ದಾಣಗಳು ಪುನರ್‌ಅಭಿವೃದ್ಧಿಇಂತಹ ಯೋಜನೆಗಳ ಮೂಲಕ ಆತ್ಮ ನಿರ್ಭರ ಭಾರತಕ್ಕೆಒತ್ತು ನೀಡಿದ್ದಾರೆಎಂದರು.

ಭಾರತರಕ್ಷಣಾ ಆಯುಧಗಳಿಗೆ ಬೇರೊಂದುದೇಶದ ಮೇಲೆ ಅವಲಂಬಿತವಾಗಬೇಕಿತ್ತು, ಆದರೆ ಮೇಕ್‌ಇನ್‌ಇಂಡಿಯಾಯೋಜನೆ ಮೂಲಕ ಸ್ವಾವಲಂಬನೆಯಆಪರೇಷನ್ ಸಿಂಧೂರದಲ್ಲಿ ಪ್ರಪಂಚಕ್ಕೆತೋರಿಸಲಾಗಿದೆಎಂದರು.

ಕಳೆದ 11 ವರ್ಷದಲ್ಲೇ 25 ಕೋಟಿಜನರನ್ನು ಬಡತನರೇಖೆಗಿಂತ ಮೇಲೆ ತರಲಾಗಿದ್ದುರೈತರಕಲ್ಯಾಣಕ್ಕಾಗಿ ಪಿಎಂ ಕಿಸಾನ್‌ಯೋಜನೆಅನುಷ್ಠಾನಗೊಳಿಸಲಾಗಿದೆ ಪಿಎಂ ಮುದ್ರಾಯೋಜನೆಯ ಮೂಲಕ ಸ್ವಂತಉದ್ಯೋಗದಾರರಿಗೆ ಬೆಂಬಲ ನೀಡಲಾಗಿದೆಎಂದರು.

ಜಲಜೀವನ್ ಮಿಷನ್‌ಯೋಜನೆಯಡಿ ಮನೆ ಮನೆಗೆನಲ್ಲಿಮೂಲಕಕುಡಿಯುವನೀರುನೀಡುವ ಪವಿತ್ರಯೋಜನೆ ಜಾರಿಗೊಳಿಸಲಾಗಿದೆ, ಸ್ವಚ್ಛ ಭಾರತ್‌ಯೋಜನೆ ಅಡಿ ಶೌಚಾಲಯಗಳನ್ನು ನಿರ್ಮಿಸಲಾಗಿದೆಎಂದರು.

ಶಾಸಕರಾದ ಹೆಚ್.ಕೆ ಸುರೇಶ್‌ಅವರು ಪ್ರಾಸವಿಕನುಡಿಗಳನ್ನಾಡಿಗಳಾಡಿದರು.

ಕಾರ್ಯಕ್ರಮದಲ್ಲಿ ಪುಷ್ಪಗಿರಿ ಸೋಮಶೇಖರ್ ಸ್ವಾಮೀಜಿ, ಅಪರ ಜಿಲ್ಲಾಧಿಕಾರಿಗಳಾದಕೆ.ಟಿ ಶಾಂತಲಾ, ಬೇಲೂರುತಾಲ್ಲೂಕುನ್ಯಾಯಾಲಂಯದಜೆ.ಎಂ.ಸಿ ನ್ಯಾಯಾಧೀಶರಾದ ಶಶಿಕಲಾ, ಉಪವಿಭಾಗಾಧಿಕಾರಿ ಶೃತಿ, ತಹಸೀಲ್ದಾರ್ ಮಮತಾ ಮತ್ತಿತ್ತರು ಉಪಸ್ಥಿತರಿದ್ದರು.

## ಜಿಲ್ಲಾ ಮಟ್ಟದ ಟಾಸ್ಕ್ಫೋರ್ಸ್ ಸಮಿತಿ ಸಭೆ

**ಗದಗ :** 2024-25 ನೇ ಸಾಲಿನ ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯ ಬೆಲೆವ್ಯತ್ಯಾಸ ಪಾವತಿ (Price Deficiency payment scheme ) ಯೋಜನೆಯಡಿಯಲ್ಲಿ ಮಾರುಕಟ್ಟೆ ಮಧ್ಯ ಪ್ರವೇಶ ದರ ಪ್ರತಿ ಕ್ವಿಂಟಲ್ ಗೆ (ಒಖಕ) ರೂ. 10,589.20 ಗಳು ನಿಗಾಧಿಪಡಿಸಲಾಗಿದೆ. ಒಣಮೆಣಸಿನಕಾಯಿ ಉತ್ಪನ್ನವನ್ನು ಖರೀದಿಸುವ ಕುರಿತು ಜಿಲ್ಲಾ ಟಾಸ್ಕ್ಫೋರ್ಸ್ ಸಮಿತಿಯು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಮಾತನಾಡಿ ಒಣಮೆಣಸಿನಕಾಯಿ ಬೆಳೆಗಾರರ ಹಿತದೃಷ್ಟಿಯಿಂದ ಈ ಯೋಜನೆಯ ಅನುಕೂಲ ಪಡೆಯಲು ಸಾಧ್ಯವಾಗುವಂತೆ ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯ ಬೆಲೆ ವ್ಯತ್ಯಾಸ ಪಾವತಿ ಯೋಜನೆಯಡಿಯಲ್ಲಿ ಇ ಟೆಂಡರ್ ನಡೆಸುತ್ತಿರುವ ಗದಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ಒಣಮೆಣಸಿನಕಾಯಿ ಮಾರಾಟ ಮಾಡಲು ಬರುವ ರೈತರು ನೋಂದಣಿ ಕಾರ್ಯವನ್ನು ಓಜಟಟ ತಂತ್ರಾಂಶ ದಲ್ಲಿ ಮಾಡಿಸಬೇಕು ಎಂದರು. ಒಣಮೆಣಸಿನಕಾಯಿ ಉತ್ಪನ್ನದ ಗೇಟ ಎಂಟ್ರಿಯನ್ನು ಗದಗ ಂಕಷಿಅ ಯಲ್ಲಿ ಗಊಕ ತಂತ್ರಾಂಶದಲ್ಲಿ ರೈತರು ದಾಖಲಿಸುವ ಕಾರ್ಯವನ್ನು ನಿರ್ವಹಿಸಬೇಕು. ಪ್ರತಿ ದಿವಸ ಆವಕವಾಗುವ ಒಣಮೆಣಸಿನಕಾಯಿ ಪ್ರಮಾಣ, ರೈತರ ಸಂಖ್ಯೆ ಇತ್ಯಾದಿ ವಿವರಗಳನ್ನು ಸರ್ಕಾರಕ್ಕೆ ಸಲ್ಲಿಸಬೇಕೆಂದು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ತೋಟಗಾರಿಕೆ ಇಲಾಖೆ ಉಪನಿರ್ದೇಶಕರು ಮಾತನಾಡಿ ಜಿಲ್ಲೆಯಲ್ಲಿ ಒಟ್ಟು 35855.89 ಹೆಕ್ಟೇರ್ ಒಣಮೆಣಸಿನಕಾಯಿ ಹುಟ್ಟುವಳಿ ಬಿತ್ತನೆ ಮಾಡಿದ್ದು, ಪ್ರತಿ ಹೆಕ್ಟೇರ್‌ಗೆ 8 ಟನ್ ಇಳುವರಿ ಪ್ರಮಾಣವನ್ನು ನಿರೀಕ್ಷಿಸಲಾಗಿದೆ ಎಂದು ತಿಳಿಸಿದರು.

ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರಾದ ಸುಧಾ ಆರ್ ಬಂಡಿ ಅವರು ಮಾತನಾಡಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಲ್ಲಿ ಕಡ್ಡಾಯವಾಗಿ Price Deficiency payment scheme ) ( UMP) ಇ ಟೆಂಡರ್ ಮೂಲಕ ಮಾತ್ರ ಯೋಜನೆಯನ್ನು ಅನುಷ್ಠಾನಗೊಳಿಸಬೇಕಾಗಿದ್ದು ಗದಗ ಜಿಲ್ಲೆಯಲ್ಲಿ ಗದಗ ಮಾರುಕಟ್ಟೆ ಹೊರತುಪಡಿಸಿ ನರಗುಂದ, ಲಕ್ಷೇಶ್ವರ, ಹೊಳೆ ಆಲೂರ ಹಾಗೂ ಮುಂಡರಗಿ ಮಾರುಕಟ್ಟೆಗಳಲ್ಲಿ ಒಣಮೆಣಸಿನಕಾಯಿ ಹುಟ್ಟುವಳಿ ಇ ಟೆಂಡರ್ ನಡೆಸಲು ಕಮೀಷನ್ ಏಜೆಂಟರು ( ದಲ್ಲಾಲರು) ಹಾಗೂ ಖರೀದಿದಾರರು ಇರುವುದಿಲ್ಲ ಎಂದು ಸಭೆಗೆ ವಿವರಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕರು, ಸಹಕಾರ ಸಂಘಗಳ ಇಲಾಖೆ ಉಪನಿಬಂಧಕರು, ಕೃಷಿ ಮಾರಾಟ ಇಲಾಖೆ ಸಹಾಯಕ ನಿರ್ದೇಶಕರು, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ ಹಾಜರಿದ್ದರು.

## ಭದ್ರಾ ಎಡದಂಡೆ ನಾಲೆ ಅವಲಂಬಿಸಿ ಬೆಳೆ ಬೆಳೆಯದಂತೆ ಮನವಿ



**ಚಿಕ್ಕಮಗಳೂರು:** 2025-26 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಎಡದಂಡೆ ನಾಲೆಗೆ ನೀರು ಹರಿಸಲು ಸಾಧ್ಯವಾಗುವುದಿಲ್ಲ. ಈ ಹಿನ್ನೆಲೆಯಲ್ಲಿ ಭದ್ರಾ ಜಲಾಶಯದ ಎಡದಂಡೆ ನಾಲೆಯ ವ್ಯಾಪ್ತಿಗೆ ಒಳಪಡುವ ಅಚ್ಚುಕಟ್ಟುದಾರರು ಎಡದಂಡೆ ನಾಲೆಯ ನೀರನ್ನು ಅವಲಂಬಿಸಿ ಭತ್ತ ಅಥವಾ ಇನ್ಯಾವುದೇ ಹೆಚ್ಚು ನೀರು ಅಗತ್ಯವಿರುವ ಬೆಳೆಗಳನ್ನು ಬೆಳೆಯಬಾರದು ಎಂದು ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಬಿ.ಆರ್.ಪ್ರಾಜೆಕ್ಟ್ ಭದ್ರಾ ಯೋಜನಾ ವೃತ್ತದ ಕ.ನೀ.ನಿ.ನಿ.ಯ ಅಧೀಕ್ಷಕರ ಅಭಿಯಂತರರು ತಿಳಿಸಿದ್ದಾರೆ.

ಭದ್ರಾ ಎಡದಂಡೆ ನಾಲೆಗೆ ಹೊಸ ಗೇಟು ಅಳವಡಿಸಬೇಕಾಗಿದ್ದು, ಅಂದಾಜು ಒಂದೂವರೆ ತಿಂಗಳು ಕಾಲಾವಕಾಶ ಬೇಕಾಗಿದೆ ಎಂದು ಭದ್ರಾವತಿಯ ಕಾರ್ಯಪಾಲಕ ಇಂಜಿನಿಯರ್‌ರವರು ವರದಿ ನೀಡಿದ್ದಾರೆ. ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ಹಾಗೂ ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿಯ ಅಧ್ಯಕ್ಷರ ಅನುಮತಿ ಪಡೆದು ಈ ಪ್ರಕಟಣೆ ಹೊರಡಿಸಲಾಗಿದೆ. ಸಂಬಂಧಿಸಿದ ರೈತರು ಇಲಾಖೆಯೊಂದಿಗೆ ಸಹಕರಿಸುವಂತೆ ಅವರು ಕೋರಿದ್ದಾರೆ.

## ಅರ್ಹ ಫಲಾನುಭವಿಗಳಿಗೆ ಆಹಾರಧಾನ್ಯ ಅಕ್ಕಿ ಮತ್ತು ಜೋಳ ವಿತರಣೆ

**ಗದಗ :** ಜೂನ-2025 ಮಾಹೆಯಲ್ಲಿ ಅಕ್ಕಿ ಮತ್ತು ಜೋಳ ವಿತರಿಸುವ ಪ್ರಮಾಣಕೇಂದ್ರ ವ್ಯಾಪ್ತಿಯ ಪಿ.ಎಚ್.ಎಚ್. ಆದ್ಯತಾ ಪಡಿತೆರಚೀಟಿ ಪ್ರತಿ ಸದಸ್ಯರಿಗೆ 8 ಕೆ.ಜಿ.ಅಕ್ಕಿ ಹಾಗೂ ಕೆ.ಜಿ.ಜೋಳ ಹಂಚಿಕೆ ಮಾಡಲಾಗಿದೆ. ಎಎವೈ ಅಂತ್ಯೋದಯಅನ್ನಯೋಜನ ಪ್ರತಿ ಪಡಿತರಚೀಟಿಗೆಒ ಟ್ಟು 21 ಕೆ.ಜಿ ಅಕ್ಕಿ. ಹಾಗೂ ಕೆ.ಜಿ.ಜೋಳ ವಿತರಿಸಲಾಗುವುದು. ರಾಜ್ಯ ವ್ಯಾಪ್ತಿಯ ಪಿ.ಎಚ್.ಎಚ್. ಆದ್ಯತಾ ಪಡಿತರಚೀಟಿ ಪ್ರತಿ ಸದಸ್ಯರಿಗೆ 10 ಕೆ.ಜಿ. ಅಕ್ಕಿ ಹಂಚಿಕೆ ಮಾಡಲಾಗಿದೆ. ಆದರೆ ಈ ಕಾರ್ಡದಾರರಿಗೆ ಜೋಳ ಹಂಚಿಕೆ ನೀಡಿರುವುದಿಲ್ಲ. ಪಡಿತರಧಾನ್ಯಉಚಿತ ಹಂಚಿಕೆಯಾಗಿರುತ್ತದೆ. ಜಂಟಿ ನಿರ್ದೇಶಕರು, ಆಹಾರ, ನಾಗರಿಕ ಸರಬರಾಜು ಮತ್ತುಗ್ರಾಹಕರ ವ್ಯವಹಾರಗಳ ಇಲಾಖೆ, ಗದಗ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ

## ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

**ಗದಗ:** ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2025-26ನೇ ಸಾಲಿನಲ್ಲಿ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಹಾಗೂ ಈ ಯೋಜನೆಗಳಡಿ ಸಾಲ-ಸೌಲಭ್ಯವನ್ನು ಪಡೆಯಲು ಇಚ್ಛಿಸುವವರು ಕಡ್ಡಾಯವಾಗಿ ಆನ್‌ಲೈನ್ «¼Á¸À:http//kacdc.karnataka.gov.in ರ ಮೂಲಕ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಅರ್ಜಿ ಸಲ್ಲಿಸಲು ಕೊನೆಯ ಜುಲೈ 31

2025-26ನೇಸಾಲಿನಲ್ಲಿಅನುಷ್ಠಾನಗೊಳಿಸಲಾಗುವ ಯೋಜನೆಗಳು.ಸ್ವಯಂ-ಉದ್ಯೋಗ ನೇರಸಾಲ ಯೋಜನೆ, ಬ್ಯಾಂಕಗಳ ಸಹಯೋಗದೊಂದಿಗೆ ಆರ್ಯ ವೈಶ್ಯ ಆಹಾರ ವಾಹಿನಿ/ವಾಹಿನಿ ಯೋಜನೆ. ವಾಸವಿ ಜಲಶಕ್ತಿ ಯೋಜನೆ. ಅರಿವು ಶೈಕ್ಷಣಿಕ ಸಾಲ ಯೋಜನೆ ?ಅಇಖ ಹಾಗೂ ಓಇಇಖ ಮುಗಿದ ನಂತರ ಅರ್ಜಿಗಳನ್ನು ಆಹ್ವಾನಿಸಲಾಗುವುದು.

ಎಲ್ಲಾ ಯೋಜನೆಗಳ ಸಾಮಾನ್ಯ ಮಾರ್ಗ ಸೂಚಿಗಳು: -ಸಾಮಾನ್ಯ ವರ್ಗದಲ್ಲಿನ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿರಬೇಕು ಮತ್ತು ನಮೂನೆ-ಜಿ ಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು. (ಪ್ರಮಾಣ ಪತ್ರವು ಚಾಲ್ತಿಯಲ್ಲಿರಬೇಕು), ಅರ್ಜಿದಾರರು ಕರ್ನಾಟಕ ರಾಜ್ಯದವರಾಗಿರಬೇಕು ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು. ಅರ್ಜಿದಾರರು ತಮ್ಮ ಆಧಾರ್ ಸಂಖ್ಯೆಗೆ ತಮ್ಮ ಮೊಬೈಲ್ ಸಂಖ್ಯೆಯನ್ನು ಜೋಡಣೆ ಮಾಡಿರಬೇಕು ಮತ್ತು ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯನ್ನು ಸೀಡಿಂಗ್ ಆಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬರು ಮಾತ್ರ ಸಾಲ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

## ಶಿಶುಪಾಲನಾ ಕೇಂದ್ರದಲ್ಲಿ ಮಕ್ಕಳಿಂದ ಯೋಗ ದಿನಾಚರಣೆ



**ಗದಗ :** ಜಿಲ್ಲಾಡಳಿತದಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃಧಿ ಇಲಾಖೆಯ ಶಿಶುಪಾಲನಾ ಕೇಂದ್ರದಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ, ಶಿಶುಪಾಲನಾ ಕೇಂದ್ರದ ಮಕ್ಕಳು ಹಾಗೂ ಶಿಕ್ಷಕಿಯರಿಂದ ಯೋಗಾದಿನಾಚರಣೆಯನ್ನು ಆಚರಿಸಲಾಯಿತು.

ಬಳ್ಳಾರಿಯಲ್ಲಿ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ'; ಗಮನ ಸೆಳೆದ ಜಾಗೃತಿ ಜಾಥಾ

# ಬಾಲಕಾರ್ಮಿಕ ಪದ್ಧತಿ ತೊಡೆದಾಕಲು ಒಗ್ಗೂಡಬೇಕು: ನ್ಯಾ. ಎನ್.ಹೊಸಮನೆ

**ಬಳ್ಳಾರಿ :** ಸಮಾಜದಲ್ಲಿ ಬಾಲಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ತೊಡೆದು ಹಾಕಲು ಅಧಿಕಾರಿಗಳು, ಪೋಷಕರು ಹಾಗೂ ಇತರೆ ಸಂಘ-ಸಂಸ್ಥೆಗಳು ಒಗ್ಗೂಡಬೇಕಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಜಿಲ್ಲಾ ವಕೀಲರ ಸಂಘ, ವಿವಿಧ ಇಲಾಖೆಗಳು ಮತ್ತು ಇತರೆ ಸಂಘ-ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಗುರುವಾರ ಏರ್ಪಡಿಸಿದ್ದ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿ ಬಾಲಕಾರ್ಮಿಕ ಪದ್ಧತಿ ನಿಷೇಧಿಸಲಾಗಿದ್ದು, ಇಂದಿಗೂ ಬಡತನವೆನ್ನುವುದು ಅನೇಕ ಮಕ್ಕಳನ್ನು ದುಡಿಯುವಂತೆ ಮಾಡುತ್ತಿದೆ. ಬಡತನ, ಪೋಷಕರ ನಿರ್ಲಕ್ಷ್ಯದ ಕಾರಣ ವಿಶ್ವದಾದ್ಯಂತ 16 ಕೋಟಿ ಮಕ್ಕಳು ಬಾಲ ಕಾರ್ಮಿಕರಾಗಿ ದುಡಿಯುತ್ತಲೇ ಇದ್ದಾರೆ. ಈ ಅನಿಷ್ಠ ಪದ್ಧತಿಯನ್ನು ಹೋಗಲಾಡಿಸಲು ಮಕ್ಕಳಿಗೆ ಶಿಕ್ಷಣ ನೀಡಬೇಕು ಎಂದು ತಿಳಿಸಿದರು.

ಮಕ್ಕಳ ಬಾಲ್ಯವನ್ನು ಕಸಿದುಕೊಳ್ಳುತ್ತಿರುವ ಬಾಲಕಾರ್ಮಿಕತನವನ್ನು ತೊಡೆದು ಹಾಕಲು ಕೇವಲ ಸರ್ಕಾರಗಳಿಂದ ಮಾತ್ರ ಸಾಧ್ಯವಾಗದು. ಇದಕ್ಕೆ ಅಧಿಕಾರಿಗಳು, ಪೋಷಕರು, ಸಾರ್ವಜನಿಕರು ಹಾಗೂ ಇತರೆ ಸಂಘ-ಸಂಸ್ಥೆಗಳು ಒಗ್ಗೂಡಿ ಕಾರ್ಯಾಚರಣೆ ನಡೆಸಬೇಕಿದೆ ಎಂದು ಅವರು ಅಭಿಪ್ರಾಯಪಟ್ಟರು.



ಪ್ರತಿಯೊಬ್ಬರೂ ಶಿಕ್ಷಣಕ್ಕೆ ಮಹತ್ವ ನೀಡಬೇಕು. ಶಿಕ್ಷಣದಿಂದಲೇ ಮಾತ್ರ ಬಡತನ ನಿರ್ಮೂಲನೆ ಮಾಡಲು ಸಾಧ್ಯ. 14 ವರ್ಷದೊಳಗಿನ ಮಕ್ಕಳಿಗೆ ಉಚಿತ ಮತ್ತು ಕಡ್ಡಾಯ ಶಿಕ್ಷಣ ಇದೆ. ಸರ್ಕಾರಗಳು ಶಿಕ್ಷಣಕ್ಕೆ ಒತ್ತು ಮತ್ತು ಪ್ರೋತ್ಸಾಹ ನೀಡುತ್ತಿದೆ. ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಪ್ರಸ್ತುತದಲ್ಲಿ ಮೊಬೈಲ್ ಸಾಧನವು ಮಕ್ಕಳ ಬೆಳವಣಿಗೆಗೆ ಅಡ್ಡಿಪಡಿಸುತ್ತಿದೆ. ಉತ್ತಮ ಮಾಹಿತಿ ಹೊಂದಲು ಬಳಸಿಕೊಂಡು ಗುಣಮಟ್ಟದ ಶಿಕ್ಷಣ ಪಡೆಯುವ ಮೂಲಕ ಸಮಾಜದ ಸತ್ಪ್ರಜೆಯಾಗಿ ಹೊರಹೊಮ್ಮಬೇಕು ಎಂದು ನ್ಯಾಯಾಧೀಶರು ಹುರಿದುಂಬಿಸಿದರು. ವಿದ್ಯಾರ್ಥಿಗಳು ತಮ್ಮ ಸುತ್ತ-ಮುತ್ತಲಿನ ನೆರೆಹೊರೆಯ ನಿಮ್ಮ ಸ್ನೇಹಿತರು ಹಾಗೂ ಬೇರೆ ಯಾರಾದರೂ ಬಾಲಕಾರ್ಮಿಕ ಪದ್ಧತಿಯಲ್ಲಿ ತೊಡಗಿಕೊಂಡಿದ್ದಲ್ಲಿ ಜಾಗೃತಿ ಮೂಡಿಸಬೇಕು ಎಂದು ಕಿವಿಮಾತು ಹೇಳಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, 'ಪ್ರಗತಿ ಸ್ಪಷ್ಟವಾಗಿದ್ದು, ಆದರೆ ಇನ್ನೂ ಹೆಚ್ಚಿನದನ್ನು ಮಾಡಬೇಕಿದೆ: ಪ್ರಯತ್ನಗಳನ್ನು ವೇಗಗೊಳಿಸೋಣ' ಎಂಬ ಈ ವರ್ಷದ ಘೋಷವಾಕ್ಯದಂತೆ ರಾಷ್ಟ್ರ ಕಟ್ಟುವಲ್ಲಿ ಮಕ್ಕಳ ಪಾತ್ರ ಪ್ರಮುಖವಾಗಿದ್ದು, ಅಂತಹ ಮಕ್ಕಳು ಬಾಲಕಾರ್ಮಿಕ ಪದ್ಧತಿಯಲ್ಲಿ ತೊಡಗಿಸಿಕೊಂಡು ಶಿಕ್ಷಣದಿಂದ ವಂಚಿತರಾಗಿದ್ದಲ್ಲಿ ಕಾರ್ಮಿಕ, ಪೊಲೀಸ್ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದು ಹೇಳಿದರು.

ಇದಕ್ಕೂ ಮುನ್ನ ಅಪರ ಜಿಲ್ಲಾಧಿಕಾರಿಯವರು 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಅಂಗವಾಗಿ ಪ್ರತಿಜ್ಞಾವಿಧಿ ಭೋದಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನವೀನ್ ಕುಮಾರ್ ಅವರು ಮಾತನಾಡಿ, ಹದಿನಾಲ್ಕು ವರ್ಷದೊಳಗಿನ ವಯಸ್ಸಿನ ಮಕ್ಕಳನ್ನು ದುಡಿಸಿಕೊಳ್ಳುವುದು ಕಾನೂನು ಬಾಹಿರ. ತಮ್ಮ ಸುತ್ತ-ಮುತ್ತಲಿನಲ್ಲಿ ದುಡಿಯುವ ಮಕ್ಕಳು, ಕಿಶೋರರು ಕಂಡುಬಂದಲ್ಲಿ ಸಹಾಯವಾಣಿ ಸಂಖ್ಯೆ 1098 ಅಥವಾ 112 ಗೆ ಕರೆಮಾಡಿ ಮಾಹಿತಿ ನೀಡಬಹುದು ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿಯಾಗಿ ವಕೀಲರು ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಮಾಜಿ ಸದಸ್ಯರಾದ ತ್ರಿವೇಣಿ ಪತ್ತಾರ್ ಅವರು ಭಾಗವಹಿಸಿ 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ' ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಚಿಗುರು ಕಲಾ ತಂಡದ ಹುಲುಗಪ್ಪ ಅವರಿಂದ 'ಶಾಲೆಯಿಂದ ಹೊರಗುಳಿದ ಮಗು'ವಿನ ಕುರಿತು ಗಾಯನ ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ವಿಜಯಲಕ್ಷ್ಮಿ ಮೈದೂರು, ಬಳ್ಳಾರಿ ಉಪ ವಿಭಾಗ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಜಿ. ಖೈನೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್, ಅಧಿಕಾರಿ ರಾಮಕೃಷ್ಣ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆನಾಗಪ್ಪ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಪಿ.ರಾಮಬ್ರಹ್ಮಂ, ಕಾರ್ಯದರ್ಶಿ ಸಿ.ಎ ಗುರುಬಸವರಾಜ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ.ಮೌನೇಶ್, ಕಾರ್ಮಿಕ ನಿರೀಕ್ಷಕರಾದ ಪರಶುರಾಮ್, ರಮೇಶ್ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ಅಂಗನವಾಡಿ ಕಾರ್ಯಕರ್ತೆಯರು ಮತ್ತು ವಿವಿಧ ಶಾಲಾ-ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

**ಜಾಗೃತಿ ಜಾಥ :** ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಜಾಥಾವು ಜನಸಾಮಾನ್ಯರಲ್ಲಿ ಅರಿವು ಮೂಡಿಸಲು ವಿವಿಧ ಘೋಷಣೆಗಳ ಫಲಕಗಳನ್ನು ಹಿಡಿದು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿದ್ದು ವಿಶೇಷವಾಗಿತ್ತು.

ಜಾಥಾವು ಹಳೆ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ-ಬೆಂಗಳೂರು ರಸ್ತೆ-ತೇರು ಬೀದಿ ಮೂಲಕ ಹೆಚ್.ಆರ್.ಗವಿಯಪ್ಪ ವೃತ್ತ ಮಾರ್ಗವಾಗಿ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದವರೆಗೆ ತಲುಪಿ ಯಶಸ್ವಿಗೊಂಡಿತು.

# ಬಾಲಕಾರ್ಮಿಕ ಪದ್ಧತಿ ನಾಗರಿಕ ಸಮಾಜದ ಕಳಂಕ : ನ್ಯಾ. ಸಂತೋಷ್ ಎಂ.ಎಸ್.

**ಶಿವಮೊಗ್ಗ :** ಬಾಲಕಾರ್ಮಿಕ ಪದ್ಧತಿ ಈ ಸಮಾಜದ ಅನಿಷ್ಠ ಹಾಗೂ ಕಳಂಕವಾಗಿದ್ದು, ಅದನ್ನು ಬೇರುಸಹಿತ ಕಿತ್ತುಹಾಕುವಲ್ಲಿ ಸಮಾಜದ ಎಲ್ಲಾ ಸ್ಥರದ ನಾಗರೀಕರು ಸಹಕರಿಸುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ್ಎಂ.ಎಸ್.ಅವರು ಹೇಳಿದರು.

ಅವರು ಜಿಲ್ಲಾ ಕಾರ್ಮಿಕ ಇಲಾಖೆಯು ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಶಿಕ್ಷಣ ಇಲಾಖೆ, ಜಿಲ್ಲಾ ವಕೀಲರ ಸಂಘ ಮತ್ತು ಶಿವಮೊಗ್ಗ ಹಾಲು ಒಕ್ಕೂಟ ಇವರುಗಳ ಸಂಯುಕ್ತಾಶ್ರಯದಲ್ಲಿ ನಗರದ ಸರ್ಕಾರಿ ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿದ್ದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.

ಮೇಲು-ಕೀಳು, ಜಾತಿ-ಮತ-ಪಂಥಗಳೆಲ್ಲವನ್ನು ಮೀರಿ, ಈ ಸಮಾಜದ ಪ್ರತಿ ವ್ಯಕ್ತಿಯೂ ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸಲು ಮುಂದಾಗಬೇಕು. ಶಿಕ್ಷಣ ಪಡೆದ ಎಲ್ಲರೂ ಸಮಾಜದ ಮುಖ್ಯವಾಹಿನಿಯಲ್ಲಿ ಗುರುತಿಸಿಕೊಳ್ಳುವಂತಾಗಬೇಕು ಮಾತ್ರವಲ್ಲ ಅವರು ಭವಿಷ್ಯದಲ್ಲಿ ನೆಮ್ಮದಿಯ ಜೀವನ ನಿರ್ವಹಣೆಗೆ ಸೂಕ್ತ ವಾತಾವರಣ ಕಲ್ಪಿಸುವಲ್ಲಿ ಮಾರ್ಗದರ್ಶಿಗಳಾಗಬೇಕೆಂದವರು ನುಡಿದರು.

ಅನೇಕ ಕಡೆಗಳಲ್ಲಿ ಇಂದಿಗೂ ಅಸಂಖ್ಯಾತ ಬಾಲಕರನ್ನು ಅತ್ಯಂತ ಕಡಿಮೆ ಕೂಲಿಗೆ ಬಳಸಿಕೊಂಡು ಅವರ ಬಾಲ್ಯವನ್ನು ಕಿತ್ತುಕೊಳ್ಳುತ್ತಿದ್ದಾರೆ. ಅಲ್ಲದೇ ಅವರ ಭವಿಷ್ಯಕ್ಕೆ ಪೆಟ್ಟು-ಕೊಡುತ್ತಿದ್ದಾರೆ. ಇದರಿಂದಾಗಿ ಅನೇಕ ಸಂದರ್ಭಗಳಲ್ಲಿ ಮಾನವ ಕಳ್ಳಸಾಗಾಣೆ ಪ್ರಕರಣಗಳೂ ಗೋಚರಿಸುತ್ತಿವೆ. ಮಕ್ಕಳು ಬಾಲಕಾರ್ಮಿಕರಾಗಿ ತಮ್ಮ ಅಮೂಲ್ಯ ಬಾಲ್ಯವನ್ನು ಕಳೆದುಕೊಳ್ಳುತ್ತಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ. ಸರ್ಕಾರಗಳು ಈ ನಿಟ್ಟಿನಲ್ಲಿ ಅನೇಕ ಕಾಯ್ದೆ-ಕಾನೂನುಗಳನ್ನು ಜಾರಿಗೊಳಿಸಿದ್ದಾಗ್ಯೂ ಈ ಅನಿಷ್ಟ ಇನ್ನೂ ಜೀವಂತವಾಗಿರುವುದು ನಾಗರಿಕ ಸಮಾಜ ತಲೆತಗ್ಗಿಸುವ ಸಂಗತಿಯಾಗಿದೆ ಎಂದರು.

ಬಾಲಕಾರ್ಮಿಕರನ್ನು ಕೆಲಸ-ಕಾರ್ಯದಿಂದ ಮುಕ್ತಿಗೊಳಿಸಿ, ಅವರಿಗೆ ಗುಣಮಟ್ಟದ ಶಿಕ್ಷಣ ಕೊಡಿಸುವ ನಿಟ್ಟಿನಲ್ಲಿ ಎಲ್ಲರೂ ಶ್ರಮಿಸಬೇಕು. ಬಾಲಕಾರ್ಮಿಕರನ್ನು ಬಳಸಿ ಉತ್ಪಾದಿಸುವ ಯಾವುದೇ ವಸ್ತುಗಳನ್ನು ಖರೀದಿಸಿ ಪ್ರೋತ್ಸಾಹಿಸುವುದನ್ನು ತಕ್ಷಣದಿಂದ ನಿಲ್ಲಿಸುವಂತೆ ಸೂಚಿಸಿದ ಅವರು ಉಚಿತ ಮತ್ತು ಕಡ್ಡಾಯ ಶಿಕ್ಷಣ ಮಗುವಿನ ಹಕ್ಕು. ಅದನ್ನು ಪ್ರತಿ ಮಗುವಿಗೆ ದೊರಕಿಸಿಕೊಡುವುದು ಪ್ರತಿ ನಾಗರೀಕರ ಕರ್ತವ್ಯವಾಗಿದೆ ಎಂದರು.

ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆಯ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದು, ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ. ಕಾರ್ಮಿಕ ಪದ್ಧತಿಯನ್ನು ಪ್ರೋತ್ಸಾಹಿಸುವ ಪೋಷಕರಿಗೂ ಕಾನೂನಿನಲ್ಲಿ ಶಿಕ್ಷೆಗೆ ಅವಕಾಶವಿರುವುದನ್ನು ಮರೆಯಬಾರದು. ಸಾರ್ವಜನಿಕರು ಅಂತಹ ಮಕ್ಕಳ ಶಿಕ್ಷಣ ಮತ್ತು ಪುನರ್ವಸತಿಗೆ ಸಹಕರಿಸುವಂತೆ ಅವರು ಮನವಿ ಮಾಡಿದರು.

ಕಾರ್ಯಕ್ರಮಕ್ಕೂ ಮುನ್ನ ಬೆಳಿಗ್ಗೆ 9.30ಕ್ಕೆ ನಗರದ ಶಿವಪ್ಪನಾಯಕ ವರ್ತುಲದಿಂದ ಬಿ.ಹೆಚ್.ರಸ್ತೆಯ ಸರ್ಕಾರಿ ಪ್ರೌಢಶಾಲೆಯವರೆಗೆ ಸ್ಥಬ್ಧ ಚಿತ್ರದ ವಾಹನದ ಮೆರವಣಿ ಹಾಗೂ ಕರಪತ್ರಗಳ ಮೂಲಕ ಕಾನೂನು ಅರಿವು ಜಾಥಾ-ಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ನ್ಯಾ. ಮಂಜುನಾಥ ನಾಯಕ್ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ವೇದಿಕೆ ಕಾರ್ಯಕ್ರಮದಲ್ಲಿ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಜಿ.ಆರ್.ರಾಘವೇಂದ್ರಸ್ವಾಮಿ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ತಾಜುದ್ದೀನ್ಖಾನ್, ಕಾರ್ಮಿಕ ನಿರೀಕ್ಷಕಿ ಶ್ರೀಮತಿ ಸುಖಿತಾ ಕೆ.ಸಿ., ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕ ರಘುನಾಥ್ಎ.ಎಸ್.ಮತ್ತಿತರರು ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ದಾದಾಪೀರ್ಮತ್ತಿತರರು ಉಪಸ್ಥಿತರಿದ್ದರು.

# ಬೋಧನೆ ಮಾಡುವ ಗುರುವಿಗೆ ಪ್ರಶಸ್ತಿ ಪುರಸ್ಕಾರಗಳು ಮುಖ್ಯವೆನಿಸುವುದಿಲ್ಲ : ಶ್ರೀ ಸಿದ್ಧಬಸವ ಕಬೀರ ಶ್ರೀಗಳು




**ಚಿತ್ರದುರ್ಗ :** ಬೋಧನೆ ಮಾಡುವ ಗುರುವಿಗೆ ಪ್ರಶಸ್ತಿ ಪುರಸ್ಕಾರಗಳು ಮುಖ್ಯವೆನಿಸುವುದಿಲ್ಲ. ಅವರಿಂದ ಕಲಿತ ವಿದ್ಯಾರ್ಥಿಗಳು ಸಮಾಜದಲ್ಲಿ ಉತ್ತಮ ವ್ಯಕ್ತಿಯಾಗಿ ರೂಪುಗೊಂಡರೆ ಅದುವೇ ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗಿರುತ್ತದೆ ಎಂದು ಜೇವರ್ಗಿ ಮರುಳಶಂಕರ ಗುರುಪೀಠದ ಶ್ರೀ ಸಿದ್ಧಬಸವ ಕಬೀರ ಸ್ವಾಮಿಗಳು ಅಭಿಪ್ರಾಯಪಟ್ಟರು.

ನಗರದ ಚಂದ್ರವಳ್ಳಿಯ ಎಸ್.ಜೆ.ಎಂ. ಪದವಿ ಕಾಲೇಜಿನಲ್ಲಿಂದು ನಡೆದ 2024-25ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳ ಸಮಾರೋಪ ಹಾಗೂ ಅಂತಿಮ ಪದವಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭದ ದಿವ್ಯಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಶಿಕ್ಷಕ ದಡ್ಡನಾದರೆ ಇಡೀ ತಲೆಮಾರು ದಡ್ಡರಾಗುತ್ತಾರೆ. ಸ್ಟೂಡೆಂಟ್ ಲೈಫ್ ಈಸ್ ಗೋಲ್ಡನ್ ಲೈಫ್ ಎನ್ನುವ ಹಾಗೆ ವಿದ್ಯಾರ್ಥಿ ಜೀವನ ಬಂಗಾರವಾಗಬೇಕಾದರೆ ಬಂಗಾರವು ಯಾವ ರೀತಿ ಕಠಿಣ ರೀತಿಯ ಕೆಲಸದಿಂದ ನಿರ್ಮಾಣವಾಗುತ್ತದೆಯೋ ಹಾಗೆ ವಿದ್ಯಾರ್ಥಿಗಳು ಹಲವು ಪರೀಕ್ಷೆಗಳನ್ನು ಪಾಸಾದರೆ ಮಾತ್ರ ಅವರ ಜೀವನವು ಬಂಗಾರವಾಗುತ್ತದೆ. ಯಾವುದೇ ಜಾತಿ ಧರ್ಮವಿರಲಿ ನಾವು ಭಾರತೀಯ ಮಕ್ಕಳು. ಬದುಕಿನ ಭವಿಷ್ಯ ನಿರ್ಧಾರವಾಗುವುದು ನಮ್ಮ ಆಲೋಚನೆ ಮತ್ತು ನಿರ್ಧಾರಗಳಿಂದ. ಹಾಗಾಗಿ ವಿದ್ಯಾರ್ಥಿಗಳು ಮೌಢ್ಯತೆ ಮತ್ತು ಜಾತಿ ವ್ಯವಸ್ಥೆಯಿಂದ ದೂರ ಇರಬೇಕೆಂದು ಕರೆ ನೀಡಿದರು.

ಮುಖ್ಯಅತಿಥಿ ಸರ್ಕಾರಿ ಮಹಿಳಾ ಪ್ರಥಮದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಹೆಚ್. ಗುಡ್ಡದೇಶ್ವರಪ್ಪ ಮಾತನಾಡಿ, ವಿದ್ಯಾರ್ಥಿಗಳಿಗೆ ವಿದ್ಯೆಯ ಜತೆಗೆ ಸಂಸ್ಕಾರ ಮತ್ತು ವಿನಯ ಬಹಳ ಮುಖ್ಯ. ಜ್ಞಾನಕ್ಕೆ ಶೋಭೆ ಬರಬೇಕೆಂದರೆ ನಡೆ, ನುಡಿ, ಆಚಾರ ವಿಚಾರ ಶುದ್ಧವಾಗಿದ್ದರೆ ಉತ್ತಮ ವ್ಯಕ್ತಿಯಾಗಿ ರೂಪುಗೊಳ್ಳಲು ಹಾಗೂ ಸ್ವಚ್ಛ ಸಮಾಜ ನಿರ್ಮಾಣವಾಗಲು ಸಾಧ್ಯ. ಯುವಪೀಳಿಗೆ ದುಶ್ಚಟಗಳಿಂದ ದೂರವಿರಬೇಕು. ಕೇವಲ ಜೀವಂತವಾಗಿದ್ದರೆ ಮನುಷ್ಯನಾಗುವುದಿಲ್ಲ. ಇನ್ನೊಬ್ಬರ ನೋವನ್ನು ಅರ್ಥ ಮಾಡಿಕೊಂಡರೆ ಮಾತ್ರ ನಾವು ಪಡೆದುಕೊಳ್ಳುವ ಪದವಿಗೆ ಅರ್ಥ ಬರುತ್ತದೆ ಎಂದರು.

ವಿದ್ಯಾರ್ಥಿಗಳು ಅತಿಯಾದ ಮೊಬೈಲ್ ಗೀಳಿನಿಂದಾಗಿ ಕುಟುಂಬಕ್ಕೆ ಸಮಾಜಕ್ಕೆ ಹೊರೆಯಾಗುತ್ತಿದ್ದಾರೆ. ಅಲ್ಲದೆ ವ್ಯಕ್ತಿಯ ಆರೋಗ್ಯ ಮತ್ತು ಸಮಾಜದ ಸ್ವಾಸ್ಥ್ಯವು ಹದಗೆಡುತ್ತಿದೆ. ಹಾಗಾಗಿ ಹೆಚ್ಚು ಕಾಲ ಓದಿನ ಕಡೆಗೆ ಗಮನವಿಡಬೇಕು. ಗ್ರಂಥಾಲಯದ ಪುಸ್ತಕಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು. ಜ್ಞಾನಕ್ಕೆ ಹಿರಿದು ಕಿರಿದೆಂಬ ವ್ಯತ್ಯಾಸವಿಲ್ಲ. ಮನುಷ್ಯನಿಗೆ ತಾಳ್ಮೆ, ಸಹನೆ ಇದ್ದರೆ ಸಾಧನೆ ಮಾಡಲು ಸಾಧ್ಯವಾಗುತ್ತದೆ. ನಿಮ್ಮ ಪದವಿ ಮತ್ತು ಸಾಧನೆಗಳು ಸಮಾಜದ ಕಟ್ಟ ಕಡೆಯ ಸಮುದಾಯವನ್ನು ಶೋಷಣೆಗೊಳಪಟ್ಟವರ ಕಣ್ಣೀರು ಹೊರೆಸುವ ಕೆಲಸವನ್ನು ಮಾಡಿದರೆ ನಿಮ್ಮ ಪದವಿ ಸಾಧನೆಯು ಸಾರ್ಥಕವಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಅಂತಿಮ ಪದವಿ ಪೂರೈಸಿದ ವಿದ್ಯಾರ್ಥಿಗಳನ್ನು ಬೀಳ್ಕೊಡಲಾಯಿತು. ಗ್ರಂಥಪಾಲಕ ಡಾ. ಹೆಚ್. ಸತೀಶ್ನಾಯಕ್ ವಾರ್ಷಿಕ ವರದಿ ಮಂಡಿಸಿದರು. ಬಿ.ಎ. ವಿದ್ಯಾರ್ಥಿ ಸತೀಶ್, ಬಿ.ಕಾಂ. ವಿದ್ಯಾರ್ಥಿ ಸಂಗೀತ ಮತ್ತು ಬಿ.ಎಸ್ಸಿ ವಿದ್ಯಾರ್ಥಿಗಳಾದ ಚಿರಂಜೀವಿ, ಸ್ನೇಹ, ಪ್ರಜ್ವಲ್ ಅನಿಸಿಕೆಗಳನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಎನ್.ಎಸ್.ಎಸ್. ಯೋಜನಾಧಿಕಾರಿಗಳಾದ ಪ್ರೊ. ರಜಪೂತ್, ಪ್ರೊ. ನಾಗರಾಜ ಬಿ., ಎನ್.ಸಿ.ಸಿ. ಅಧಿಕಾರಿ ಡಾ. ಹೆಚ್. ಸತೀಶ್ನಾಯಕ್, ಪ್ರಾಧ್ಯಾಪಕರುಗಳಾದ ಡಾ. ಎಸ್. ಆನಂದ್, ಪ್ರೊ. ಹೆಚ್.ಎಂ. ಮಂಜುನಾಥಸ್ವಾಮಿ, ಪ್ರೊ. ಸಿ.ಎನ್. ವೆಂಕಟೇಶ್, ಡಾ. ನಾಜೀರುನ್ನೀಸಾ, ಡಾ. ಬಿ. ರೇವಣ್ಣ, ಪ್ರೊ. ಬಿ.ಎಂ. ಸ್ವಾಮಿ, ಡಾ. ರಮೇಶ್, ಮಧು, ಹೀನಾ, ಮಾಧುರಿ, ನಾಗರಾಜ್, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಭಾಗವಹಿಸಿದ್ದರು.

# ವಿದ್ಯಾರ್ಥಿಗಳು ಪರಿಸರದ ಕಾಳಜಿ ಬೆಳೆಸಿಕೊಳ್ಳಬೇಕು: ಕವಿತಾ ಘೋರತ್

**ಶಿವಮೊಗ್ಗ :** ವಿದ್ಯಾರ್ಥಿಗಳು ಪರಿಸರದ ಕಾಳಜಿಯನ್ನು ಬೆಳೆಸಿಕೊಳ್ಳಬೇಕು ಎಂದು ಅಸಂಘಟಿತ ಕೂಲಿ ಕಾರ್ಮಿಕರ ಸಂಘದ ಮಹಿಳಾ ಜಿಲ್ಲಾಧ್ಯಕ್ಷೆ ಕವಿತಾ ಘೋರತ್ ಹೇಳಿದರು.




ಅವರು ಶಿವಮೊಗ್ಗ ಮಲ್ಟಿಪರ್ಪಸ್ ಸೋಶಿಯಲ್ ಸರ್ವೀಸ್ ಸೊಸೈಟಿಯಿಂದ ಆಯನೂರಿನ ಮಂಡಘಟ್ಟ ಗ್ರಾಮದಲ್ಲಿರುವ ಸರ್ಕಾರಿ ಶಾಲೆಯಲ್ಲಿ ಆಯೋಜಿಸಿದ್ದ ಚೈತ್ರದ ಚಿಗುರು ಮತ್ತು ಪರಿಸರ ದಿನಾಚರಣೆ ಕಾರ್ಯಕ್ರಮಲ್ಲಿ ಮಾತನಾಡಿದರು.

ಪರಿಸರವನ್ನು ಉಳಿಸಿದರೆ ನಾವು ಉಳಿಯುತ್ತೇವೆ. ಆದ್ದರಿಂದ ಪರಿಸರವನ್ನು ನಾಶಮಾಡದೇ ಪರಿಸರ ಉಳಿವಿಗಾಗಿ ಪ್ರತಿಯೊಬ್ಬರು ಜಾಗೃತರಾಗಬೇಕು. ಪ್ಲಾಸ್ಟಿಕ್ ವಸ್ತುಗಳ ಬಳಕೆಯಿಂದ ಪರಿಸರ ನಾಶವಾಗುತ್ತದೆ. ಪ್ಲಾಸ್ಟಿಕ್‌ನಿಂದ ಪ್ರಾಣಿ ಸಂಕುಲದ ಮೇಲೂ ಪರಿಣಾಮ ಬೀರುತ್ತಿದೆ. ಪ್ಲಾಸ್ಟಿಕ್ ವಸ್ತುಗಳನ್ನು ಬಳಸದಿರುವಂತೆ ಮಕ್ಕಳಲ್ಲಿ ಅರಿವು ಮೂಡಿಸಿದರು.

ಹಸರೀಕರಣಕ್ಕೆ ಆದ್ಯತೆ ಕೊಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಮುಂದಿನ ಪೀಳಿಗೆಗೂ ಪರಿಸರ ಉಳಿಯಬೇಕು. ಪ್ರಾಣಿ, ಪಕ್ಷಿಗಳು ನಮ್ಮೊಂದಿಗೆ ಜೀವಿಸುತ್ತವೆ. ನಮ್ಮ ರಾಜ್ಯದಲ್ಲಿ ಪರಿಸರ ಎಂದರೆ ತಕ್ಷಣ ನೆನಪಾಗುವ ಹೆಸರು ಸಾಲುಮರದ ತಿಮ್ಮಕ್ಕ. ನೂರಾರು ಸಸಿಗಳನ್ನು ನೆಟ್ಟು ಪರಿಸರಕ್ಕೆ ಕೊಡುಗೆ ನೀಡಿರುವ ತಿಮ್ಮಕ್ಕ, ತಾವು ನೆಟ್ಟ ಸಾಲು ಸಸಿಗಳಿಂದಲೇ ಸಾಲು ಮರದ ತಿಮ್ಮಕ್ಕ ಎಂಬ ಹೆಸರು ಪಡೆದುಕೊಂಡರು ಎಂದರು.

ಕಾರ್ಯಕ್ರಮದಲ್ಲಿ ಫಾದರ್ ಡಿಸೋಜ, ಸೊಸೈಟಿಯ ಕುಮುದ, ಜಗದೀಶ್, ವಸೂದ, ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಅಪಾಯಕಾರಿ ಜಾಗ; ಮಧ್ಯಪ್ರಾಚ್ಯದಿಂದ ಕೆಲ ಸೈನ್ಯ ತುಕಡಿ ಸ್ಥಳಾಂತರಿಸುವ ನಿರ್ಧಾರ ಘೋಷಿಸಿದ ಡೊನಾಲ್ಡ್ ಟ್ರಂಪ್!

**ವಾಷಿಂಗ್ಟನ್ ಡಿಸಿ:** ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಯಾವ ಕ್ಷಣದಲ್ಲಿ ಯಾವ ನಿರ್ಧಾರ ತೆಗೆದುಕೊಳ್ಳುತ್ತಾರೆ ಎಂಬುದನ್ನು ಊಹಿಸುವುದು ಕಷ್ಟ. ಅದರಲ್ಲೂ ಮಧ್ಯಪ್ರಾಚ್ಯ ವಿಚಾರದಲ್ಲಿ ಅತ್ಯಂತ ಎಚ್ಚರಿಕೆಯ ಹೆಜ್ಜೆ ಇಡುತ್ತಿರುವ ಅವರು, ಈ ಪ್ರದೇಶದಲ್ಲಿ ಅಮೆರಿಕದ ಪ್ರಭಾವವನ್ನು ಉಳಿಸಿಕೊಳ್ಳುವ ಪ್ರಯತ್ನವನ್ನು ಮುಂದುವರೆಸಿದ್ದಾರೆ.



ಆದರೆ ಇರಾನ್ ಜೊತೆಗಿನ ಅಮೆರಿಕದ ರಾಜತಾಂತ್ರಿಕ ಸಂಬಂಧ ಹದಗೆಟ್ಟಿರುವ ಹಿನ್ನೆಲೆಯಲ್ಲಿ, ಮಧ್ಯಪ್ರಾಚ್ಯದಲ್ಲಿ ಹೆಚ್ಚಿನ ಮಿಲಿಟರಿ ಪ್ರಭಾವ ಇರುವಂತೆ ನೋಡಿಕೊಳ್ಳಲು ಡೊನಾಲ್ಡ್ ಟ್ರಂಪ್ ನಿರ್ಧರಿಸಿದ್ದಾರೆ. ಅದರಂತೆ ಇತ್ತೀಚೆಗಷ್ಟೇ ಅರಬ್ಬೀ ಸಮುದ್ರಕ್ಕೆ ಅಮೆರಿಕದ ಎರಡು ಯುದ್ಧ ನೌಕೆಗಳಾದ ಹ್ಯಾರಿ ಎಸ್. ಟ್ರೂಮನ್ ಮತ್ತು ಯುಎಸ್ಎಸ್ ಕಾರ್ಲ್ ವಿನ್ಸನ್ ರವಾನೆ ಮಾಡುವ ಆದೇಶ ಕೂಡ ಹೊರಡಿಸಿದ್ದರು.

ಆದರೆ ಈಗ ಏಕಾಏಕಿ ತಮ್ಮ ನಿರ್ಧಾರ ಬದಲಾಯಿಸಿರುವ ಡೊನಾಲ್ಡ್ ಟ್ರಂಪ್, ಮಧ್ಯಪ್ರಾಚ್ಯದಿಂದ ಅಮೆರಿಕದ ಕೆಲವು ಸೈನ್ಯ ತುಕಡಿಗಳನ್ನು ಸ್ಥಳಾಂತರಿಸುವ ಘೋಷಣೆ ಮಾಡಿದ್ದಾರೆ. ಮಧ್ಯಪ್ರಾಚ್ಯವನ್ನು "ಅಪಾಯಕಾರಿ ಜಾಗ" ಎಂದು ಕರೆದಿರುವ ಡೊನಾಲ್ಡ್ ಟ್ರಂಪ್, ಇರಾಕ್‌ನಲ್ಲಿರುವ ಅಮೆರಿಕದ ರಾಯಭಾರ ಕಚೇರಿಯನ್ನೂ ಭಾಗಶಃ ಸ್ಥಳಾಂತರಿಸುವ ಬಗ್ಗೆ ಚಿಂತಿಸುತ್ತಿದ್ದಾರೆ.

# ಜಾತಿ ಗಣತಿ ಮರು ಸಮೀಕ್ಷೆ: ಕಾಂಗ್ರೆಸ್ ವಲಯದಲ್ಲಿ ಆಂತರಿಕ ಅಪಸ್ವರ, ಸಂಪುಟ ಸಭೆಯತ್ತ ನೆಟ್ಟ ಚಿತ್ತ



**ಬೆಂಗಳೂರು:** ಜಾತಿ ಗಣತಿ ಮರು ಸಮೀಕ್ಷೆ ಇದೀಗ ಪರ ಹಾಗೂ ವಿರೋಧ ಚರ್ಚೆಗೆ ಎಡೆಮಾಡಿಕೊಟ್ಟಿದೆ. ಮರು ಸಮೀಕ್ಷೆಯ ಬಗ್ಗೆ ಕಾಂಗ್ರೆಸ್‌ನಲ್ಲೇ ಅಪಸ್ವರ ಎದ್ದಿದ್ದು, ಆಂತರಿಕವಾಗಿ ಚರ್ಚೆಯನ್ನು ಹುಟ್ಟುಹಾಕಿದೆ.

ಕಾಂತರಾಜು ಆಯೋಗದ ವರದಿಯಲ್ಲಿರುವ ಅಂಕಿ-ಅಂಶಗಳು ಬಹಿರಂಗ ಆಗದೆ ಇದ್ದರೂ ದತ್ತಾಂಶ ಸರಿ ಇಲ್ಲ ಎಂಬ ವಿಚಾರ ಮುಂದಿಟ್ಟುಕೊಂಡು ಮರು ಸಮೀಕ್ಷೆಗೆ ಮುಂದಾಗಿದ್ದು ಹಿಂದುಳಿದ ವರ್ಗಗಳಿಗೆ ಮಾಡಿರುವ ಅನ್ಯಾಯ ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ.

ಸಾಮಾಜಿಕ ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಜಾತಿ ಗಣತಿ ಎಂದೇ ಗುರುತಿಸಿಕೊಂಡಿದೆ. ಜಾತಿ ಗಣತಿ ವರದಿಯನ್ನು ಶಾಶ್ವತ ಹಿಂದುಳಿದ ಆಯೋಗದ ಅಧ್ಯಕ್ಷರಾಗಿದ್ದ ಜಯಪ್ರಕಾಶ್ ಹೆಗ್ಡೆ ಅವರು ಸಿಎಂ ಸಿದ್ದರಾಮಯ್ಯ ಅವರಿಗೆ ಸಲ್ಲಿಸಿದ್ದರು. ವರದಿಯನ್ನು ಸಚಿವ ಸಂಪುಟ ಸಭೆಯಲ್ಲಿ ಮಂಡಿಸಲಾಗಿತ್ತು. ಆದರೆ ವರದಿಗೆ ಅಪಸ್ವರ ಕೇಳಿ ಬಂದಿತ್ತು. ಅದರಲ್ಲೂ ಒಕ್ಕಲಿಗ ಮತ್ತು ಲಿಂಗಾಯತ ಸಮುದಾಯ ವರದಿಯ ಬಗ್ಗೆ ತಮ್ಮ ಆಕ್ಷೇಪ ಎತ್ತಿದ್ದವು. ಮರು ಸಮೀಕ್ಷೆಗೆ ಆಗ್ರಹಿಸಿದ್ದವು.

ಇದೀಗ ದೆಹಲಿಯಲ್ಲಿ ಜಾತಿ ಗಣತಿ ವರದಿ ಮರು ಸಮೀಕ್ಷೆಯ ಬಗ್ಗೆ ತೀರ್ಮಾನ ಕೈಗೊಳ್ಳಲಾಗಿದೆ. ಸರ್ಕಾರದ ಅಧಿಕೃತ ನಿರ್ಧಾರವನ್ನು ಸಿಎಂ ಸಿದ್ದರಾಮಯ್ಯ ತಿಳಿಸುವ ಮೊದಲೇ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ ಸಿ ವೇಣುಗೋಪಾಲ್ ಮಾಧ್ಯಮಗಳಿಗೆ ತಿಳಿಸಿದ್ದರು. ಬಳಿಕ ಡಿಸಿಎಂ ಡಿಕೆ ಶಿವಕುಮಾರ್ ಪ್ರತ್ಯೇಕ ಪತ್ರಿಕಾಗೋಷ್ಠಿಯನ್ನು ನಡೆಸಿ ಜಾತಿ ಗಣತಿ ಮರು ಸಮೀಕ್ಷೆ ನಡೆಯಲಿದೆ.

# ಸುಂದರ ನಗರ ನಿರ್ಮಾಣಕ್ಕೆ ನಾಗರೀಕರು ಕೈಜೋಡಿಸಲು ಮನವಿ : ಸುಂದರೇಶ್



**ಶಿವಮೊಗ್ಗ :** ಮಲೆನಾಡು ಭಾಗದಲ್ಲಿ ಹಸಿರು ಉಳಿಸಲು ಮತ್ತು ಆರೋಗ್ಯಕರ ಜೀವನ ನಡೆಸಲು ಉದ್ಯಾನವನಗಳಲ್ಲಿ ಜಿಮ್, ಮಕ್ಕಳ ಆಟಿಕೆ ಅಳವಡಿಕೆ ಸೇರಿದಂತೆ ಸುಂದರ ನಗರ ನಿರ್ಮಾಣಕ್ಕೆ ಸೂಡಾ ಪ್ರಯತ್ನಪಡುತ್ತಿದ್ದು ನಗರದ ನಾಗರೀಕರು ಸಹ ಕೈಜೋಡಿಸಬೇಕೆಂದು ಶಿವಮೊಗ್ಗ-ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್ ಎಸ್ ಸುಂದರೇಶ್ ಕೋರಿದರು.

ಗುರುವಾರ ನಗರದ ಗೋಪಿಶೆಟ್ಟಿಕೊಪ್ಪದ ಸುರಭಿ ಸಮುದಾಯ ಭವನದ ಹಿಂಭಾಗದ ಉದ್ಯಾನವನದಲ್ಲಿ ಉದ್ಯಾನವನ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಇತ್ತೀಚಿಗೆ ಮಲೆನಾಡು ಬಯಲು ಸೀಮೆಯಾಗುತ್ತಿದೆ. ಹಸಿರು ಕಡಿಮೆಯಾಗುತ್ತಿದೆ. ನಾವು ನಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಚ-ಸುಂದರವಾಗಿಟ್ಟುಕೊಳ್ಳಬೇಕು. ಮನೆ ಸುತ್ತಮುತ್ತ ಗಿಡಗಳನ್ನು ನೆಟ್ಟು ಪೋಷಿಸಬೇಕು. ಇತ್ತೀಚಿನ ವಾತಾವರಣ, ಜೀವನಶೈಲಿ, ಆಹಾರ ಪದ್ದತಿಯಿಂದ ಅನೇಕ ಸಮಸ್ಯೆಗಳು ಎದುರುಗಾಗುತ್ತಿದ್ದು, ಸಾರ್ವಜನಿಕರು ಉತ್ತಮ ಪರಿಸರದಲ್ಲಿ ವಾಯುವಿಹಾರ, ವ್ಯಾಯಾಮ, ಜಿಮ್ ಮಾಡಲು ಉದ್ಯಾನವನಗಳನ್ನು ಅಭಿವೃದ್ದಿಪಡಿಸಲಾಗುತ್ತಿದೆ. ಸೂಡಾ ವತಿಯಿಂದ ಈಗಾಗಲೇ 33 ಪಾರ್ಕುಗಳನ್ನು ಅಭಿವೃದ್ದಿಪಡಿಸಲಾಗುತ್ತಿದ್ದು ಪಾರ್ಕ್ಗಳಲ್ಲಿ ವಾಕಿಂಗ್ ಪಾಥ್, ಜಿಮ್, ಮಕ್ಕಳ ಆಟಿಕೆ ಅಳವಡಿಕೆ ಮಾಡಲಾಗುತ್ತಿದೆ.

ಮುಂದಿನ ದಿನಗಳಲ್ಲಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ 45 ಪಾರ್ಕ್ಗಳನ್ನು ಅಭಿವೃದ್ದಿ ಪಡಿಸಲಾಗುವುದು. ಹಾಗೂ ಪ್ರಸ್ತುತ 17 ಕೆರೆಗಳ ಅಭಿವೃದ್ದಿ ಮಾಡಲು ಕ್ರಮ ವಹಿಸಲಾಗುತ್ತಿದೆ ಎಂದರು. ಗೋಪಿಶೆಟ್ಟಿಕೊಪ್ಪದ ಸುರಭಿ ಸಮುದಾಯ ಭವನದ ಹಿಂಭಾಗದ ಉದ್ಯಾನವನಕ್ಕೆ ರೂ.20 ಲಕ್ಷ ಮೊತ್ತದಲ್ಲಿ ಉದ್ಯಾನವನ ಪ್ರದೇಶವನ್ನು ಸ್ವಚ್ಛಗೊಳಿಸಿ ಸಮತಟ್ಟು ಮಾಡುವುದು, ಉದ್ಯಾನವನದ ಪ್ರದೇಶಕ್ಕೆ ಫೌಂಡೇಶನ್ ಸಹಿತ ಕಾಂಕ್ರಿಟ್ ಪಿಲ್ಲರ್‌ನೊಂದಿಗೆ ಚೈನ್ ಲಿಂಕ್ ಫೆನ್ಸಿಂಗ್ ಮತ್ತು ಗೇಟ್ ಅಳವಡಿಕೆ ಮಾಡಲಾಗುವುದು.

ನಗರದ ಸ್ವಾಮಿ ವಿವೇಕಾನಂದ ಬಡಾವಣೆಯ ಇ-ಬ್ಲಾಕ್ ಉದ್ಯಾನವನದಲ್ಲಿ ರೂ.20 ಲಕ್ಷ ಮೊತ್ತದಲ್ಲಿ ಪ್ಲಾಟ್‌ಫಾರ್ಮ್ ನಿರ್ಮಾಣದೊಂದಿಗೆ 11 ಸಂಖ್ಯೆ ಹೊರಾಂಗಣ ವ್ಯಾಯಾಮ ಸಾಮಗ್ರಿ ಅಳವಡಿಕೆ, ಉದ್ಯಾನವನದಲ್ಲಿ ಸಂಪ್ ನಿರ್ಮಾಣ, ಉದ್ಯಾನವನದಲ್ಲಿ ಫೆನ್ಸಿಂಗ್ ದುರಸ್ತಿಪಡಿಸಲಾಗುವುದು ಎಂದರು.

ನಗರದ ಗೋಪಾಳ ಬಡಾವಣೆ ಡಿ ಮತ್ತು ಇ-ಬ್ಲಾಕ್‌ಗಳ ಉದ್ಯಾನವನದಲ್ಲಿ ರೂ.25 ಲಕ್ಷ ಮೊತ್ತದ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿದ ಅವರು ಉದ್ಯಾನವನದಲ್ಲಿ ಪ್ಲಾಟ್‌ಫಾರ್ಮ್ ನಿರ್ಮಾಣದೊಂದಿಗೆ 09 ಸಂಖ್ಯೆ ಹೊರಾಂಗಣ ವ್ಯಾಯಾಮ ಸಾಮಗ್ರಿ ಅಳವಡಿಕೆ, ಉದ್ಯಾನವನದಲ್ಲಿ ಫೆನ್ಸಿಂಗ್ ದುರಸ್ತಿ, ಹಾಗೂ ಹಾಲಿ ಇರುವ ಪಾಥ್‌ವೇನ ಆಯ್ದ ಭಾಗದಲ್ಲಿ ದುರಸ್ತಿಪಡಿಸುವುದು, ಉದ್ಯಾನವನದಲ್ಲಿ 07 ಸಂಖ್ಯೆ ಸಾದರಳ್ಳಿ ಕಲ್ಲಿನ ಬೆಂಚು ಅಳವಡಿಕೆ ಮಾಡಲಾಗುವುದು ಎಂದರು.

ನಗರದ ಪಂಪಾ ನಗರದಲ್ಲಿರುವ ಮಲೆನಾಡು ಸೊಸೈಟಿ ಪಕ್ಕದ ಉದ್ಯಾನವನದ ಅಭಿವೃದ್ದಿ ಮತ್ತು ಗಾಡಿಕೊಪ್ಪ ಪೊಲೀಸ್ ಲೇಔಟ್ ಉದ್ಯಾನವನದಲ್ಲಿ ಮಕ್ಕಳ ಆಟಿಕೆ ಅಳವಡಿಕೆಗೆ ರೂ.25 ಲಕ್ಷ ಮೊತ್ತದಲ್ಲಿ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು ಉದ್ಯಾನ ವನದಲ್ಲಿ ಪ್ಲಾಟ್‌ಫಾರ್ಮ್ ನಿರ್ಮಾಣದೊಂದಿಗೆ 8 ಸಂಖ್ಯೆ ಹೊರಾಂಗಣದಲ್ಲಿ ವ್ಯಾಯಾಮ ಸಾಮಗ್ರಿ ಅಳವಡಿಕೆ, ಸುಮಾರು 100 ಮೀ ಪಾಥ್‌ವೇ ನಿರ್ಮಾಣ ಹಾಗೂ 03 ಸಂಖ್ಯೆ ಸಾದರಳ್ಳಿ ಕಲ್ಲಿನ ಬೆಂಚು ಅಳವಡಿಕೆ ಮಾಡಲಾಗುವುದು ಎಂದರು.

ಈ ವೇಳೆ ಶಾಸಕರಾದ ಎಸ್ ಎನ್ ಚನ್ನಬಸಪ್ಪ, ಬಡಾವಣೆಗಳ ನಿವಾಸಿಗಳು, ಎಇಇ ಬಸವರಾಜ್, ಇಂಜಿನಿಯರ್ ದಿನೇಶ್ ಇತರರು ಪಾಲ್ಗೊಂಡಿದ್ದರು.

# ಮಾವಿನ ಹಣ್ಣು ಸಾಗಾಣಿಕೆ ನಿಷೇಧವನ್ನು ತೆರವುಗೊಳಿಸುವಂತೆ ಅಂಧ್ರ ಸಿಎಂಗೆ ಪತ್ರ ಬರೆದ ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಂಗಳೂರು, ಜೂ.12-** ಕರ್ನಾಟಕದ ಗಡಿ ಜಿಲ್ಲೆಗಳಿಂದ ಆಂಧ್ರಪ್ರದೇಶದ ಚಿತ್ತೂರಿಗೆ ತೋತಾಪುರಿ ಮಾವಿನ ಹಣ್ಣುಗಳ ಸಾಗಾಣಿಕೆ ನಿಷೇಧವನ್ನು ತೆರವುಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರಿಗೆ ಪತ್ರ ಬರೆದಿರುವ ಅವರು, ಜೂ.7 ರಂದು ಚಿತ್ತೂರಿನ ಜಿಲ್ಲಾಧಿಕಾರಿ ತೋತಾಪುರಿ ಮಾವು ಸಾಗಾಣಿಕೆಯಲ್ಲಿ ನಿರ್ಬಂಧಿಸಿದ್ದಾರೆ.



ಕರ್ನಾಟಕದಿಂದ ಆಂಧ್ರಪ್ರದೇಶಕ್ಕೆ ಮಾವು ಸಾಗಾಣಿಕೆಯನ್ನು ತಡೆಯಲು ಗಡಿಭಾಗದಲ್ಲಿ ಕಂದಾಯ, ಪೊಲೀಸ್, ಅರಣ್ಯ ಮತ್ತು ಮಾರುಕಟ್ಟೆ ಇಲಾಖೆಯ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ತಮಿಳುನಾಡು ಮತ್ತು ಕರ್ನಾಟಕದಿಂದ ಮಾವಿನ ಹಣ್ಣುಗಳ ಸಾಗಾಣಿಕೆಯನ್ನು ತಡೆ ಹಿಡಿಯಲಾಗಿದೆ. ಇದು ಸಮರ್ಥನೀಯವಾದ ಕ್ರಮವಲ್ಲ ಎಂದು ಆಕ್ಷೇಪಿಸಿದ್ದಾರೆ.

ಆಂಧ್ರಪ್ರದೇಶದ ಗಡಿಗೆ ಹೊಂದಿಕೊಂಡ ಕರ್ನಾಟಕದ ಜಿಲ್ಲೆಗಳಲ್ಲಿ ಮಾವಿನ ಹಣ್ಣುಗಳ ಬೆಳೆಗಾರರು ಇದರಿಂದ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಚಿತ್ತೂರಿನಲ್ಲಿರುವ ಮಾವಿನ ಹಣ್ಣು ಸಂಸ್ಕರಣಾ ಘಟಕದೊಂದಿಗೆ ಸುದೀರ್ಘ ಕಾಲದಿಂದಲೂ ಕರ್ನಾಟಕದ ರೈತರು ಸಂಬಂಧ ಹೊಂದಿದ್ದರು. ಇದರಿಂದ ಮಾರುಕಟ್ಟೆ ವಿಸ್ತರಣೆ ನಡೆಯುತ್ತಿದೆ. ಪ್ರಸ್ತುತ ನಿರ್ಬಂಧ, ಚಾಲ್ತಿಯಲ್ಲಿರುವ ಸರಬರಾಜು ಸರಪಳಿಯನ್ನು ಕಡಿತಗೊಳಿಸಿದ್ದು, ಪೂರ್ವ ಮುಂಗಾರು ನಷ್ಟ ಹಾಗೂ ಸಾವಿರಾರು ರೈತರ ಜೀವನದ ಮೇಲೆ ಕೆಟ್ಟ ಪರಿಣಾಮ ಬೀರಲಿದೆ ಎಂದು ವಿವರಿಸಿದ್ದಾರೆ.

ಯಾವುದೇ ಸಮಾಲೋಚನೆ ಹಾಗೂ ಸಮನ್ವಯತೆ ಇಲ್ಲದೆ ತೆಗೆದುಕೊಂಡಿರುವ ಈ ಕ್ರಮ ಒಕ್ಕೂಟ ವ್ಯವಸ್ಥೆಯ ಸ್ಫೂರ್ತಿಗೆ ಧಕ್ಕೆಯಾಗಿದೆ. ಅಂತರಾಜ್ಯಗಳ ನಡುವೆ ತರಕಾರಿ ಮತ್ತು ಕೃಷಿ ವಿನಿಮಯವನ್ನು ಬಾಧಿತಗೊಳಿಸಿದೆ. ಈಗಾಗಲೇ ಸಂಬಂಧಪಟ್ಟವರು ವಹಿವಾಟುಗಳನ್ನು ಕಡಿತಗೊಳಿಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಮತ್ತಷ್ಟು ವ್ಯಾಪಾರ ವಹಿವಾಟಿನ ನಷ್ಟವಾಗುವ ಆತಂಕವಿದೆ ಎಂದು ವಿವರಿಸಿದ್ದಾರೆ.

# ಭಾರತದೇಶದ ಪರಂಪರೆಯ ಸಂಕೇತಯೋಗ



**ಹಾಸನ :** ಭಾರತದೇಶದ ಪವಿತ್ರತೆಯ, ಪರಂಪರೆಯ ಸಂಕೇತಯೋಗ. ಎಲ್ಲರೂಯೋಗವನ್ನು ಮೈಗೂಡಿಸಿಕೊಂಡು ಉತ್ತಮಆರೋಗ್ಯ ಹೊಂದುವಂತೆ ಸಂಸದರಾದ ಶ್ರೇಯಸ್ ಪಟೇಲ್‌ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಯುವ ಸಬಲೀಕರಣ ಮತ್ತುಕ್ರೀಡಾ ಇಲಾಖೆ, ಅರಣ್ಯ ಇಲಾಖೆ, ಭಾರತ ಸ್ಕೌಟ್ಸ್&ಗೈಡ್ಸ್, ಮೇರಾಯುವ ಭಾರತ್, ಎನ್.ಸಿ.ಸಿ, ಭಾರತ ಸೇವಾದಳ ಹಾಗೂ ವಿವಿಧ ಸರ್ಕಾರಿ ಇಲಾಖೆಗಳು ಮತ್ತು ವಿವಿಧಯೋಗ ಸಂಘ ಸಂಸ್ಥೆಗಳ ಸಹಯೋಗದಲ್ಲಿಂದು ಜಿಲ್ಲಾಕ್ರೀಡಾಂಗಣದ ಹಾಕಿ ಮೈದಾನದಲ್ಲಿ ನಡೆದ 11ನೇ ಅಂತರಾಷ್ಟ್ರೀಯಯೋಗ ದಿನಾಚರಣೆಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದಅವರುನಮ್ಮ ದಿನನಿತ್ಯದ ಕೆಲಸಗಳಲ್ಲಿ ಯೋಗವುಒಂದು ಭಾಗವಾಗಿದೆ. ಶಾಲಾ ಕಾಲೇಜುಗಳಲ್ಲಿಯೂ ಯೋಗಾಭ್ಯಾಸವನ್ನು ಮಾಡಿಸುತ್ತಿದ್ದೇವೆ. ನಮ್ಮದೇಶದ ಪತಂಜಲಿ ಯೋಗವುಇಡೀ ಪ್ರಪಂಚಕ್ಕೆ ಶುಭ ಸಂಕೇತಎಂದು ಹೇಳಿದರು.

ಜಿಲ್ಲಾಧಿಕಾರಿ ಲತಾಕುಮಾರಿ ಕೆ. ಎಸ್‌ಅವರು ಮಾತನಾಡಿ ನಮ್ಮದೇಶ ಮತ್ತುದೇಹಒಂದೇಆಗಿದೆ. ನಮ್ಮದೇಹವನ್ನು ಹೇಗೆ ಸದೃಢವಾಗಿ ಇಟ್ಟುಕೊಳ್ಳಬೇಕು ಹಾಗೆಯೇ ನಮ್ಮದೇಶವನ್ನು ಸುಭದ್ರವಾಗಿ ಇಟ್ಟುಕೊಳ್ಳಬೇಕು. ಸದೃಢದೇಹ ಸದೃಢದೇಶದಗುರುತು ಹಾಗಾಗಿ ನಾವೆಲ್ಲರೂಯೋಗವನ್ನು ಮಾಡುವ ಮುಖಾಂತರ ಸದೃಢದೇಹದೊಂದಿಗೆ ಸದೃಢದೇಶವನ್ನು ನಿರ್ಮಾಣ ಮಾಡೋಣ. ಇದಕ್ಕೆಯೋಗವು ಬಹಳ ಮುಖ್ಯ. ಯೋಗವು ನಮ್ಮದೇಹ ಮನಸ್ಸು, ಆತ್ಮ ಈ ಮೂರನ್ನುಒಂದುಗೂಡಿಸುತ್ತದೆ. ನಮಗೆ ನಿಜವಾದಜೀವನದದಾರಿಯನ್ನುತೋರಿಸುತ್ತದೆಎಂದು ತಿಳಿಸಿದರು.ಕಾರ್ಯಕ್ರಮದಲ್ಲಿಮಹಾನಗರ ಪಾಲಿಕೆಯ ಮಹಾಪೌರರಾದಚಂದ್ರೇಗೌಡ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿವಾರ್ಹಕಅಧಿಕಾರಿಪೂರ್ಣಿಮಾಬಿ.ಆರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಹಮ್ಮದ್ ಸುಜೀತಾ, ಕರ್ನಾಟಕರಾಜ್ಯ ಸರ್ಕಾರಿ ನೌಕರರ ಸಂಘದಜಿಲ್ಲಾಅಧ್ಯಕ್ಷರಾದಬಿ.ಪಿ. ಕೃಷ್ಣೆಗೌಡಮತ್ತಿತರರು ಉಪಸ್ಥಿತರಿದ್ದರು. ಯೋಗ ಪ್ರದರ್ಶನದಲ್ಲಿ ವಿದ್ಯಾರ್ಥಿಗಳು, ವಿವಿಧ ಸಂಘ ಸಂಸ್ಥೆಗಳು ಭಾಗವಹಿಸಿದ್ದರು.

# ಕುಂದುವಾಡ ಕೆರೆ ವಾಯು ವಿಹಾರಿಗಳ ಬಳಗದಿಂದ ಯೋಗಾದ್ಯಯನ



**ದಾವಣಗೆರೆ :** 11 ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಯನ್ನು ದಾವಣಗೆರೆಯ ಕುಂದುವಾಡ ಕೆರೆ ವಾಯು ವಿಹಾರಿಗಳ ಬಳಗದಿಂದ ಯೋಗಾಸನ ಮೂಲಕ ಸಂಭ್ರಮದಿಂದ ಆಚರಣೆ ಮಾಡಲಾಯಿತು.

ಕುಂದುವಾಡ ಕೆರೆ ಅಂಗಳದಲ್ಲಿ ಒಂದು ಭೂಮಿ ಒಂದು ಆರೋಗ್ಯಕ್ಕಾಗಿ ಯೋಗ ಎನ್ನುವ ಘೋಷವಾಕ್ಯದಡಿ ಅಂತರಾಷ್ಟ್ರೀಯ ಯೋಗ ಪಟ್ಟು ಸಂತೋಷ್, ಯೋಗ ಗುರು ಹನುಮಂತಪ್ಪ ಅವರುಗಳ ಮಾರ್ಗದರ್ಶನದಲ್ಲಿ ಸಾಮೂಹಿಕವಾಗಿ ಯೋಗಾದ್ಯಯನ ಮಾಡಲಾಯಿತು.

ಯೋಗದಿಂದ ನಮ್ಮ ಶರೀರ ಹಾಗೂ ಆರೋಗ್ಯ ಉತ್ತಮವಾಗಿ ಕಾಪಾಡಿಕೊಳ್ಳಬಹುದು. ಯೋಗ ಕೇವಲ ವ್ಯಾಯಾಮವಷ್ಟೇ ಅಲ್ಲ, ದೈಹಿಕ, ಮಾನಸಿಕ, ಭಾವನಾತ್ಮಕ ಏಳಿಗೆಗೆ ಸಂಜೀವಿನಿಯಾಗಿದೆ. ಪ್ರತಿಯೊಬ್ಬರು ಯೋಗದಿಂದ ಉತ್ತಮ ಆರೋಗ್ಯ ಕಂಡುಕೊಳ್ಳಬಹುದು. ಯೋಗ ಒಂದು ದಿನಕ್ಕೆ ಸೀಮಿತವಾಗಬಾರದು. ಉತ್ತಮ ಆರೋಗ್ಯಕ್ಕಾಗಿ ನಿತ್ಯ ಯೋಗ ಮಾಡಿ ಎಂಬ ಸಂದೇಶ ಸಾರಲಾಯಿತು.

ಇದೇ ವೇಳೆ ಅಂತರಾಷ್ಟ್ರೀಯ ಯೋಗ ಪಟ್ಟು ಸಂತೋಷ್, ಯೋಗ ಗರು ಹನುಮಂತಪ್ಪ ಮತ್ತು ಡಾ. ರಘು ಪ್ರಸಾದ್ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಕುಂದುವಾಡ ಕೆರೆ ವಾಯು ವಿಹಾರಿಗಳು ಇದ್ದರು.

## ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ದಿ ನಿಗಮದಿಂದ ಅರ್ಜಿ ಆಹ್ವಾನ

**ಶಿವಮೊಗ್ಗ:** ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ದಿ ನಿಗಮದಿಂದ 2025–26 ನೇ ಸಾಲಿಗೆ ಸಾಲ–ಸೌಲಭ್ಯ ಒದಗಿಸಲು ಅರ್ಜಿ ಆಹ್ವಾನಿಸಲಾಗಿದೆ.

ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಬ್ಯಾಂಕ್‌ಗಳ ಸಹಯೋಗದೊಂದಿಗೆ ಆರ್ಯ ವೈಶ್ಯ ಆಹಾರ ವಾಹಿನಿ/ವಾಹಿನಿ ಯೋಜನೆ, ವಾಸತಿ ಜಲಶಕ್ತಿ ಯೋಜನೆ. ಅರಿವು ಶೈಕ್ಷಣಿಕ ಸಾಲ ಯೋಜನೆ–ಸಿಇಟಿ, ಎನ್‌ಇಇಟಿ ಕೌನ್ಸಲಿಂಗ್ ಮುಗಿದ ನಂತರ ಅರ್ಜಿ ಆಹ್ವಾನಿಸಲಾಗುವುದು.

ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದಲ್ಲಿ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿದವರಾಗಿರಬೆಕು ಮತ್ತು ನಮೂನೆ–ಜಿ ಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು. ಅರ್ಜಿದಾರರು ಕರ್ನಾಟಕ ರಾಜ್ಯದವರಾಗಿದ್ದು ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು. ಅರ್ಜಿದಾರರ ಮೊಬೈಲ್ ಸಂಖ್ಯೆಯು ಆಧಾರ್ ಸಂಖ್ಯೆಗೆ ಜೋಡಣೆಯಾಗಿರಬೇಕು ಮತ್ತು ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಆಗಿರಬೇಕು.

ಅರ್ಹ ಅರ್ಜಿದಾರರುಗಳನ್ನು ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಜಿಲ್ಲಾ ಮಟ್ಟದ ಆಯ್ಕೆ ಸಮಿತಿಯ ಮೂಲಕ ಆಯ್ಕೆ ಮಾಡಲಾಗುವುದು. 2019–20 ನೇ ಸಾಲಿನಿಂದ 2021–22 ನೇ ಸಾಲಿನವರೆಗೆ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಡಿ ಸಾಲ ಪಡೆದು ಸಕಾಲದಲ್ಲಿ ಸಾಲವನ್ನು ಪೂರ್ಣ ಪ್ರಮಾಣದಲ್ಲಿ ಮರುಪಾವತಿಸಿದ ಫಲಾನುಭವಿಗಳಿಗೆ ಪುನಃ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಹೆಚ್ಚಿನ ವಿವರಗಳಿಗೆ ನಿಗಮದ ಸಹಾಯವಾಣಿ ಸಂಖ್ಯೆ 9448451111, ವೆಬ್‌ಸೈಟ್ ಇಚಿಥಿಜಥಿ.ಇಚಿಡಿಟಿಚಿಣಚಿಇಚಿ.ರಠತಿ.ಟಿ ಇಲ್ಲಿ ಹಾಗೂ ಭಾಗ್ಯ ನಿಲಯ, ಭಂಡಾರಿ ಗ್ಯಾಸ್ ಏಜೆನ್ಸಿ ಹತ್ತಿರ, 1ನೇ ಪ್ಯಾರಲಲ್ ರಸ್ತೆ, ಗಾಂಧಿನಗರ, ಶಿವಮೊಗ್ಗ 577201 ನ್ನು ಸಂಪರ್ಕಿಸಬಹುದೆಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

## ತೋಟಗಾರಿಕೆ ಇಲಾಖೆಯಿಂದ ಯಾಂತ್ರೀಕರಣಕ್ಕೆ ಸಹಾಯಧನ

**ಚಿಕ್ಕಮಗಳೂರು:** 2025–26 ನೇ ಸಾಲಿನ ಕೃಷಿ ಯಾಂತ್ರೀಕರಣ ಉಪ ಅಭಿಯಾನ "ಕರ್ನಾಟಕ ರಾಜ್ಯದಲ್ಲಿ ತೋಟಗಾರಿಕೆಯಲ್ಲಿ ಯಾಂತ್ರೀಕರಣ" ಕಾರ್ಯಕ್ರಮದಡಿ ತೋಟಗಾರಿಕೆ ಇಲಾಖೆಯಿಂದ ಅನುಮೋದಿಸಲ್ಪಟ್ಟ ವಿವಿಧ ಸರಬರಾಜು ಸಂಸ್ಥೆಗಳಿಂದ ರೈತರು ಖರೀದಿಸುವ ಯಂತ್ರೋಪಕರಣಗಳಿಗೆ ಸಹಾಯಧನವನ್ನು ನೀಡಲಾಗುತ್ತಿದೆ. ಆಸಕ್ತ ರೈತರು ಹೆಚ್ಚಿನ ಮಾಹಿತಿಗೆ ಈ ಕೆಳಕಂಡ ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಬೇಕಾಗಿ ಕೋರಲಾಗಿದೆ.

ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರುಗಳಾದ (ಜಿ.ಪಂ) ಚಿಕ್ಕಮಗಳೂರು– (8277078696), ಕಡೂರು (9380794610), ಕೊಪ್ಪ (9740759597), ಮೂಡಿಗೆರೆ (9449137743), ಎನ್.ಆರ್.ಪುರ (9449759777), ಶೃಂಗೇರಿ (9448530357) ಹಾಗೂ ತರೀಕೆರೆ –9980009438.

## ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆಕಾರ್ಯಕ್ರಮ

**ಹಾಸನ :** 2025–26ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆಕಾರ್ಯ ಹಾಸನ ಜಿಲ್ಲೆಯಾದ್ಯಂತಆರಂಭವಾಗಿದ್ದು, ಬೆಳೆ ಸಮೀಕ್ಷೆ ಮೂಲಕ ಸಂಗ್ರಹಿಸಿದ ಮಾಹಿತಿಯನ್ನುಎನ್.ಡಿ.ಆರ್.ಎಫ್/ಎಸ್.ಡಿ.ಆರ್.ಎಫ್. ಅಡಿಯಲ್ಲಿ ಪ್ರವಾಹ ಮತ್ತು ಬರಗಾಲ ಸಂದರ್ಭದಲ್ಲಿ ನೀಡುವ ನಷ್ಟ ಪರಿಹಾರ ವಿತರಿಸಲು, ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಅರ್ಹ ಫಲಾನುಭವಿಗಳನ್ನು ಗುರುತಿಸಲು, ಬೆಳೆ ವಿಮಾಯೋಜನೆಯಡಿ ಬೆಳೆ ವಿವರ ಪರಿಶೀಲಿಸಲು, ಬ್ಯಾಂಕ್ ಮತ್ತು ವ್ಯವಸಾಯ ಸೇವಾ ಸಹಕಾರಿ ಸಂಘಗಳ ಮುಖಾಂತರ ಬೆಳೆ ಸಾಲ ನೀಡಲು ಬಳಸಲಾಗುತ್ತದೆ.

ರೈತರು ಸ್ವತಃತಮ್ಮಜಮೀನಿನಲ್ಲಿತಾವು ಬೆಳೆದ ಬೆಳೆಯ ವಿವರವನ್ನುದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. ಬೆಳೆ ವಿವರದಾಖಲಿಸಲು "ಮುಂಗಾರುರೈತರ ಬೆಳೆ ಸಮೀಕ್ಷೆ 2025–26" ಎಂಬ ಹೆಸರಿನ ಮೊಬೈಲ್‌ಆಪ್‌ಅನ್ನುಗೂಗಲ್ ಪ್ಲೇ–ಸ್ಟೋರ್‌ನಿಂದಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಮೊಬೈಲ್‌ಆಪ್ ಬಳಕೆ ಮಾಡುವರೀತಿಯನ್ನುರೈತರಿಗೆ ತಿಳಿಸಲು ಪ್ರತಿಗ್ರಾಮದಲ್ಲಿ ನುರಿತಪಿ.ಆರ್‌ಗಳನ್ನು ನೇಮಿಸಲಾಗಿದೆ.

ರೈತರು ಬೆಳೆ ಸಮೀಕ್ಷೆ ಮೊಬೈಲ್‌ಆಪ್‌ಅನ್ನು ಬಳಸಲು ಗೂಗಲ್ ಪ್ಲೇ–ಸ್ಟೋರ್‌ನಲ್ಲಿ "Kharif season Farmer Crop Survey 2025–26" ಎಂಬ ಹುಡುಕಿಅಥವಾQR codeಅನ್ನು ಸ್ಕ್ಯಾನ್ ಮಾಡಿಕೊಂಡು ಮೊಬೈಲ್‌ಆಪ್‌ಅನ್ನುಡೌನ್‌ಲೋಡ್ ಮಾಡಿಕೊಳ್ಳುವುದು.

ಮೊಬೈಲ್‌ಆಪ್‌ನಲ್ಲಿರೈತರಆಧಾರ್ ವಿವರ ಮತ್ತು ಮೊಬೈಲ್ ನಂಬರ್‌ಅನ್ನು ನಮೂದಿಸಿ ಮೊಬೈಲ್‌ಆಪ್‌ನಲ್ಲಿ ಇ–ಕೆವೈಸಿ ಮೂಲಕ ಸಕ್ರಿಯಗೊಳಿಸುವುದು.

ನಂತರ ಮೊದಲು ಮಾಸ್ಟರ್ ವಿವರಗಳನ್ನು ಡೌನ್‌ಲೋಡ್ ಮಾಡಿಕೊಂಡುತಮ್ಮಜಮೀನಿನ ಸರ್ವೆ ನಂಬರ್‌ಗಳನ್ನು ಆಪ್‌ಗೆ ಸೇರಿಸಿಕೊಳ್ಳಬೇಕು. ನಂತರತಾವು ಬೆಳೆದ ವ್ಯಾಪ್ತಿ ಬೆಳೆಯ ವಿವರಗಳೊಂದಿಗೆ ಪ್ರತಿ ಬೆಳೆಯ 2 ಛಾಯಾ ಚಿತ್ರಗಳನ್ನು ತೆಗೆದುಅಪ್ಲೋಡ್ ಮಾಡುವುದು.

ಜಿಲ್ಲೆಯಎಲ್ಲಾರೈತರು ಈ ಯೋಜನೆಯ ಸದುಪಯೋಗ ಪಡೆದುಕೊಂಡುತಮ್ಮಜಮೀನಿನಲ್ಲಿ ಬೆಳೆದ ಬೆಳೆ ವಿವರವನ್ನು ಸರ್ಕಾರ ನಿಗದಿ ಪಡಿಸಿದ ಸಮಯದೊಳಗೆ ಅಪ್‌ಲೋಡ್ ಮಾಡಲು ಈ ಮೂಲಕ ಕೋರಲಾಗಿದೆ.

ವಿವಿಧ ಸವಲತ್ತುಗಳನ್ನು ನೀಡಲು ಬಳಕೆ ಮಾಡುವುದರಿಂದ, ಕೂಡಲೇತಮ್ಮಜಮೀನನ್ನು ಬೆಳೆ ಸಮೀಕ್ಷೆಗೆ ಒಳಪಡಿಸಲು ಮತ್ತೊಮ್ಮೆಕೋರಿದೆ.

ಹೆಚ್ಚಿನ ಮಾಹಿತಿಗಾಗಿಟೋಲ್ ಫ್ರೀ ಸಂಖ್ಯೆ 1800–425–3553 ಅಥವಾತಮ್ಮಜಮೀನಿನ ಬೆಳೆ ಸಮೀಕ್ಷೆಗಾಗಿಗ್ರಾಮದಪಿ.ಆರ್.ಗಳನ್ನು ಅಥವಾ ಕೃಷಿ, ಕಂದಾಯ, ರೇಷ್ಮೆ, ತೋಟಗಾರಿಕೆ ಮತ್ತು ಸಾಂಖ್ಯಿಕಇಲಾಖೆಯ ಅಧಿಕಾರಿಗಳನ್ನು ಸಂಪರ್ಕಿಸಲುಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಈ ವರ್ಷದಿಂದಲೇ ಸರ್ಕಾರಿ ಶಾಲೆಗಳಲ್ಲಿ ಎಲ್‌.ಕೆ.ಜಿ., ಯು.ಕೆ.ಜಿ.



**ಚಿಕ್ಕಮಗಳೂರು:** ನಾವು ಮಾತನಾಡಲು ಮಾತೃ ಭಾಷೆ ಮುಖ್ಯ, ವ್ಯವಹರಿಸಲು ಇಂಗ್ಲೀಷ್ ಅಗತ್ಯ, ಈ ಕಾರಣದಿಂದ ಈ ವರ್ಷದಿಂದಲೇ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಎಲ್.ಕೆ.ಜಿ ಮತ್ತು ಯು.ಕೆ.ಜಿ ಆರಂಭಿಸಿ ಮಕ್ಕಳಿಗೆ ಇಂಗ್ಲೀಷ್ ಶಿಕ್ಷಣ ನೀಡಲಾಗುತ್ತದೆ ಎಂದು ಶಾಸಕ ಹೆಚ್.ಡಿ ತಮ್ಮಯ್ಯ ಹೇಳಿದರು.

ಇಂದು ನಗರ ಹೊರವಲಯದ ಹಿರೇಮಗಳೂರು ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲಾ ಆವರಣದಲ್ಲಿ ನೂತನ ಕಟ್ಟಡ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಧ್ಯಮ ವರ್ಗದ ಜನರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಕಳುಹಿಸಲು ಹಿಂದೇಟು ಹಾಕುತ್ತಿದ್ದಾರೆ. ಈ ಕುಟುಂಬಗಳಿಗೆ ಖಾಸಗಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಕಲ್ಪಿಸಲು ಸಾಧ್ಯವಾಗುವುದಿಲ್ಲ

. ಈ ಹಿನ್ನೆಲೆಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಎಲ್.ಕೆ.ಜಿ. ಮತ್ತು ಯು.ಕೆ.ಜಿ. ತರಗತಿಗಳನ್ನು ಆರಂಭಿಸಿ ಮಕ್ಕಳಿಗೆ ಇಂಗ್ಲೀಷ್ ಶಿಕ್ಷಣ ನೀಡಿದರೆ ಪೋಷಕರು ಖಂಡಿತವಾಗಿಯೂ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಾತಿ ಮಾಡುತ್ತಾರೆ. ಮುಂದಿನ ವರ್ಷ ಇದೇ ಶಾಲೆಗೆ ಮಕ್ಕಳು ಹೆಚ್ಚಾಗಿ ಬರುವಂತೆ ಮಾಡಲು ಮಿನಿ ಬಸ್ ವ್ಯವಸ್ಥೆ ಕಲ್ಪಿಸಲಾಗುತ್ತದೆ ಎಂದೂ ಈ ಸಂದರ್ಭದಲ್ಲಿ ಹೇಳಿದರು.

ಶಿಕ್ಷಣ, ಆರೋಗ್ಯ ಹಾಗೂ ಜನರ ಬದುಕು ಈ ಮೂರು ನಮ್ಮ ಸರ್ಕಾರದ ಮೊದಲ ಆದ್ಯತೆ, ಶಿಕ್ಷಣಕ್ಕೆ ಆದ್ಯತೆ ನೀಡುವ ಮುಖಾಂತರ ಕೊರತೆಯಿರುವ ಸರ್ಕಾರಿ ಶಾಲೆಗಳಿಗೆ ಮೂಲ ಸೌಲಭ್ಯ ಕಲ್ಪಿಸಿ ಮಕ್ಕಳಿಗೆ ಉತ್ತಮ ಶಿಕ್ಷಣ ಕಲ್ಪಿಸಲು ನಮ್ಮದೊಂದು ಅಳಿಲು ಸೇವೆ ಈ ಕಟ್ಟಡ ನಿರ್ಮಾಣ ಎಂದು ಹೇಳಿದರು.

ಜನರ ಆರೋಗ್ಯದ ಹಿತದೃಷ್ಟಿಯಿಂದ ರೂ.80 ಕೋಟಿ ಅನುದಾನದಲ್ಲಿ ಸೂಪರ್ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯನ್ನು ನಮ್ಮ ಚಿಕ್ಕಮಗಳೂರಿನಲ್ಲಿ ನಿರ್ಮಿಸಿ ಸಾರ್ವಜನಿಕರಿಗೆ ಲೋಕಾರ್ಪಣೆ ಮಾಡುವುದಾಗಿ ತಿಳಿಸಿದರು.

ಬಸ್ ನಿಲ್ದಾಣ ಸಮಸ್ಯೆಯನ್ನು ಈಗಾಗಲೇ ಗಮನಿಸಿದ್ದು, ಆಗಸ್ಟ್ ತಿಂಗಳಲ್ಲಿ ರೂ.20 ಕೋಟಿ ವೆಚ್ಚದಲ್ಲಿ ನೂತನ ಹೈಟೆಕ್ ಬಸ್ ನಿಲ್ದಾಣಕ್ಕೆ ಶಂಕುಸ್ಥಾಪನೆ ಮಾಡಲಾಗುತ್ತದೆ. ಮಳೆಗಾಲ ಮುಗಿದ ಕೂಡಲೇ ಕ್ಷೇತ್ರದಲ್ಲಿ ಹದಗೆಟ್ಟಿರುವ ರಸ್ತೆಗಳಿಗೆ ಡಾಂಬರೀಕರಣ ಮಾಡಲಾಗುತ್ತದೆ ಎಂದು ತಿಳಿಸಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಯಾಜ್, ನಗರಸಭೆ ಸದಸ್ಯರಾದ ವಿದ್ಯಾ, ಅರುಣ್, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಣಾಧಿಕಾರಿ ವಿಜಯಕುಮಾರ್, ಶಾಲಾ ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷೆ ಜಯಲಕ್ಷ್ಮೀ. ಮಾಜಿ ನಗರಸಭೆ ಸದಸ್ಯ ಅರುಣ್ ಮುಂತಾದವರು ಉಪಸ್ಥಿತರಿದ್ದರು.

# ಯೋಗವು ಜೀವನದ ಗುಣಮಟ್ಟ ಸುಧಾರಿಸಲು ಸಹಕಾರಿ: ಅಂಚೆ ಅಧೀಕ್ಷಕ ರಮೇಶ ಮಡಿವಾಳರ

**ಗದಗ:** ' ಮಾನಸಿಕ ಮತ್ತು ದೈಹಿಕ ಆರೋಗ್ಯಕ್ಕೆ ಪ್ರತಿಯೊಬ್ಬರಿಗೂ ಯೋಗದ ಅಗತ್ಯವಿದೆ' ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕ ರಮೇಶ ಮಡಿವಾಳರ ಹೇಳಿದರು.

ಭಾರತೀಯ ಅಂಚೆ ಇಲಾಖೆ ಗದಗ ವಿಭಾಗೀಯ ಆಶ್ರಯದಲ್ಲಿ ಪ್ರಧಾನ ಅಂಚೆ ಕಚೇರಿ ಆವರಣದಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಅಂತರರಾಷ್ಟ್ರೀಯ ಯೋಗ ದಿನದಲ್ಲಿ ಪಾಲ್ಗೊಂಡು ಚಾಲನೆ ನೀಡಿ ಅವರು ಮಾತನಾಡಿ, ದಿನನಿತ್ಯ ಯೋಗ ಅಭ್ಯಾಸ ರೂಢಿಸಿಕೊಳ್ಳಬೇಕು. ಇದರಿಂದ ರೋಗ–ರುಜಿನಗಳಿಂದ ದೂರವಿರಲು ಅನುಕೂಲವಾಗಿದೆ ಎಂದು ಹೇಳಿದರು.

ಯೋಗದಿಂದ ವೈಯಕ್ತಿಕ ಆರೋಗ್ಯವೃದ್ಧಿಯಾಗುವುದಲ್ಲದೆ ವ್ಯಕ್ತಿಯ ಸರ್ವತೋಮುಖ ಅಭಿವೃದ್ಧಿಗೂ ಪೂರಕವಾಗಲಿದೆ. ಹೀಗಾಗಿ ಎಲ್ಲರೂ ಯೋಗಾಭ್ಯಾಸವನ್ನು ಪ್ರತಿ ದಿನ ಕುಟುಂಬ ಸಮೇತ ಕೆಲವು ಗಂಟೆ ಯೋಗಭ್ಯಾಸಕ್ಕೆ ನೀಡಬೇಕು ಎಂದರು.

ಬ್ರಹ್ಮ ಕುಮಾರಿ ಶೋಭಾ ಅಕ್ಕ ಯೋಗ ಶಿಬಿರ ನಡೆಸಿ,ಯೋಗವು ಪ್ರಾಚೀನ ಭಾರತದ ಅಮೂಲ್ಯ ಕೊಡುಗೆಯಾಗಿದೆ. ನಮ್ಮ ದೈಹಿಕ ಹಾಗೂ ಮಾನಸಿಕ ಆರೋಗ್ಯ ವೃದ್ಧಿಸುವಲ್ಲಿ ಯೋಗದ ಪಾತ್ರ ಮಹತ್ವದ್ದು. ಪ್ರತಿವರ್ಷ ಒಂದೊಂದಿ ಥೀಮ್‌ನಲ್ಲಿ ಯೋಗ ದಿನವನ್ನು ಆಚರಿಸಲಾಗುತ್ತದೆ. ಈ ವರ್ಷ ಒಂದು ದೇಶ ಒಂದು ಭೂಮಿಗಾಗಿ ಯೋಗ ಎಂಬುದು ಥೀಮ್ ಆಗಿದೆ. ಹಾಗಾಗಿ ಹಚ್ಚು ಹಸಿರಿನ ಪರಿಸರ ಮಧ್ಯದಲ್ಲಿ ನಾವು ಯೋಗಭ್ಯಾಸ ಜೊತೆಗೆ ಪರಿಸರ ಸಂರಕ್ಷಣೆಯೊಂದಿಗೆ ಭೂಮಿ ವಿಷಯುಕ್ತದಿಂದ ಮುಕ್ತ ಮಾಡಲು ಮುಂದಾಗಬೇಕು ಎಂದರು.

ಅಂಚೆ ಕಚೇರಿಗಳಲ್ಲಿ ಯೋಗ ಶಿಬಿರಗಳು, ಪ್ರದರ್ಶನಗಳು ಮತ್ತು ಅರಿವು ಮೂಡಿಸುವ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಆಯೋಜನೆ ಮಾಡುತ್ತಿರುವದು ಸಂತಸ ತಂದಿದೆ ಎಂದರು.

ಗದಗ ಅಂಚೆ ಸಹಾಯಕರಾದ ಶ್ರೀಕಾಂತ ಜಾದವ, ವಿ.ಸುನೀಲಕುಮಾರ, ಪ್ರಧಾನ ಅಂಚೆ ಪಾಲಕರಾದ ಮಂಜುಳಾ ದೇಗಿನಾಳ, ಉಪ ಅಂಚೆ ಪಾಲಕರಾದ ದೊಡ್ಡಪ್ಪ ಇಟಗಿ, ಬ್ರಹ್ಮಕುಮಾರಿ ಸಾವಿತ್ರಿ ಅಕ್ಕ ಬ್ರಹ್ಮಕುಮಾರಿ ಲತಾ ಅಕ್ಕ ಹಾಗೂ ವಿವಿಧ ಅಂಚೆ ಇಲಾಖೆ ಸಿಬ್ಬಂದಿ ಪಾಲ್ಗೊಂಡಿದ್ದರು.



**ಗದಗ ಪ್ರಧಾನ ಅಂಚೆ ಕಚೇರಿ ರಸ್ತೆ ಆವರಣದಲ್ಲಿ ಅಂಚೆ ಕಚೇರಿ ವತಿಯಿಂದ ಶನಿವಾರ ಏರ್ಪಡಿಸಲಾಗಿದ್ದ ಅಂತರರಾಷ್ಟ್ರೀಯ ಯೋಗದಲ್ಲಿ ಅಂಚೆ ಇಲಾಖೆ ಸಿಬ್ಬಂದಿ ಪಾಲ್ಗೊಂಡಿರುವದು.**

# ಶಾಸಕ ಹೆಚ್‌.ಡಿ.ತಮ್ಮಯ್ಯ ಅವರಿಗೆ ಅದ್ಧೂರಿ ಹುಟ್ಟು ಹಬ್ಬಆಚರಣೆ



**ಚಿಕ್ಕಮಗಳೂರು:** ಬಡವರ ಬಂಧು ದೀನ ದಲಿತರಆಶಾಕಿರಣ, ಜನಪ್ರಿಯ ಶಾಸಕ ಹೆಚ್.ಡಿ. ತಮ್ಮಯ್ಯಅವರ 56ನೇ ಹುಟ್ಟು ಹಬ್ಬದ ಅಂಗವಾಗಿ ಇಂದುಅವರ ಅಭಿಮಾನಿಗಳು, ಹಿತೈಷಿಗಳು, ಸ್ನೇಹಿತರು ಶಾಸಕರ ನಿವಾಸಕ್ಕೆ ತೆರಳಿ ಕೇಕ್ ಕತ್ತರಿಸಿ ಸಿಹಿ ತಿನಿಸಿ ಸಂಭ್ರಮಿಸಿದರು.

ಇಂದು ಬೆಳಗ್ಗೆ ನೂರಾರು ಸಂಖ್ಯೆಯಲ್ಲಿ ಸೇರಿದ ಶಾಸಕರ ಅಭಿಮಾನಿಗಳು ಶಾಸಕ ತಮ್ಮಯ್ಯಅವರ ಹುಟ್ಟೂರಾದ ಹಿರೇಮಗಳೂರಿನಲ್ಲಿ ಪಟಾಕಿ ಸಿಡಿಸಿ ಮೆರವಣಿಗೆ ಮೂಲಕ ಬೃಹತ್ ಹಾರವನ್ನು ಜೆಸಿಬಿ ಮೂಲಕ ಹಾಕಿ ಶುಭಾಶಯಕೋರಿದರು.

ಇದರ ಅಂಗವಾಗಿ ಹಿರೇಮಗಳೂರಿನ ಕೋದಂಡರಾಮ ಸ್ವಾಮಿದೇವಾಲಯ ಸೇರಿದಂತೆಎಲ್ಲಾ ದೇವಾಲಯಗಳಲ್ಲಿ ವಿಶೇಷ ಪೂಜೆಯನ್ನು ಏರ್ಪಡಿಸಿದ್ದ ಗ್ರಾಮಸ್ಥರು ಶಾಸಕರಿಗೆ ಮುಂದೆಇನ್ನಷ್ಟು ಭವಿಷ್ಯ ಉಜ್ವಲಗೊಳ್ಳುವ ಜೊತೆಗೆಆಯುರ್‌ಆರೋಗ್ಯ ನೀಡುವಂತೆದೇವರಲ್ಲಿ ಪ್ರಾರ್ಥಿಸಿದರು.

ಪತ್ನಿ ಮಂಗಳ ಅವರಜೊತೆ ಆಗಮಿಸಿದ ಶಾಸಕ ಹೆಚ್.ಡಿ.ತಮ್ಮಯ್ಯಅವರನ್ನು ಹಿರೇಮಗಳೂರು ಗ್ರಾಮಸ್ಥರು, ಮಹಿಳೆಯರು ಪೂರ್ಣಕುಂಭ ಸ್ವಾಗತದೊಂದಿಗೆ ಭರಮಾಡಿಕೊಂಡರು.ಶಾಲಾ ಮಕ್ಕಳು ಆರತಿ ಮಾಡುವ ಮೂಲಕ ಹುಟ್ಟುಹಬ್ಬಕ್ಕೆ ಕಳೆಗಟ್ಟಿಸಿದರು.

ರಾಜ್ಯಸರ್ಕಾರಅಧಿಕಾರಕ್ಕೆ ಬಂದುಎರಡು ವರ್ಷತುಂಬಿರುವ ಈ ಸಂದರ್ಭದಲ್ಲಿ ಶಾಸಕ ಹೆಚ್.ಡಿ. ತಮ್ಮಯ್ಯಅವರು ಚಿಕ್ಕಮಗಳೂರು ವಿಧಾನಸಭಾಕ್ಷೇತ್ರದ ಸರ್ವಾಂಗೀಣಅಭಿವೃದ್ಧಿಗೆ ಶ್ರಮಿಸುತ್ತಿರುವುದರಜೊತೆಗೆ ಸರ್ಕಾರದಜನಪರ ಸೌಲಭ್ಯಗಳನ್ನು ಬಡವರು, ಕೂಲಿಕಾರ್ಮಿಕರ, ಶೋಷಿತರ ಮನೆಬಾಗಿಲಿಗೆ ತಲುಪಿಸುವಲ್ಲಿಕ್ರಮ ವಹಿಸುತ್ತಿರುವುದು ಶ್ಲಾಘನೀಯ.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದಅಧ್ಯಕ್ಷ

ನಯಾಜ್‌ಅಹಮದ್, ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷ ಹೆಚ್.ಪಿ.ಮಂಜೇಗೌಡ, ಅಭಿಮಾನಿಗಳಾದ ಹಿರೇಮಗಳೂರು ರಾಮಚಂದ್ರ, ಜಯರಾಜ್‌ಅರಸ್, ರಾಜು, ಜಗದೀಶ್, ಗಂಗಾಧರ್ ಸೇರಿದಂತೆ ಶಾಲಾ ಮುಖ್ಯೋಪಾಧ್ಯಾಯರು, ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶಾಸಕರಿಗೆ ಹುಟ್ಟು ಹಬ್ಬದ ಶುಭಾಶಯಕೋರಿದರು.

## ಮೆಸ್ಕಾಂ ಜನ ಸಂಪರ್ಕ ಸಭೆ

**ಶಿವಮೊಗ್ಗ:** ಬೆಜ್ಜುವಳ್ಳಿ ಮೆಸ್ಕಾಂ ಉಪವಿಭಾಗ ಕಛೇರಿಯಲ್ಲಿ ಜೂ.24 ರಂದು ಬೆಳಿಗ್ಗೆ 11.00 ರಿಂದ 01.00 ರವರೆಗೆ ಜನಸಂಪರ್ಕ ಸಭೆ ನಡೆಯಲಿದೆ. ಈ ಸಭೆಯಲ್ಲಿ ಮೆಸ್ಕಾಂನ ಅಧಿಕಾರಿಗಳು ಭಾಗವಹಿಸಲ್ಲಿದ್ದು, ಸಂಬಂಧಪಟ್ಟ ಪ್ರದೇಶದ ಗ್ರಾಹಕರ ಅಹವಾಲುಗಳನ್ನು ಸ್ವೀಕರಿಸುವುದರಿಂದ ಈ ಅವಕಾಶವನ್ನು ಗ್ರಾಹಕರು ಸದುಪಯೋಗಪಡಿಸಿಕೊಳ್ಳುವಂತೆ ಮೆಸ್ಕಾಂ ಪ್ರಕಟಣೆ ತಿಳಿಸಿದೆ. ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ; 8277882835.

## ಟೆನ್ಸಿಂಗ್ ನೊರ್ಜೆ ನ್ಯಾಷನಲ್ ಅಡ್ವೆಂಜರ್ ಅವಾರ್ಡ್ ಗಾಗಿ ಆನ್‌ಲೈನ್ ಅರ್ಜಿ ಆಹ್ವಾನ

**ಶಿವಮೊಗ್ಗ;** ಯುವ ಸಬಲೀಕರಣ ಮತ್ತು ಕ್ರೀಡಾ ಮಂತ್ರಾಲಯದಿಂದ 2024–25ನೇ ಸಾಲಿನ ಟೆನ್ಸಿಂಗ್ ನೊರ್ಜೆ ನ್ಯಾಷನಲ್ ಅಡ್ವೆಂಜರ್ ಅವಾರ್ಡ್ (TNNAA) ಗಾಗಿ ಆನ್‌ಲೈನ್ ಅರ್ಜಿ ಆಹ್ವಾನಿಸಿದೆ.2022 ರಿಂದ 2024ನೇ ಸಾಲಿನಲ್ಲಿ ಜಲ ಸಾಹಸ, ವಾಯು ಸಾಹಸ ಮತ್ತು ಭೂ ಸಾಹಸ ಕ್ರೀಡೆಗಳಲ್ಲಿ ಸಾಧನೆ ಮಾಡಿರುವ ಶಿವಮೊಗ್ಗ ಜಿಲ್ಲೆಯ ಕ್ರೀಡಾಪಟುಗಳು ಈ ಪ್ರಶಸ್ತಿಗೆ ಅರ್ಹರಿದ್ದು, ಆಸಕ್ತರು http://awards.gov.in ವೆಬ್‌ಸೈಟ್ ಮೂಲಕ ಜೂ. 30 ರೊಳಗಾಗಿ ಆನ್‌ಲೈನ್ ಅರ್ಜಿ ಸಲ್ಲಿಸುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.ಹೆಚ್ಚಿನ ಮಾಹಿತಿ ಹಾಗೂ ಸಹಾಯಕ್ಕಾಗಿ ಟೋಲ್ ಫ್ರೀ ನಂ.: 01123386898 ನ್ನು ಸಂಪರ್ಕಿಸುವುದು.

## ಕ್ರೀಡೆಯಲ್ಲಿ ಉತ್ತಮ ಸಾಧನೆ ತೋರಿದ ಶಾಲೆಗಳಿಂದ ಪ್ರೋತ್ಸಾಹ ಧನಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ:** ರಾಜ್ಯ ಯುವನೀತಿ–2012ರ ಅನುಷ್ಠಾನದಡಿ "ನಮ್ಮೂರ ಶಾಲೆಗೆ ನಮ್ಮ ಯುವಜನರು" ಯೋಜನೆಯನ್ನು 2017–18ನೇ ಸಾಲಿನಿಂದ ಅನ್ವಯವಾಗುವಂತೆ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಮಾನ್ಯತೆ ಪಡೆದಿರುವ ಕ್ರೀಡಾ ಸಂಸ್ಥೆಗಳು ಆಯೋಜಿಸುವ ತಾಲ್ಲೂಕು, ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಉತ್ತಮ ಸಾಧನೆ ತೋರಿದ ಕ್ರೀಡಾಪಟುಗಳನ್ನು ಹೊಂದಿರುವ ಸರ್ಕಾರಿ ಶಾಲೆಗಳನ್ನು ಗುರುತಿಸಿ ಆಯ್ಕೆಯಾದ ಪ್ರತಿ ಶಾಲೆಗೆ ಸರ್ಕಾರದಿಂದ ಪ್ರೋತ್ಸಾಹವಾಗಿ ತಲಾ ರೂ.1.00 ಲಕ್ಷ ಪ್ರೋತ್ಸಾಹಧನ ನೀಡಲಾಗುವುದು.ಪ್ರೋತ್ಸಾಹಧನದಲ್ಲಿ ರೂ.10 ಸಾವಿರ ಆಯ್ಕೆಯಾದ ಶಾಲೆಯ ದೈಹಿಕ ಶಿಕ್ಷಕರಿಗೆ ಮತ್ತು ರೂ.90 ಸಾವಿರ ಶಾಲೆಯ ಎಸ್.ಡಿ.ಎಂ.ಸಿ.ಗೆ ಅಗತ್ಯ ಕ್ರೀಡಾ ಸಾಮಾಗ್ರಿಗಳ ಖರೀದಿ ಮಾಡಲು ನೀಡಲಾಗುತ್ತದೆ. ಇದರಡಿ ಪ್ರೋತ್ಸಾಹಧನ ಪಡೆಯ ಬಯಸುವ ಸರ್ಕಾರಿ ಶಾಲೆಗಳು ಆಯಾ ಜಿಲ್ಲೆಯ 2024–25ನೇ ಸಾಲಿನ ಕ್ರೀಡೆಯಲ್ಲಿ ಉತ್ತಮ ಸಾಧನೆ ತೋರಿರುವ ಹೆಚ್ಚಿನ ಸಂಖ್ಯೆಯ ಕ್ರೀಡಾಪಟುಗಳನ್ನು ಹೊಂದಿದ ಜಿಲ್ಲೆಯ ಒಂದು ಸರ್ಕಾರಿ ಶಾಲೆಯನ್ನು ಆಯ್ಕೆ ಮಾಡಲಾಗುವುದು.ಈ ಸಂಬಂಧ ಜಿಲ್ಲೆಯ ಸರ್ಕಾರಿ ಶಾಲೆಗಳು 2024–25ನೇ ಸಾಲಿನ ತಮ್ಮ ಶಾಲೆಗಳ ಕ್ರೀಡಾಪಟುಗಳ ಸಾಧನೆ ವಿವರ, ಪ್ರಶಸ್ತಿ ಪತ್ರಗಳು, ಶಾಲೆಯ ದಾಖಲೆಗಳು, ದೈಹಿಕ ಶಿಕ್ಷಕರ ಬ್ಯಾಂಕ್ ಪಾಸ್ ಬುಕ್ ಹಾಗೂ ಮುಖ್ಯೋಪಾಧ್ಯಾಯರ ಮತ್ತು ಎಸ್.ಡಿ.ಎಂ.ಸಿ. ಅಧ್ಯಕ್ಷರ ಜಂಟಿ ಖಾತೆ ಪಾಸ್ ಬುಕ್ ನಕಲು ಪ್ರತಿಗಳನ್ನು ಜೂನ್ 25ರೊಳಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರ ಕಛೇರಿಗೆ ಸಲ್ಲಿಸಲು ಸೂಚಿಸಿದೆ.

ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಸಹಾಯಕ ನಿರ್ದೇಶಕರ ಕಛೇರಿ ದೂರವಾಣಿ ಸಂಖ್ಯೆ 08192–237480 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಇಂದು ಅತಿಸಾರ ತಡೆಗಟ್ಟುವ ಅಭಿಯಾನ

**ದಾವಣಗೆರೆ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಸಂಘದ ವತಿಯಿಂದ ಇದೇ ಜೂನ್ 23ರ ಬೆಳಿಗ್ಗೆ 10.30ಕ್ಕೆ ನಗರದ ಚಗಟೇರಿ ಜಿಲ್ಲಾಸ್ಪತ್ರೆಯ ಮಹಿಳಾ ಮತ್ತು ಮಕ್ಕಳ ವಿಭಾಗದಲ್ಲಿ ತೀವ್ರ ಅತಿಸಾರದಿಂದ ಮಕ್ಕಳ ಮರಣವನ್ನು ಶೂನ್ಯಕ್ಕೆ ತರುವುದನ್ನು ಗುರಿಯಾಗಿಸಿ ಅತಿಸಾರ ತಡಗಟ್ಟುವ ಅಭಿಯಾನ –2025 ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಕಾರ್ಯಕ್ರಮ ಉದ್ಘಾಟಿಸುವರು. ಜಿ. ಪಂ.ಸಿಇಓ ಜಿ.ಎಂ.ವಿಠಲ ರಾವ್ ಘನ ಉಪಸ್ಥಿತಿ ವಹಿಸುವರು. ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎಂ.ಬಿ.ನಾಗೇಂದ್ರಪ್ಪ, ಆರ್.ಸಿ.ಹೆಚ್.ಅಧಿಕಾರಿ ಡಾ.ರೇಣುಕಾರಾಧ್ಯ, ಎಸ್‌ಎನ್‌ಸಿಯು ನೋಡಲ್ ಅಧಿಕಾರಿ ಹಾಗೂ ಮಕ್ಕಳ ತಜ್ಞ ಡಾ.ಲೋಹಿತ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ದೇವರಾಜ ಪಿ. ಪಟಗೆ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಅರ್ಜಿ ಆಹ್ವಾನ

**ದಾವಣಗೆರೆ:** ಸಿಬ್ಬಂದಿ ನೇಮಕಾತಿ ಆಯೋಗದ ವತಿಯಿಂದ ಸ್ಟೆನೋಗ್ರಾಫರ್ ಗ್ರೇಡ್–ಸಿ ಮತ್ತು ಡಿ.ಹುದ್ದೆಗಳ ಭರ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದ್ದು, ಜೂನ್ 26 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಪಿ.ಯು.ಸಿ., ಅಥವಾ ಯಾವುದೇ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರುವ ಹಾಗೂ ಇಂಗ್ಲೀಷ್, ಹಿಂದಿ ಶೀಘ್ರಲಿಪಿ ಹೊಂದಿರುವ ಅರ್ಹ ಅಭ್ಯರ್ಥಿಗಳು ವೆಬೆಸೈಟ್ https://ssc.gov.in CxÀªÁ www.ssckkr.kar.nic.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.ಆಸಕ್ತ ಅರ್ಹ ಅಭ್ಯರ್ಥಿಗಳು ಗ್ರೇಡ್–ಸಿ ಹುದ್ದೆಗೆ 18 ರಿಂದ 30 ವರ್ಷ, ಗ್ರೇಡ್–ಡಿ ಹುದ್ದೆಗೆ 18 ರಿಂದ 27 ವರ್ಷ ವಯೋಮಿತಿ ಹೊಂದಿರಬೇಕು. ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಯು ಕಂಪ್ಯೂಟರ್ ಆಧಾರಿತವಾಗಿದೆ. ಹೆಚ್ಚಿನ ಮಾಹಿತಿಗಾಗಿ ವೆಬೆಸೈಟ್ https://ssc.gov.in ಅಥವಾ www.ssckkr.kar.nic.in ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದಾವಣಗೆರೆ.

# ಎಂಟು ಸಾವಿರ ಮೇಲ್ಮನವಿ ಪ್ರಕರಣಗಳ ವಿಲೇವಾರಿ : ರುದ್ರಣ್ಣ ಹರ್ತಿಕೋಟೆ

**ಚಿತ್ರದುರ್ಗ :** ಕರ್ನಾಟಕ ಮಾಹಿತಿ ಆಯೋಗಕ್ಕೆ ಹೊಸದಾಗಿ ರಾಜ್ಯ ಮಾಹಿತಿ ಆಯುಕ್ತರ ನೇಮಕವಾದ ನಂತರ ರಾಜ್ಯ ಮಾಹಿತಿ ಆಯೋಗದ ಮುಂದೆ ಬಾಕಿ ಇದ್ದ 50,000ಕ್ಕೂ ಅಧಿಕ ಮೇಲ್ಮನವಿ ಪ್ರಕಣಗಳ ಪೈಕಿ, ಕಳೆದ ಮಾರ್ಚ್‌ನಿಂದ ಇಲ್ಲಿಯವರೆಗೂ 8000 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ರಾಜ್ಯ ಮಾಹಿತಿ ಆಯುಕ್ತ ರುದ್ರಣ್ಣ ಹರ್ತಿಕೋಟೆ ಹೇಳಿದರು.

ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಶನಿವಾರ ಮಾಹಿತಿ ಹಕ್ಕು ಕಾಯ್ದೆ ಅನುಷ್ಠಾನ ಕುರಿತು, ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹಾಗೂ ಮೊದಲ ಹಂತ ಮೇಲ್ಮನವಿ ಪ್ರಾಧಿಕಾರದ ಅಧಿಕಾರಿಗಳಿಗೆ ಆಯೋಜಿಸಲಾದ ಕಾರ್ಯಗಾರ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ, ನಂತರ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು.

ಚಿತ್ರದುರ್ಗ ಜಿಲ್ಲೆಗೆ ಸಂಬಂಧಿಸಿದಂತೆ 787 ಮೇಲ್ಮನವಿ ಪ್ರಕರಣಗಳು ರಾಜ್ಯ ಮಾಹಿತಿ ಆಯೋಗದ ಮುಂದಿವೆ. ಇದರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಂಬಂಧಿಸಿದಂತೆ 325, ಕಂದಾಯ 117, ಅರಣ್ಯ 55, ಸಮಾಜ ಕಲ್ಯಾಣ 53, ನಗರಾಭಿವೃದ್ಧಿ ಇಲಾಖೆ 46, ಜಲಸಂಪನ್ಮೂಲ 28 ಹಾಗೂ ಗೃಹ ಇಲಾಖೆಗೆ ಸಂಬಂಧಿಸಿದಂತೆ 19 ಮೇಲ್ಮನವಿ ಪ್ರಕರಣಗಳು ಇವೆ. ಹಣಕಾಸು, ಸಾರಿಗೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸಂಬಂಧಿಸಿದಂತೆ ತಲಾ ಒಂದು ಪ್ರಕರಣಗಳಿವೆ. ಉಳಿದಂತೆ ಇತರೆ ಇಲಾಖೆ ಹಾಗೂ ಸರ್ಕಾರದ ಅನುದಾನಿತ ಸಂಸ್ಥೆಗಳಿಗೆ ಸಂಬಂಧಿಸಿದಂತೆ 141 ಮೇಲ್ಮನವಿ ಪ್ರಕರಣಗಳು ಇವೆ. ಚಿತ್ರದುರ್ಗ ಜಿಲ್ಲೆಯಲ್ಲಿ ಏಪ್ರಿಲ್ ಮಾಹೆಯಿಂದ ಜೂನ್ ಮಾಹೆವರೆಗೆ 1061 ಮಾಹಿತಿ ಹಕ್ಕು ಅರ್ಜಿಗಳು ಸಲ್ಲಿಕೆಯಾಗಿವೆ. ಚಿತ್ರದುರ್ಗ ಜಿಲ್ಲೆಯ ಮಾಹಿತಿ ಅಧಿಕಾರಿಗಳ ಕಾರ್ಯ ತೃಪ್ತಿದಾಯಕವಾಗಿದೆ ಎಂದು ಮಾಹಿತಿ ಆಯುಕ್ತ ರುದ್ರಣ್ಣ ಹರ್ತಿಕೋಟೆ ತಿಳಿಸಿದರು.

ಮಾಹಿತಿ ಶುಲ್ಕಗಳ ಪರಿಷ್ಕರಣೆ : ಮಾಹಿತಿ ಹಕ್ಕು ಕಾಯ್ದೆ ಜಾರಿಯಾಗಿ 20 ವರ್ಷಗಳು ಸಂದಿದ್ದು, ಮಾಹಿತಿ ಹಕ್ಕು ಕಾಯ್ದೆಯಡಿ ಮಾಹಿತಿ ಪಡೆಯಲು ನಿಗದಿಪಡಿಸಿದ್ದ ಶುಲ್ಕಗಳ ಪರಿಷ್ಕರಣೆ ಮಾಡುವಂತೆ ವಿಜಯಭಾಸ್ಕರ್ ಅಧ್ಯಕ್ಷತೆಯ ಆಡಳಿತ ಸುಧಾರಣಾ ಸಮಿತಿ ಶಿಫಾರಸು ಮಾಡಿದ್ದು, ಈ ಕುರಿತು ಸರ್ಕಾರ ತೀರ್ಮಾನ ಕೈಗೊಳ್ಳಲಿದೆ ಎಂದು ರಾಜ್ಯ ಮಾಹಿತಿ ಆಯುಕ್ತ ರುದ್ರಣ್ಣ ಹರ್ತಿಕೋಟೆ ಹೇಳಿದರು.



ಸದ್ಯ ಮಾಹಿತಿ ಅರ್ಜಿಯ ಜೊತೆ ರೂ.10 ಶುಲ್ಕವನ್ನು ನೀಡಬೇಕಾಗಿದ್ದು, ಇದನ್ನು ರೂ.25ಕ್ಕೆ ಹೆಚ್ಚಿಸಲು ಹಾಗೂ ಪ್ರತಿ ಪುಟದ ದಾಖಲೆ ನೀಡಬೇಕಾದ ರೂ.2 ಶುಲ್ಕವನ್ನು ರೂ.5ಕ್ಕೆ ಹೆಚ್ಚಿಸಲು ಕೂಡ ಆಡಳಿತ ಸುಧಾರಣಾ ಸಮಿತಿ ಸರ್ಕಾರಕ್ಕೆ ಶಿಫಾರಸು ಮಾಡಿದೆ. ಸಿ.ಡಿ ಉಪಯೋಗ ಬಳಕೆಯಲ್ಲಿ ಇಲ್ಲದಿರುವುದರಿಂದ, ಇದರ ಹೊರತಾಗಿ ಪೆನ್‌ಡ್ರೈವ್ ಮೂಲಕ ನೀಡುವ ಮಾಹಿತಿಗೆ ಹೊಸದೊಂದು ಶುಲ್ಕ ನಿಗದಿ ಪಡಿಸಲು ಚಿಂತನೆ ನಡೆಸಲಾಗಿದೆ. ಬಡತನ ರೇಖೆಗಿಂತ ಕಡಿಮೆ ಇರುವ ಬಿಪಿಲ್ ಕಾರ್ಡುದಾರರು 100 ಪುಟದವರೆಗೆ ಮಾಹಿತಿ ಪಡೆಯಲು ಯಾವುದು ಶುಲ್ಕ ನೀಡುವಂತಿಲ್ಲ. ಆದರೆ, ಮಾಹಿತಿಗೆ ಅರ್ಜಿ ಸಲ್ಲಿಸುವಾಗ, ಬಿಪಿಎಲ್ ಕಾರ್ಡ್ ಜೆರಾಕ್ಸ್ ಹಾಗೂ ಚಾಲ್ತಿಯಲ್ಲಿರುವ ಆದಾಯ ಪ್ರಮಾಣ ಪತ್ರ ಮೂಲ ಪ್ರತಿ ಲಗತ್ತಿಸಬೇಕು ಎಂದರು.

ರಾಜ್ಯದಲ್ಲಿ 26 ಜನರು ಕಪ್ಪು ಪಟ್ಟಿಗೆ: ಯಾವುದೇ ಸಾರ್ವಜನಿಕ ಹಿತಾಸಕ್ತಿ ಇಲ್ಲದೇ, ಅಧಿಕಾರಿಗಳನ್ನು ಬೆದರಿಸಲು ಹಾಗೂ ತೊಂದರೆ ನೀಡಲು ಮಾಹಿತಿ ಅರ್ಜಿ ಸಲ್ಲಿಸುತ್ತಿದ್ದ 26 ಜನರನ್ನು ರಾಜ್ಯ ಮಾಹಿತಿ ಆಯೋಗ ಕಪ್ಪು ಪಟ್ಟಿಗೆ ಸೇರಿಸಲಾಗಿದೆ. ಇದರಲ್ಲಿ ಚಿತ್ರದುರ್ಗ ಜಿಲ್ಲೆಯ ಒರ್ವ ವ್ಯಕ್ತಿಯು ಕಪ್ಪು ಪಟ್ಟಿಗೆ ಸೇರಿದ್ದಾನೆ. ಅಧಿಕಾರಿಗಳು ಮಾಹಿತಿ ನೀಡದಿದ್ದಾಗ ಅಥವಾ ಅರ್ಜಿದಾರರೊಂದಿಗೆ ಮಾತುಕತೆ ನಡೆಸಲು ಮುಂದಾಗ ಮಾತ್ರ ಬೆದರಿಸುವವರು ಹುಟ್ಟಿಕೊಳ್ಳುತ್ತಾರೆ. ಅಧಿಕಾರಿಗಳು ವಿಳಂಬ ಮಾಡದೇ ಕಾಲಮಿತಿಯಲ್ಲಿ ಮಾಹಿತಿ ನೀಡಬೇಕು. ಜಿಲ್ಲಾ ಪಂಚಾಯಿತಿಯ ಪ್ರತಿ ತ್ರೈಮಾಸಿಕ ಕೆಡಿಪಿ ಸಭೆಗಳಲ್ಲಿ ಜನಪ್ರತಿನಿಧಿಗಳು ಮಾಹಿತಿ ಹಕ್ಕು ವಿಷಯವನ್ನು ಚರ್ಚಿಸಿ ಶೀಘ್ರ ವಿಲೇವಾರಿಗೆ ಕ್ರಮ ಕೈಗೊಳ್ಳಬೇಕು ಎಂದು ಮಾಹಿತಿ ಆಯುಕ್ತ ರುದ್ರಣ್ಣ ಹರ್ತಿಕೋಟೆ ತಿಳಿಸಿದರು.

ಜಿಲ್ಲೆಯ ಸರ್ಕಾರಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆ ಬಗ್ಗೆ ತಿಳಿದುಕೊಳ್ಳುವ ಆಸಕ್ತಿಯಿದೆ. ಅರ್ಜಿಗಳು ಸ್ವೀಕಾರವಾದ ತಕ್ಷಣ ಅವರಿಗೆ ಗೊಂದಲ ಉಂಟಾಗುತ್ತಿದೆ. ಇದನ್ನು ನಿವಾರಿಸಲು ಅಧಿಕಾರಿಗಳು ಕಾಯ್ದೆಯ ಬಗ್ಗೆ ಅಧ್ಯಯನ ನಡೆಸಬೇಕು. ಕಾಯ್ದೆಯ ಜಾರಿಯ ಮೂಲ ಉದ್ದೇಶ ಸಾರ್ವಜನಿಕ ಆಡಳಿತದಲ್ಲಿ ಪಾದರ್ಶಕತೆ ತರುವುದು, ಅಧಿಕಾರಿಗಳ ಜವಾಬ್ದಾರಿ ಹೆಚ್ಚಿಸಿ, ಕೆಲಸಗಳಿಗೆ ಹೊಣೆಗಾರರನ್ನಾಗಿ ಮಾಡಿ ಉತ್ತಮ ಆಡಳಿತ ನೀಡುವುದಾಗಿದೆ ಎಂದು ಮಾಹಿತಿ ಆಯುಕ್ತ ಎಸ್.ರಾಜಶೇಖರ್ ತಿಳಿಸಿದರು.ಸ್ವಾತಂತ್ರ್ಯದ ತರುವಾಯ ಸಾರ್ವಜನಿಕರಿಗೆ ಆಡಳಿತದ ವಿಷಯಗಳನ್ನು ತಿಳಿದುಕೊಳ್ಳಲು ಮಾಹಿತಿ ಹಕ್ಕು ಕಾಯ್ದೆ ಅಧಿಕಾರ ನೀಡಿದೆ. ಇದರ ಸದ್ಬಳಕೆಯಾಗಬೇಕು. ಯಾವುದೇ ರೀತಿಯ ವೈಯಕ್ತಿಕ ಮಾಹಿತಿಗಳನ್ನು ಕಾಯ್ದೆಯಡಿ ಮೂರನೇ ವ್ಯಕ್ತಿಗೆ ನೀಡಲು ಬರುವುದಿಲ್ಲ. 2005ರಲ್ಲಿ ಕಾಯ್ದೆ ಜಾರಿಯಾಗಿದ್ದು, ಅದಕ್ಕೂ ಮುಂಚಿನ 20 ವರ್ಷ ಅವಧಿಯ ದಾಖಲೆಗಳನ್ನು ಮಾತ್ರ ಕಾಯ್ದೆಯ ಮೂಲಕ ಸಾರ್ವಜನಿಕರು ಪಡೆದುಕೊಳ್ಳಬಹುದು. ನೂರಾರು ವರ್ಷಗಳ ಹಿಂದಿನ ದಾಖಲೆ ನೀಡಲು ಕಾಯ್ದೆಯಲ್ಲಿ ಕಡ್ಡಾಯ ಪಡಿಸಲಾಗಿಲ್ಲ ಎಂದು ಮಾಹಿತಿ ಆಯುಕ್ತ ಎಸ್.ರಾಜಶೇಖರ್ ಸಂವಾದದಲ್ಲಿ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಸಿಇಓ ಎಸ್. ಜೆ.ಸೋಮಶೇಖರ್ ಮಾತನಾಡಿ, ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ಹಾಗೂ ಪಿಡಿಓಗಳಿಗೆ ಮಾಹಿತಿ ಕಾಯ್ದೆ ಕುರಿತು ಕಾರ್ಯಗಾರ ಏರ್ಪಡಿಸಲಾಗುವುದು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಅಧಿಕಾರಿಗಳು ಲಭ್ಯ ಇರುವ ಮಾಹಿತಿಯನ್ನು ಮಾತ್ರ ಸಾರ್ವಜನಿಕರಿಗೆ ನೀಡಬೇಕು. ಪ್ರಥಮ ಮೇಲ್ಮನವಿ ಪ್ರಾಧಿಕಾರ ಅಧಿಕಾರಿಗಳು ನೀಡುವ ಆದೇಶವನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ತಪ್ಪದೇ ಪಾಲಿಸಬೇಕು ಎಂದರು.

ಕಾರ್ಯಗಾರ ಹಾಗೂ ಸಂವಾದಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ರಂಗಸ್ವಾಮಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಹಂಗರವಳ್ಳಿ ಶಾಲೆ ರಾಜ್ಯಕ್ಕೆ ಮಾದರಿ ಶಾಲೆ: ಕೀರ್ತನಾ ಪ್ರಶಂಸೆ

**ಚಿಕ್ಕಮಗಳೂರು :** ಹಂಗರವಳ್ಳಿ ಸರ್ಕಾರಿ ಶಾಲೆ ರಾಜ್ಯಕ್ಕೆ ಮಾದರಿಯಾಗಿದೆ. 13 ಮಕ್ಕಳಿದ್ದು ಮುಚ್ಚುವ ಹಂತಕ್ಕೆ ತಲುಪಿದ್ದ ಶಾಲೆಯಲ್ಲಿ ಈಗ 320 ಮಕ್ಕಳು ವ್ಯಾಸಂಗ ಮಾಡುವ ಹಂತಕ್ಕೆ ಬಂದಿರುವುದರಲ್ಲಿ ಟ್ರಸ್ಟಿನ ಪರಿಶ್ರಮ ಹಾಗೂ ಶಿಕ್ಷಕ ವೃಂದದವರ ಕಾರ್ಯಕ್ಷಮತೆ ಅನನ್ಯ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಚ್.ಎಸ್.ಕೀರ್ತನಾ ಶ್ಲಾಘಿಸಿದರು.

ಚಿಕ್ಕಮಗಳೂರು ತಾಲ್ಲೂಕಿನ ಹಂಗರವಳ್ಳಿಯಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯಲ್ಲಿ ಶ್ರೀ ಉದ್ದಂಡೇಶ್ವರ ಶಿಕ್ಷಣ ಸೇವಾ ಟ್ರಸ್ಟಿನ ವತಿಯಿಂದ ನೀಡಲಾದ ಉಚಿತ ಪಠ್ಯಪುಸ್ತಕ, ನೋಟ್‌ಬುಕ್ ಹಾಗೂ ಸಮವಸ್ತ್ರ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇಚ್ಚಾಶಕ್ತಿ ಇದ್ದರೆ ಏನನ್ನಾದರೂ ಸಾಧಿಸಬಹುದು ಎಂಬುವುದಕ್ಕೆ ಈ ಶಾಲೆಯನ್ನ ದತ್ತು ಪಡೆದು ಯಾವುದೇ ಫಲಾಪೇಕ್ಷೆ ಇಲ್ಲದೆ ಮುನ್ನಡೆಸುತ್ತಿರುವ ಶ್ರೀ ಉದ್ದಂಡೇಶ್ವರ ಶಿಕ್ಷಣ ಸೇವಾ ಟ್ರಸ್ಟ್ ಮೇಲ್ಪಂಕ್ತಿ ಹಾಕಿಕೊಟ್ಟಿದೆ. ಟ್ರಸ್ಟ್‌ನ ಪದಾಧಿಕಾರಿಗಳ ಅರ್ಪಣಾ ಮನೋಭಾವ ಕೂಡ ಪ್ರಶಂಸನೀಯ. ಸರ್ಕಾರದ ವತಿಯಿಂದ ನಾನು ಇವರನ್ನೆಲ್ಲ ಅಭಿನಂದಿಸುವೆ ಎಂದರು.

ಜಿಲ್ಲಾ ಪಂಚಾಯಿತಿಯಿಂದ ಇಂತಹ ಶಾಲೆಗಳನ್ನು ಅಭಿವೃದ್ಧಿಪಡಿಸಲು ಎಲ್ಲಾ ರೀತಿಯ ನೆರವು ನೀಡಲಾಗುವುದು. ಇದೇ ಮಾದರಿಯಲ್ಲಿ ಜಿಲ್ಲೆಯ ಇತರೆ ಶಾಲೆಗಳನ್ನು ಅಭಿವೃದ್ಧಿಪಡಿಸಲು ಸಮುದಾಯ ಮುಂದೆ ಬರಬೇಕು ಎಂದು ಕರೆ ನೀಡಿದರು.

ವಿದ್ಯೆಯೇ ಎಲ್ಲ ಸಾಧನೆಗೂ ದಾರಿ ದೀಪ. ಜಗತ್ತಿನಲ್ಲಿ ವಿದ್ಯೆಗೆ, ಜ್ಞಾನಕ್ಕೆ ಇರುವ ಬೆಲೆ ಬೇರೆ ಯಾವುದಕ್ಕೂ ಇಲ್ಲ. ಆದ್ದರಿಂದ ಮಕ್ಕಳು ಉತ್ತಮ ಶಿಕ್ಷಣ ಪಡೆದು ದೇಶದ ಅಭಿವೃದ್ಧಿಯಲ್ಲಿ ಪಾಲುದಾರರಾಗಬೇಕು. ಮಕ್ಕಳು ತಮ್ಮ ವಿದ್ಯಾರ್ಥಿ ಜೀವನವನ್ನು ವಿದ್ಯಾಭ್ಯಾಸಕ್ಕಾಗಿ ಮುಡುಪಾಗಿಟ್ಟು ನಿರಂತರ ಓದುವಿಕೆಯಿಂದ ತಮ್ಮ ಗುರಿ ಸಾಧಿಸಬೇಕು ಎಂದೂ ಹೇಳಿದರು.

ಕಾರ್ಯಕ್ರಮದಲ್ಲಿ 320 ವಿದ್ಯಾರ್ಥಿಗಳಿಗೆ ಟ್ರಸ್ಟ್ ವತಿಯಿಂದ ನೋಟ್ ಬುಕ್ಸ್, ಸಮವಸ್ತ್ರ, ಪಠ್ಯಪುಸ್ತಕಗಳನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೀರ್ತನಾ ವಿತರಣೆ ಮಾಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಟ್ರಸ್ಟ್ ಅಧ್ಯಕ್ಷರು, ಉಪಾಧ್ಯಕ್ಷರು ಪದಾಧಿಕಾರಿಗಳು, ಎಸ್‌ಡಿಎಂಸಿ ಅಧ್ಯಕ್ಷರು, ಉಪಾಧ್ಯಕ್ಷರು, ಶಿಕ್ಷಕ ವೃಂದದವರು ಹಾಗೂ ಪೋಷಕರು ಭಾಗವಹಿಸಿದ್ದರು.

10ಸಿಕೆಎಂ2: ಹಂಗರವಳ್ಳಿಯಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಉಚಿತ ಪಠ್ಯಪುಸ್ತಕಗಳನ್ನು ಜಿ.ಪಂ. ಸಿಇಒ ಎಚ್.ಎಸ್. ಕೀರ್ತನಾ ವಿತರಿಸಿದರು.

# ತೋಟಗಾರಿಕೆ ಇಲಾಖೆಯಿಂದ ಯಾಂತ್ರೀಕರಣಕ್ಕೆ ಸಹಾಯಧನ

**ಚಿಕ್ಕಮಗಳೂರು, ಜೂ.22:** 2025-26 ನೇ ಸಾಲಿನ ಕೃಷಿ ಯಾಂತ್ರೀಕರಣ ಉಪ ಅಭಿಯಾನ "ಕರ್ನಾಟಕ ರಾಜ್ಯದಲ್ಲಿ ತೋಟಗಾರಿಕೆಯಲ್ಲಿ ಯಾಂತ್ರೀಕರಣ" ಕಾರ್ಯಕ್ರಮದಡಿ ತೋಟಗಾರಿಕೆ ಇಲಾಖೆಯಿಂದ ಅನುಮೋದಿಸಲ್ಪಟ್ಟ ವಿವಿಧ ಸರಬರಾಜು ಸಂಸ್ಥೆಗಳಿಂದ ರೈತರು ಖರೀದಿಸುವ ಯಂತ್ರೋಪಕರಣಗಳಿಗೆ ಸಹಾಯಧನವನ್ನು ನೀಡಲಾಗುತ್ತಿದೆ. ಆಸಕ್ತ ರೈತರು ಹೆಚ್ಚಿನ ಮಾಹಿತಿಗೆ ಈ ಕೆಳಕಂಡ ಮೊಬೈಲ್ ಸಂಖ್ಯೆಗಳಿಗೆ ಸಂಪರ್ಕಿಸಬೇಕಾಗಿ ಕೋರಲಾಗಿದೆ.

# ಜಿಲ್ಲೆಯಲ್ಲಿ ಹೆಚ್ಚಿದ ಮಳೆ: ಮಲೆನಾಡಿನಲ್ಲಿ ಮರಗಳು ಧರೆಗೆ-ಜೀವಭಯದಲ್ಲಿ ಜನತೆ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಸತತವಾಗಿ ಮಳೆ ಸುರಿಯುತ್ತಿರುವುದರಿಂದ ಮಲೆನಾಡಿನಲ್ಲಿ ಮರಗಳು ಧರೆಗುರುಳುತ್ತಿವೆ. ಕಳಸ ತಾಲೂಕಿನ ಸುಂಕಸಾಲೆಯ ಮನೆಯ ಹಿಂಭಾಗದಲ್ಲಿ ಧರೆ ಕುಸಿದಿದ್ದು, ಮೂರು ಕುಟುಂಬಗಳು ಜೀವಭಯದಲ್ಲೇ ದಿನ ದೂಡುತ್ತಿವೆ.

ಲಿಂಗದಹಳ್ಳಿಯ ಕಲ್ಲತ್ತಿಗಿರಿಯಲ್ಲಿ ಭಾರಿ ಮಳೆ-ಗಾಳಿಯಿಂದ ಮರವೊಂದು ಕಾರಿನ ಮೇಲೆ ಬಿದ್ದಿದ್ದು, ವಾಹನ ಜಖಂಗೊಂಡಿದೆ. ಬೇರೆ ಯಾವುದೇ ತೊಂದರೆ ಸಂಭವಿಸಿಲ್ಲ.

ಕಾಫಿನಾಡಲ್ಲಿ ವರುಣನ ಅಬ್ಬರ ಜೋರಾಗಿದ್ದು. ಕಳೆದ ಕೆಲ ದಿನಗಳಿಂದ ಮಳೆರಾಯ ಮಲೆನಾಡನ್ನು ಬಿಟ್ಟೂ ಬಿಡದೆ ಕಾಡತೊಡಗಿದ್ದಾನೆ. ಕಳಸ ತಾಲೂಕಿನ ಸುಂಕಸಾಲೆ ಗ್ರಾಮದಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಮನೆಯ ಹಿಂದಿನ ಧರೆ ಕುಸಿತವಾಗಿದ್ದು. ಮತ್ತಷ್ಟು ಮಳೆ ಜೋರಾದರೆ ಸಂಪೂರ್ಣ ಧರೆ ಕುಸಿತವಾಗುವ ಭೀತಿ ಎದುರಾಗಿದ್ದು. 3 ಕುಟುಂಬಗಳು



ಜೀವಭಯದೊಂದಿಗೆ ಆತಂಕದಲ್ಲೇ ದಿನ ದೂಡುವಂತಾಗಿದೆ.

ಭಾರೀ ಗಾಳಿ-ಮಳೆಯಿಂದ ಬೃಹತ್ ಮರವೊಂದು ಮನೆ ಮೇಲೆ ಬಿದ್ದು, ಮನೆ ಸಂಪೂರ್ಣ ಹಾನಿಗೊಳಗಾಗಿ ಗೃಹೋಪಯೋಗಿ ವಸ್ತುಗಳು ನಾಶವಾಗಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಕಳಸ ತಾಲೂಕು ಮರಸಣಿಗೆ ಗ್ರಾಮದಲ್ಲಿ ನಡೆದಿದೆ.

ಮರ ಬೀಳುವ ಶಬ್ದ ಕೇಳುತ್ತಿದ್ದಂತೆ ಮನೆಯೊಳಗಿದ್ದವರು ತಕ್ಷಣ ಹೊರಬಂದು ಜೀವಾಪಾಯದಿಂದ ಪಾರಾಗಿದ್ದಾರೆ. ಆದರೆ ಮನೆಯಲ್ಲಿದ್ದ ಪ್ರೇಮ ಎಂಬುವರ ಮೇಲೆ ಮರದ ರೆಂಬೆ ಬಿದ್ದ ಪರಿಣಾಮ ಗಾಯಗೊಂಡಿದ್ದಾರೆ.

ಅವರನ್ನು ತಕ್ಷಣವೇ ಆಸ್ಪತ್ರೆಗೆ ದಾಖಲಿಸಲಾಗಿದೆ. ಸ್ಥಳಕ್ಕೆ ತಾಲೂಕು ಅಧಿಕಾರಿಗಳು ಸೇರಿದಂತೆ ಹಾಗೂ ಗ್ರಾಮ ಪಂಚಾಯಿತಿ ಸದಸ್ಯರು ಭೇಟಿನೀಡಿ ಪರಿಶೀಲನೆ ನಡೆಸಿದ್ದಾರೆ. ಹಾನಿಗೊಳಗಾದ ಕುಟುಂಬಕ್ಕೆ ನೆರವು ನೀಡುವ ಭರವಸೆಯನ್ನು ಅಧಿಕಾರಿಗಳು ನೀಡಿದ್ದಾರೆ. ಮಲೆನಾಡಿನಲ್ಲಿ ಮಳೆಯ ಅಬ್ಬರ ಮುಂದುವರಿದಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಅಗತ್ಯ ಎಚ್ಚರಿಕೆ ವಹಿಸುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

ಮಲೆನಾಡಲ್ಲಿ ಮಳೆ ಅಬ್ಬರ ಮುಂದುವರೆದಿದ್ದು, ಜಿಲ್ಲೆಯಲ್ಲಿರುವ ನದಿಗಳು ಮೈದುಂಬಿ ಹರಿಯುತ್ತಿವೆ. ಇತ್ತ ಚಿಕ್ಕಮಗಳೂರು ನಗರ ಸೇರಿದಂತೆ ಬಯಲು ಪ್ರದೇಶದಲ್ಲಿ ಮಳೆ ಸ್ವಲ್ಪ ಕ್ಷೀಣಿಸಿದ್ದು, ಘಟ್ಟ ಪ್ರದೇಶದಲ್ಲಿ ಮಳೆಅಬ್ಬರ ಮುಂದುವರೆದಿದೆ.

ಶೃಂಗೇರಿ ತಾಲೂಕಿನ ಕೆರೆಕಟ್ಟೆ, ಕಳಸ ತಾಲೂಕಿನ ಕುದುರೆಮುಖ ಘಟ್ಟ ಪ್ರದೇಶದಲ್ಲಿ ಜೋರು ಮಳೆಬೀಳುತ್ತಿದೆ. ತುಂಗಾ-ಭದ್ರಾ ನದಿಗಳಿಗೆ ಭಾರೀ ಪ್ರಮಾಣದ ನೀರು ಹರಿಯುತ್ತಿದ್ದು, ನದಿ ಪಾತ್ರದ ಜನರಿಗೆ ಎಚ್ಚರಿಕೆಯಿಂದಿರುವಂತೆ ಜಿಲ್ಲಾಡಳಿತ ಸೂಚಿಸಿದೆ. ನದಿ ಪಾತ್ರದ ಹೊಲಗದ್ದೆ, ತೋಟಗಳಿಗೆ ತೆರಳುವವರು, ದನಕರುಗಳಿಗೆ ನೀರುಣಿಸಲು, ಬಟ್ಟೆ ತೊಳೆಯಲು ಹೋಗದಂತೆ ಎಚ್ಚರಿಕೆ ನೀಡಿದ್ದು, ತಗ್ಗು ಪ್ರದೇಶದಲ್ಲಿ ವಾಸಿಸುವ ಜನರಿಗೂ ಎಚ್ಚರಿಕೆಯ ಸಂದೇಶ ರವಾನಿಸಲಾಗಿದೆ.

# ಈಶಾನ್ಯ ಭಾರತದಲ್ಲಿ ಭಾರೀ ಮಳೆ, 25 ಮಂದಿ ದುರ್ಮರಣ

**ನವದೆಹಲಿ :** ಈಶಾನ್ಯ ಭಾರತದಲ್ಲಿ ಕಳೆದ ಕೆಲವು ದಿನಗಳಿಂದ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಭೂಕುಸಿತ ಮತ್ತು ಪ್ರವಾಹ ಉಂಟಾಗಿ ಕನಿಷ್ಠ 25 ಜನರು ಸಾವನ್ನಪ್ಪಿ ಅನೇಕರು ನಿರಾಶ್ರಿತರಾಗಿದ್ದಾರೆ.

ಅಸ್ಸಾಂನ ರಾಜಧಾನಿ ಗುವಾಹಟಿಯಲ್ಲಿ ಭಾರೀ ಮಳೆ ಸುರಿಯುತ್ತಿದ್ದು, ಮಣ್ಣು ಕುಸಿತದಿಂದ ಹಲವಾರು ಮನೆಗಳು ಸಮಾಧಿಯಾಗಿವೆ. ಇದರಲ್ಲಿ ಒಂದೇ ಕುಟುಂಬದ ಮೂವರು ಸದಸ್ಯರು ಸೇರಿದಂತೆ ಐದು ಮಂದಿ ಸಾವನ್ನಪ್ಪಿದ್ದಾರೆ. ಇಳಿಜಾರುಗಳು ದುರ್ಬಲಗೊಂಡಿವೆ. ಗೋಲಾಘಾಟ್‌ನಲ್ಲಿ ಇಬ್ಬರು ಮತ್ತು ಲಖಿಂಪುರದಲ್ಲಿ ಒಬ್ಬರು ಸೇರಿದಂತೆ ಪ್ರವಾಹವು ಇನ್ನೂ ಮೂರು ಜೀವಗಳನ್ನು ಬಲಿ ತೆಗೆದುಕೊಂಡಿದೆ.

ಚೀನಾದೊಂದಿಗೆ ಗಡಿ ಹಂಚಿಕೊಂಡಿರುವ ನೆರೆಯ ಅರುಣಾಚಲ ಪ್ರದೇಶದಲ್ಲಿ, ಪ್ರವಾಹದ ನೀರಿನ ಹರಿವಿನಲ್ಲಿ



ವಾಹನವೊಂದು ಕೊಚ್ಚಿಹೋಗಿ ಏಳು ಮಂದಿ ಸಾವನ್ನಪ್ಪಿದ್ದಾರೆ. ಪ್ರತ್ಯೇಕ ಘಟನೆಯಲ್ಲಿ, ಇಬ್ಬರು ಮುಳುಗಿ ಸಾವನ್ನಪ್ಪಿದ್ದು, ರಾಜ್ಯದ ಸಾವಿನ ಸಂಖ್ಯೆ 9ಕ್ಕೆ ಏರಿಕೆಯಾಗಿದೆ.ಕಳೆದ 24 ಗಂಟೆಗಳಲ್ಲಿ ಮಿಜೋರಾಂ, ತ್ರಿಪುರ ಮತ್ತು ಮೇಘಾಲಯದಲ್ಲಿ ಎಂಟು ಸಾವುಗಳು ವರದಿಯಾಗಿವೆ. ನಿರಂತರ ಮಳೆಯಿಂದ ಉಂಟಾದ ಹಠಾತ್ ಪ್ರವಾಹ ಮತ್ತು ಭೂಕುಸಿತಗಳಿಂದ ಸಾವುಗಳು ಸಂಭವಿಸಿವೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಮಣಿಪುರದಲ್ಲಿ ಮೂರು ದಿನಗಳಿಂದ ಎಡೆಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ರಾಜಧಾನಿ ಇಂಫಾಲದಲ್ಲಿ ದೈನಂದಿನ ಜೀವನ ಸ್ತಬ್ದಗೊಂಡಿದೆ. ಹಲವಾರು ಭಾಗಗಳಿಂದ ನೀರು ನಿಂತಿದ್ದು, ಪ್ರವಾಹದ ಸಾಧ್ಯತೆ ಎದುರಾಗಿದೆ. ಈ ಕುರಿತು ಅಧಿಕಾರಿಗಳು ಎಚ್ಚರಿಕೆ ನೀಡಿದ್ದು, ಇಂಫಾಲ್ ನದಿಯ ಪ್ರವಾಹ ಪ್ರದೇಶಗಳಲ್ಲಿ ವಾಸಿಸುವ ನಿವಾಸಿಗಳನ್ನು ಸ್ಥಳಾಂತರಿಸುವಂತೆ ತಿಳಿಸಿದ್ದಾರೆ.

ನಿರಂತರ ಮಳೆಯಿಂದಾಗಿ ಉಂಟಾದ ಭೂಕುಸಿತದಿಂದಾಗಿ ಮುಖ್ಯ ರಸ್ತೆ ಸಂಪರ್ಕ ಕಡಿತಗೊಂಡಿದ್ದರಿಂದ ಉತ್ತರ ಸಿಕ್ಕಿಂನ ವಿವಿಧ ಭಾಗಗಳಲ್ಲಿ ಸುಮಾರು 1,500 ಪ್ರವಾಸಿಗರು ಸಿಲುಕಿಕೊಂಡಿದ್ದರು. ಈ ವಾರದ ಆರಂಭದಲ್ಲಿ ಮಂಗನ್ ಜಿಲ್ಲೆಯ ತೀಸ್ತಾ ನದಿಗೆ 11 ಪ್ರವಾಸಿಗರು ಪ್ರಯಾಣಿಸುತ್ತಿದ್ದ ವಾಹನವೊಂದು ಉರುಳಿಬಿದ್ದ ಪರಿಣಾಮ ಒಬ್ಬರು ಸಾವನ್ನಪ್ಪಿದರು, ಇಬ್ಬರು ಗಾಯಗೊಂಡರು ಮತ್ತು ಎಂಟು ಮಂದಿ ನಾಪತ್ತೆಯಾಗಿದ್ದಾರೆ.

ಏತನಧೆ ಭಾರತ ಹವಾಮಾನ ಇಲಾಖೆ (ಐಎಂಡಿ) ಮುಂಬರುವ ದಿನಗಳಲ್ಲಿ ಈ ಪ್ರದೇಶದಾದ್ಯಂತ ಭಾರೀ ಮಳೆಯಾಗುವ ಬಗ್ಗೆ ಎಚ್ಚರಿಕೆ ನೀಡಿದೆ. ಅಸ್ಸಾಂನ ಕೆಲವು ಭಾಗಗಳಿಗೆ ಕೆಂಪು ಮತ್ತು ಕಿತ್ತಳೆ ಎಚ್ಚರಿಕೆಗಳನ್ನು ನೀಡಲಾಗಿದೆ. ಈಶಾನ್ಯ ಪ್ರದೇಶದ ಉಳಿದ ಭಾಗಗಳಿಗೆ ಕಿತ್ತಳೆ ಮತ್ತು ಹಳದಿ ಎಚ್ಚರಿಕೆಗಳನ್ನು ನೀಡಲಾಗಿದೆ.

ಅಸ್ಸಾಂನಲ್ಲಿ ಒಟ್ಟು 17 ಜಿಲ್ಲೆಗಳು ಪ್ರವಾಹ ಮತ್ತು ಭೂಕುಸಿತದಿಂದ ತತ್ತರಿಸಿದ್ದು , 78,000ಕ್ಕೂ ಹೆಚ್ಚು ಜನರು ಬಾಧಿತರಾಗಿದ್ದಾರೆ, 1,200ಕ್ಕೂ ಹೆಚ್ಚು ಜನರು ಐದು ವಿಭಿನ್ನ ಪರಿಹಾರ ಶಿಬಿರಗಳಲ್ಲಿ ಆಶ್ರಯ ಪಡೆದಿದ್ದಾರೆ. ಲಖಿಂಪುರವು ಅತ್ಯಂತ ಹೆಚ್ಚು ಹಾನಿಗೊಳಗಾದ ಜಿಲ್ಲೆಯಾಗಿದ್ದು, 41,600 ಕ್ಕೂ ಹೆಚ್ಚು ಜನರು ಬಾಧಿತರಾಗಿದ್ದಾರೆ.

# ಪ್ರಜಾಪಿತ ಬ್ರಹ್ಮಾಕುಮಾರೀಸ್‌ನಲ್ಲಿ ನಡೆದ "ಯೋಗ ವಿಜ್ಞಾನ ತರಬೇತಿ ಕಾರ್ಯಾಗಾರ"

**ಚಿಕ್ಕಮಗಳೂರು:** ನಗರದ ಬಸವನಹಳ್ಳಿಯಲ್ಲಿರುವ ಪ್ರಜಾಪಿತ ಬ್ರಹ್ಮಾಕುಮಾರೀಸ್ ಈಶ್ವರೀಯ ವಿಶ್ವ ವಿದ್ಯಾಲಯ, ಜ್ಞಾನಪ್ರಕಾಶ ಭವನದಲ್ಲಿ ಜೂ.17 ರಂದು ಮಂಗಳವಾರ ಬೆಳಗ್ಗೆ 6 ರಿಂದ ಸಂಜೆ 7 30ರವರೆಗೆ "ಯೋಗ ವಿಜ್ಞಾನ ತರಬೇತಿ ಕಾರ್ಯಾಗಾರ" (Master Trainer programme and Science of Yoga Workshop) ದಲ್ಲಿ ವಿಶೇಷ ಆರಕ್ಷಕ ಸಿಬ್ಬಂದಿಗಳಿಗೆ ತರಬೇತಿ ನೀಡಲಾಯಿತು. ಮಾನ್ಯ ಪೊಲೀಸ್ ವರಿಷ್ಠಾಧಿಕಾರಿಗಳು ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಆರಕ್ಷಕ ಠಾಣೆಯಿಂದ 40 ಪೊಲೀಸರನ್ನು ಆದೇಶ ನೀಡಿ ಬ್ರಹ್ಮಾಕುಮಾರೀಸ್ ಸಂಸ್ಥೆಗೆ ಕಳುಹಿಸಿದ್ದರು. ರಾಜಯೋಗಿನಿ ಬ್ರಹ್ಮಾಕುಮಾರಿ ಭಾಗ್ಯಕ್ಕರವರು ಪೊಲೀಸ್ ವೃತ್ತಿಯಲ್ಲಿ ಒತ್ತಡ ಮುಕ್ತರಾಗಲು ರಾಜಯೋಗದ ಮಹತ್ವದ ಬಗ್ಗೆ ಮಾಹಿತಿ ನೀಡಿದರು.

ಆಧ್ಯಾತ್ಮಿಕ ಜ್ಞಾನ ಹಾಗೂ



ರಾಜಯೋಗದಿಂದ ಜೀವನ ಸುಖ-ಶಾಂತಮಯವಾಗುವುದು ಎಂದು ತಿಳಿಸಿದರು. ಶಿಬಿರಾರ್ಥಿಗಳಿಗೆ ಡಾ. ಭಾಸ್ಕರ್‌ರವರು ನುರಿತ ಚಿಕಿತ್ಸಕರು ಜಲತ್ರಾಟಕ, ವಾಟರ್‌ಥೆರಪಿ, ಐಸ್‌ಥೆರಪಿ, ಡೆಂಟಲ್ ಥೆರಪಿ ಹಾಗೂ ವಿವಿಧ ಥೆರಪಿ ಚಿಕಿತ್ಸೆಗಳ ಮೂಲಕ ಶಾರೀರಿಕ-ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳುವ ವಿಧಾನವನ್ನು ತಿಳಿಸುವುದರ ಜೊತೆ ಚಿಕಿತ್ಸೆ ನೀಡಿದರು.

ಎಲ್ಲಾ ಶಿಬಿರಾರ್ಥಿಗಳು ಇದೊಂದು ಸಮರ್ಥ ಹಾಗೂ ಬಹಳ ಉಪಯುಕ್ತವಾದ ಶಿಬಿರ, ಅನೇಕ ವಿಚಾರಗಳ ಅನುಭವವನ್ನು ಪಡೆದೆವು ಎಂದು ಅಭಿಪ್ರಾಯ ತಿಳಿಸಿದ್ದಾರೆ.

ಹಾಗೇ ಮುಂದಿನ ದಿನಗಳಲ್ಲಿ ಇಂತಹ ಶಿಬಿರಗಳನ್ನು ಒಂದು ವಾರ ಅಥವಾ 21 ದಿನಗಳು ಮಾಡಬೇಕೆಂದು ವಿನಂತಿಸಿಕೊಂಡಿದ್ದಾರೆ. ಬ್ರಹ್ಮಾಕುಮಾರೀಸ್ ಸಂಸ್ಥೆಯಿಂದ 36 ಶಿಬಿರಾರ್ಥಿಗಳಿಗೆ ಪ್ರಶಸ್ತಿಪತ್ರ ನೀಡಲಾಯಿತು.

## ಅಸಹಾಯಕರ ರಕ್ಷಣೆಯೇ ಪೊಲೀಸ್ ಕರ್ತವ್ಯ

# ಬಲವಂತದಿಂದ ಹೆದರಿಸಿ, ಪಾನಿಪುರಿ ತಿಂದು, ಹಣ ಕೊಡದೆ ಹೋಗುವವರನ್ನು ಪೊಲೀಸ್ ನಿಯಂತ್ರಿಸಬೇಕು

**ಚಿತ್ರದುರ್ಗ :** ಚಿತ್ರದುರ್ಗದ ಸರ್ಕಾರಿ ವಿಜ್ಞಾನ ಕಾಲೇಜಿನ ಸುತ್ತಮುತ್ತ ಹೊರರಾಜ್ಯದಿಂದ ಬಂದಂತವರು, ಬಿಹಾರದಿಂದ ಬಂದಂತವರು, ಸಣ್ಣದಾಗಿ, ಸ್ವಂತವಾಗಿ ಪಾನಿಪುರಿ ಮಾರಿಕೊಂಡು ಜೀವನ ಮಾಡುತ್ತಿದ್ದವರಿಗೆ, ಬಲವಂತವಾಗಿ ಹೆದರಿಸಿ, ತಿಂಗಳಿಗೆ ನಾಲ್ಕೈದು ಬಾರಿ ಪಾನಿಪುರಿ ತಿಂದು, ಹಣ ಕೊಡದಲೆ ಹೋಗುವವರನ್ನ ಪೊಲೀಸ್ ಇಲಾಖೆಯ ನಿಯಂತ್ರಿಸಬೇಕು, ಕಷ್ಟಪಟ್ಟು ದುಡಿದು ಜೀವನ ನಿರ್ವಹಿಸುತ್ತಿರುವಂತಹ ಅಸಹಾಯಕ ಜನರನ್ನು, ಸ್ಥಳೀಯ ಜನರಲ್ಲಿ ಕೆಲವರು, ಹೆದರಿಸಿ, ಬೆದರಿಸಿ, ಗುಂಡಾ ವರ್ತನೆಯಿಂದ ಪಾನಿಪುರಿ ತಿಂದು, ಹಣ ನೀಡದಲೇ, ತಿಂಗಳಿಗೆ ನಾಲ್ಕೈದು ಬಾರಿ ಬಂದು, ಇಂತಹ ಜನರನ್ನ ಗೋಳುಯ್ದುಕೊಳ್ಳುವುದನ್ನು, ಸತಾಯಿಸುವುದನ್ನು, ಮಾಡುತ್ತಿರುವುದನ್ನು ಪೊಲೀಸ್ ಇಲಾಖೆ ಗಂಭೀರವಾಗಿ ತೆಗೆದುಕೊಂಡು, ಅವರನ್ನು ನಿಯಂತ್ರಿಸಲು ಮತ್ತು ಕಾನೂನು ಕ್ರಮಗಳನ್ನು ಜರುಗಿಸಿ, ಸಮಾಜವನ್ನು ಸುಸ್ಥಿತಿಯಲ್ಲಿ ಇಡಲು ಪ್ರಯತ್ನಿಸಬೇಕೆಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ವಿನಂತಿಸಿಕೊಂಡಿದ್ದಾರೆ.

ಅವರು ಸರ್ಕಾರಿ ವಿಜ್ಞಾನ ಕಾಲೇಜಿನ ಸುತ್ತಮುತ್ತ ರಸ್ತೆಗಳಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ, ಪಾನಿಪುರಿ, ಗೋಲ್ ಗುಪ್ಪಗಳನ್ನು, ಮಾಡುತ್ತಿರುವಂತಹ ಹೊರ ರಾಜ್ಯದ ವ್ಯಾಪಾರಸ್ಥರಿಗೆ, ಸ್ಥಳೀಯವಾಗಿ ಕೆಲವೊಂದಿಷ್ಟು ವ್ಯಕ್ತಿಗಳು ಬಂದು, ಬಲವಂತದಿಂದ ಪಾನಿಪುರಿ ತಿಂದು, ಹಣ ಕೊಡದಲೇ, ವಾರಕ್ಕೊಮ್ಮೆ ಇದೇ ರೀತಿ ಮಾಡುತ್ತಿರುವುದನ್ನು ಪೊಲೀಸ್ ಗಮನಕ್ಕೆ ತಂದರು ಸಹ ಯಾವುದೇ, ಕಠಿಣ ಕ್ರಮ ಜರುಗಿಸಿಲ್ಲ ಎಂದು ನೊಂದು ನುಡಿದವರಿಗೆ ಸಮಾಧಾನ ಮಾಡುತ್ತಾ ಮಾತನಾಡುತ್ತಿದ್ದರು.

ಹೊರ ರಾಜದಿಂದ ಬಂದಂತ ಅಸಹಾಯಕ ಏಕಾಂಗಿ ಜನರನ್ನ, ಸ್ಥಳೀಯ ಜನರು ಶೋಷಣೆ ಮಾಡುವುದನ್ನು ತಡೆಯಲು ಪೊಲೀಸ್ ಇಲಾಖೆ ಶ್ರಮಾವಹಿಸಬೇಕು, ಯಾವುದೇ ಅಸಹಾಯಕ ವ್ಯಕ್ತಿಯನ್ನು ಶೋಷಣೆ ಮಾಡದೇ ಸಮಾಜದಲ್ಲಿ ಬದುಕಲು ಹಕ್ಕನ್ನ ಸಂವಿಧಾನ ನೀಡಿರುವುದರಿಂದ, ಅಂಥವರ ರಕ್ಷಣೆ ಮಾಡುವುದೇ ಪೊಲೀಸ್ ಇಲಾಖೆಯ ಕರ್ತವ್ಯವಾಗುತ್ತದೆ. ಅವರು ನೊಂದು, ಬೆಂದು, ಶಾಪ ಹಾಕುತ್ತ, ತಾವು ದುಡಿದ ಸಂಪಾದನೆಯಲ್ಲಿ ಕೆಲವೊಂದಿಷ್ಟು ಭಾಗವನ್ನ ಸ್ಥಳೀಯರಿಗೆ ಉಚಿತವಾಗಿ



ನೀಡುವುದರಿಂದ, ಅವರ ಜೀವನ ಸಂಕಷ್ಟಕ್ಕೆ ಬಂದು ನಿಲ್ಲುತ್ತದೆ, ಆದ್ದರಿಂದ ಸ್ಥಳೀಯ ಮುಖಂಡರು ಸಹ ಇಂತಹ ಪುಂಡಾಟಿಕೆ ಮಾಡುವ ಜನರನ್ನ ನಿಯಂತ್ರಿಸಿ, ಅವರಿಗೆ ತಿಳುವಳಿಕೆ ನೀಡಿ, ಬುದ್ಧಿವಾದ ಹೇಳಿ, ಬಡವರಿಂದ ವಸ್ತುಗಳನ್ನು ವಸೂಲಿ ಮಾಡುವುದು, ಪಾನಿಪುರಿ ತಿಂದು ಹಣ ನೀಡದೆ ಹೋಗುವುದು, ಇಂಥವುಗಳನ್ನು ಸಹ ಸರಿಪಡಿಸುವಂತಹ ನಿಟ್ಟಿನಲ್ಲಿ ಸಮಾಜದಲ್ಲಿ ಕೆಲಸವಾಗಬೇಕು ಎಂದರು.

ಮಧ್ಯಾಹ್ನ ಮೂರರಿಂದ ನಾಲ್ಕರವರೆಗೆ ಯಾರು ಇಲ್ಲದ ಸಮಯದಲ್ಲಿ, ಆಟೋರಿಕ್ಷದಲ್ಲಿ ಬಂದು ಮೂರು ನಾಲ್ಕು ಜನ, ವಾರಕ್ಕೆ ಒಂದು ಸಾರಿ, ಎರಡು ಸಾರಿ ನಮ್ಮಲ್ಲಿ ಪಾನಿಪುರಿ ತಿಂದು, ಹಣ ನೀಡದಲೆ ಹಾಗೆ ಹೋಗುತ್ತಾರೆ, ಅವರು ಮದ್ಯಪಾನ ವ್ಯಸನಿಗಳು ಇರಬಹುದು ಅಥವಾ ಮದ್ಯಪಾನ ಕುಡಿದು ಬಂದು ನಮ್ಮ ಹತ್ತಿರ ಪಾನಿಪುರಿ ತಿಂದು, ಹಣ ಕೊಡದೆಲೆ ಹೋಗುವವರು, ಈ ರೀತಿ ಒಂದು ಗುಂಪು ನಮಗೆ ತೊಂದರೆ ಕೊಡುತ್ತಿದೆ, ಇದರ ವಿರುದ್ಧ ನಾವು ಪೊಲೀಸ್ ಇಲಾಖೆಗೆ ದೂರು ನೀಡಿದರು ಸಹ ಯಾವುದೇ ಕ್ರಮ ಜರುಗಿಸಿಲ್ಲ ಎಂದು ಬಿಹಾರದಿಂದ ಬಂದಂತಹ ಒಬ್ಬ ವ್ಯಕ್ತಿ ಅಸಹಾಯಕತೆಯನ್ನ ತೋಡಿಕೊಂಡಿದ್ದಾನೆ ಎಂದರು.

ಸಾಮಾನ್ಯವಾಗಿ ಹೊರ ರಾಜ್ಯದಿಂದ ಬಂದಂತವರು ಸ್ಥಳೀಯ ಜನರ ಸಹಕಾರ ಮತ್ತು ಬೆಂಬಲವಿಲ್ಲದೆ ಏಕಾಂಗಿಯಾಗಿ ಬದುಕು ಸಾಗಿಸುತ್ತಿರುತ್ತಾರೆ, ಅಂತವರನ್ನು ಹೆದರಿಸಿ, ಬೆದರಿಸಿ, ಹಣ ವಸೂಲಿ ಮಾಡುವುದು, ತಿಂಡಿ ವಸೂಲಿ ಮಾಡುವುದು, ಮಾಡುವ ಜನರು ಸಾಮಾನ್ಯವಾಗಿ ಎಲ್ಲಾ ಊರುಗಳಲ್ಲಿ ದೊರೆಯುತ್ತಾರೆ. ಚಿಕ್ಕ ಊರುಗಳಾದ ಚಿತ್ರದುರ್ಗದಲ್ಲೂ ಸಹ ಅಂತಹ ಜನರ ಸಂಖ್ಯೆ ಇದೆ ಎಂಬುದೇ ಆಶ್ಚರ್ಯವಾಗುತ್ತದೆ, ಅಂತಹ ವ್ಯಕ್ತಿಗಳ ಮನಃಪರಿವರ್ತನೆ ಮಾಡಲು ಸ್ಥಳೀಯ ಜನರು ಸ್ವಲ್ಪ ಮಟ್ಟಿಗೆ ಜವಾಬ್ದಾರಿಯನ್ನ ತೆಗೆದುಕೊಂಡು, ಅಸಹಾಯಕ ಜನರ ರಕ್ಷಣೆಗೆ ನಿಲ್ಲಬೇಕು ಎಂದು ವಿನಂತಿಸಿಕೊಂಡಿದ್ದಾರೆ.

ಸಣ್ಣ ಸಣ್ಣದಾಗಿ, ಬಲವಂತ ಮಾಡುವುದು ಹೆದರಿಸುವುದು, ಬೆದರಿಸುವುದು ಇವು ಬೆಳೆಯುತ್ತಾ ಬೆಳೆಯುತ್ತ ದೊಡ್ಡವಾಗಿ, ಸಮಾಜಘಾತಕ ಶಕ್ತಿಗಳಾಗಿ ನಿಲ್ಲಬಹುದು, ಈಗ ಸಣ್ಣದರಲ್ಲೇ ಇವುಗಳನ್ನು ಸರಿಪಡಿಸಿ, ಒಳ್ಳೆಯ ಸಮಾಜವನ್ನು ನಿರ್ಮಿಸುವತ್ತ ಸಾರ್ವಜನಿಕರು ಮತ್ತು ಪೊಲೀಸ್ ಇಲಾಖೆ ಒಟ್ಟಿಗೆ ಕೆಲಸ ಮಾಡಿದರೆ ಮಾತ್ರ ಸಾಧ್ಯವಾಗುತ್ತದೆ. ಸಾಮಾನ್ಯವಾಗಿ ನಾವು ತುಂಬಾ ಹಣವಂತರನ್ನು, ಬಲಿಷ್ಠರನ್ನ, ಅನ್ಯಾಯ ಮಾರ್ಗದಲ್ಲಿ ಹಣ ಸಂಪಾದನೆ ಮಾಡಿದವರನ್ನು ಹೆದರಿಸಿ, ಬೆದರಿಸಿ ಹಣ ವಸೂಲಿ ಮಾಡುವುದನ್ನು ಸಾಮಾನ್ಯವಾಗಿ ಸುದ್ದಿ ಪತ್ರಿಕೆಗಳಲ್ಲಿ ನೋಡುತ್ತಿರುತ್ತೇವೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**